**ಸಂಪುಟ:** 05 **ಸಂಚಿಕೆ:** 138 **ಪುಟಗಳು:** 08 **ಗುರುವಾರ** 31 ಜುಲೈ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಂದು ಒಳ್ಳೆಯ ಪುಸ್ತಕ ನೂರು ಉತ್ತಮ ಸ್ನೇಹಿತರಿಗೆ ಸಮ. ಆದರೆ, ಒಬ್ಬ ಒಳ್ಳೆಯ ಸ್ನೇಹಿತ ಒಂದು ಗ್ರಂಥಾಲಯಕ್ಕೆ ಸಮಾನ.

# ಬೆಂಗಳೂರು - ಚೆನ್ನೈ ಎಕ್ಸ್‌ಪ್ರೆಸ್‌ವೇ ಶುಲ್ಕ ಕೇಳಿ ವಾಹನ ಸವಾರರು ಸುಸ್ತು!

## ಕೇವಲ 71 ಕಿ.ಮೀ. ಸಂಚಾರಕ್ಕೆ ಕನಿಷ್ಠ 185 ರೂ., ಗರಿಷ್ಠ 635 ರೂ. ಟೋಲ್ ನಿಗದಿ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು - ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ ಸಂಚರಿಸುತ್ತಿದ್ದ ವಾಹನ ಸವಾರರಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಟೋಲ್ ಬೆಲೆಯ ಶಾಕ್ ನೀಡಿದೆ. ಕಳೆದ 7 ತಿಂಗಳಿನಿಂದ ಈ ರಸ್ತೆಯಲ್ಲಿ ಉಚಿತವಾಗಿ ಸಂಚರಿಸುತ್ತಿದ್ದ ವಾಹನ ಸವಾರರು ಇದೀಗ ಶುಲ್ಕ ತೆರಬೇಕಿದೆ.

ಕರ್ನಾಟಕ, ಆಂಧ್ರ ಪ್ರದೇಶ, ತಮಿಳುನಾಡಲ್ಲಿ ಹಾದು ಹೋಗುವ ಈ ಎಕ್ಸ್‌ಪ್ರೆಸ್‌ವೇ ಕಾರಿಡಾರ್ ಇನ್ನೂ ಉದ್ಘಾಟನೆ ಆಗಿಲ್ಲ. ಆದರೆ ಅದಕ್ಕೂ ಮೊದಲೇ ವಾಹನಗಳ ಸಂಚಾರಕ್ಕೆ ಟೋಲ್ ಶುಲ್ಕವನ್ನು ನಿಗದಿಪಡಿಸಲಾಗಿದೆ. ಇಷ್ಟು ದಿನ ಉಚಿತವಾಗಿ ಓಡಾಡುತ್ತಿದ್ದವರು ಈಗ ಟೋಲ್ ಕಟ್ಟಿ ಎಕ್ಸ್‌ಪ್ರೆಸ್‌ವೇನಲ್ಲಿ ಸಂಚರಿಸಬೇಕಾಗಿದೆ. ಈ ಬಗ್ಗೆ ಶೀಘ್ರದಲ್ಲೇ ಅಧಿಸೂಚನೆ ಹೊರಬೀಳಲಿದೆ.

ಬೆಂಗಳೂರು ಹೊರವಲಯದ ಹೊಸಕೋಟೆ ಸಮೀಪದ ಹೆಡಗಿನಬೆಲೆ ಟೋಲ್ ಪ್ಲಾಜಾದಿಂದ ಕೆಜಿಎಫ್‌ನ ಸುಂದರಪಾಳ್ಯ ಟೋಲ್ ಪ್ಲಾಜಾದವರೆಗೆ ಟೋಲ್ ಶುಲ್ಕವನ್ನು ನಿಗದಿಪಡಿಸಲಾಗಿದ್ದು, 71 ಕಿ.ಮೀ. ಸಂಚಾರಕ್ಕೆ 185 ರೂ.ಗೂ ಹೆಚ್ಚು ಟೋಲ್ ಅನ್ನು ಕಟ್ಟಬೇಕಿದೆ. ಅದೇ ದಿನ ವಾಪಸ್ ಬರುವುದಾದರೆ 275 ರೂ. ಪಾವತಿಸಬೇಕು.



ಕೆಜಿಎಫ್‌ನ ಸುಂದರಪಾಳ್ಯ ಟೋಲ್ ಪ್ಲಾಜಾದಿಂದ ಹೊಸಕೋಟೆಯ ಹೆಡಗಿನಬೆಲೆ ಟೋಲ್ ಕಡೆ ಬರುವಾಗ ಸ್ವಲ್ಪ ಹೆಚ್ಚು ಶುಲ್ಕವಿದ್ದು, ಏಕಮುಖ ಸಂಚಾರಕ್ಕೆ 190 ರೂ., ಮರು ಸಂಚಾರಕ್ಕೆ 280 ರೂ. ಶುಲ್ಕ ಇರಲಿದೆ. ತಿಂಗಳ ಪಾಸ್ ಅನ್ನು ಕೂಡ ಇಲ್ಲಿ ಪರಿಚಯಿಸಲಾಗಿದ್ದು, 50 ಟ್ರಿಪ್ ಏಕಮುಖ ಸಂಚಾರಕ್ಕೆ 6,105 ರೂ. ಶುಲ್ಕವಿದೆ.

**ಕಾರಿಡಾರ್ ಇನ್ನೂ ಉದ್ಘಾಟನೆ ಆಗಿಲ್ಲ**

ಸದ್ಯ ಈ ರಸ್ತೆಯಲ್ಲಿ ಕಾರು, ಜೀಪು, ಮಿನಿ ಬಸ್, ಬಸ್, ಲಾರಿಗಳ ಪ್ರವೇಶಕ್ಕೆ ಮಾತ್ರ ಅವಕಾಶವಿದ್ದು, ದ್ವಿಚಕ್ರ ವಾಹನ, ಟ್ರ್ಯಾಕ್ಟರ್ ಹಾಗೂ ಆಟೋಗಳ ಸಂಚಾರಕ್ಕೆ ನಿರ್ಬಂಧ ಹೇರಲಾಗಿದೆ.

ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ ಕಾರಿಡಾರ್‌ನ ಕರ್ನಾಟಕ ವ್ಯಾಪ್ತಿಯಲ್ಲಿ ಹೊಸಕೋಟೆ ಸಮೀಪ ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿ ಹೆಡಗಿನಬೆಲೆಯಲ್ಲಿ ಟೋಲ್ ಪ್ಲಾಜಾ ಇದೆ. ಇದನ್ನು ಹೊರತುಪಡಿಸಿ ಕೆಜಿಎಫ್‌ನ ಬೆಮೆಲ್ ನಗರ ಬಳಿಯ ಕೃಷ್ಣಾವರಂನಲ್ಲಿ ಒಂದು ಟೋಲ್ ಪ್ಲಾಜಾ ಇದೆ. ಇನ್ನು ಕೊನೆಯದಾಗಿ ಕೆಜಿಎಫ್ ತಾಲ್ಲೂಕಿನ ಗಡಿ ಸುಂದರಪಾಳ್ಯದಲ್ಲೊಂದು ಟೋಲ್ ಪ್ಲಾಜಾ ಇದೆ. ಹೊಸಕೋಟೆಯಿಂದ ಇದೇ ರಸ್ತೆಯಲ್ಲಿ ಮಾಲೂರು ಕಡೆಗೆ ಪ್ರಯಾಣಿಸಬೇಕಾದರೆ ಅಗ್ರಹಾರ ಬಳಿ ಒಂದು ಟೋಲ್ ಪ್ಲಾಜಾ ಸಿಗುತ್ತದೆ. ಹೊಸಕೋಟೆಯಿಂದ ಕೆಜಿಎಫ್‌ಗೆ ತೆರಳೋ ವಾಹನಗಳನ್ನು ಹೆಡಗಿನಬೆಲೆ ಟೋಲ್ ಪ್ಲಾಜಾದಲ್ಲಿ ಸ್ಕ್ಯಾನ್ ಮಾಡಲಾಗುತ್ತದೆ. ಕಾರು, ಜೀಪು ಚಾಲಕರು ಕೃಷ್ಣಾವರಂ ಟೋಲ್ ದಾಟಬೇಕಾದರೆ 155 ರೂ., ಸುಂದರಪಾಳ್ಯದ ಟೋಲ್ ಪ್ಲಾಜಾ ದಾಟಬೇಕಾದರೆ 185 ರೂ. ಟೋಲ್ ಅನ್ನು ಕಟ್ಟಬೇಕಾಗುತ್ತದೆ. ಅದೇ ಮಾಲೂರು ಕಡೆಗೆ ಪ್ರಯಾಣಿಸುವವರು ಅಗ್ರಹಾರ ಟೋಲ್ ಪ್ಲಾಜಾದಲ್ಲಿ 65 ರೂ. ಟೋಲ್ ಅನ್ನು ಪಾವತಿಸಬೇಕು.

## ಓಲಾ, ಊಬರ್ ರೀತಿ ಆಂಬುಲೆನ್ಸ್ ಕೂಡ ಬುಕ್ ಮಾಡಬಹುದು!

• **ಉದಯವಾಹಿನಿ, ಬೆಂಗಳೂರು**



ಕರ್ನಾಟಕ ರಾಜ್ಯದಲ್ಲಿ ಅಂಬುಲೆನ್ಸ್ ವೆಹಿಕಲ್ ಸೇವೆಯನ್ನು ಕರ್ನಾಟಕ ಪ್ರೈವೇಟ್ ಮೆಡಿಕಲ್ ಎಸ್ಟಾಬ್ಲಿಷ್ ಮೆಂಟ್ಸ್ (ಕೆಪಿಎಂಎ) ಕಾಯ್ದೆಯಡಿ ತರಲು ನಿರ್ಧರಿಸಲಾಗಿದೆ. ಅಂಬುಲೆನ್ಸ್ ಹೇಗಿರಬೇಕು, ಎಷ್ಟು ಶುಲ್ಕ ಪಡೆಯಬೇಕು ಎನ್ನುವ ಬಗ್ಗೆ ಮಾನದಂಡ ರೂಪಿಸಲಾಗುತ್ತಿದ್ದು, ಅದನ್ನು ಬರುವ ಅಧಿವೇಶದಲ್ಲಿ ಮಂಡಿಸಲಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ತಿಳಿಸಿದರು. ಇನ್ನು ಮುಂದೆ ಮೊಬೈಲ್ ಆರೋಗ್ಯ ಘಟಕ ಮತ್ತು ಅಂಬುಲೆನ್ಸ್‌ಗೆ ಕೆಪಿಎಂಎ ಅನುಮತಿ ಬೇಕಾಗುತ್ತದೆ. ಅಂಬುಲೆನ್ಸ್‌ನಲ್ಲಿ ಏನೇನಿರಬೇಕು, ಹೇಗಿರಬೇಕು, ದರ ಎಷ್ಟಿರಬೇಕು ಎಲ್ಲವನ್ನು ಕಾನೂನು ಅಡಿ ತರುತ್ತಿದ್ದೇವೆ. ಅಲ್ಲದೆ, ಮುಂದೆ ಅಂಬುಲೆನ್ಸ್ ಸೇವೆಯನ್ನು ಓಲಾ, ಊಬರ್ ಆಪ್ ರೀತಿಯಲ್ಲಿ ಆಯ್ಕೆ ಮಾಡಿಕೊಳ್ಳುವ ಪಾರದರ್ಶಕತೆಯನ್ನು ತರುತ್ತಿದ್ದೇವೆ. ಅಂದರೆ, ಅಂಬುಲೆನ್ಸ್ ಸೇವೆಯಲ್ಲಿ ಮೊದಲೇ ದರ ನಿಗದಿಯಾಗಿರುತ್ತದೆ. ಬೇಕಾಬಿಟ್ಟಿ ಹಣ ಪಡೆಯುವುದು ತಪ್ಪಿಸಲು ಈ ರೀತಿಯ ವ್ಯವಸ್ಥೆ ತರಲಾಗುತ್ತಿದೆ ಎಂದರು.

## ಅದ್ಯಾವ ಮುಖ ಇಟ್ಟುಕೊಂಡು ಕರ್ನಾಟಕಕ್ಕೆ ಬರುತ್ತಿದ್ದೀರಿ?

• **ಉದಯವಾಹಿನಿ, ಬೆಂಗಳೂರು**

ಲೋಕಸಭೆ ಚುನಾವಣೆಯಲ್ಲಿ ಮತ ಕಳ್ಳತನ ನಡೆದಿದೆ ಎಂದು ಆರೋಪ ಮಾಡಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆ. 4ರಂದು ಮಹದೇವಪುರ ವಿಧಾನಸಭಾ ಕ್ಷೇತ್ರದಿಂದ ಶೇಷಾದ್ರಿ ರಸ್ತೆಯಲ್ಲಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯವರೆಗೆ ಪಾದಯಾತ್ರೆ ನಡೆಸಲು ನಿರ್ಧರಿಸಿದ್ದಾರೆ.

ಈ ಬಗ್ಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಅವರು ವ್ಯಂಗ್ಯವಾಡಿದ್ದು, ಅದ್ಯಾವ ಮುಖ ಇಟ್ಟುಕೊಂಡು ಕರ್ನಾಟಕಕ್ಕೆ ಬರುತ್ತಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ಕೈಲಾಗದವನು ಮೈಪರಚಿಕೊಂಡ ಎಂಬಂತೆ ಕೈಲಾಗದ ರಾಹುಲ್ ಗಾಂಧಿ ಚುನಾವಣಾ ಪ್ರಕ್ರಿಯೆ ಬಗ್ಗೆ ಕ್ಯಾತೆ ತೆಗೆಯುತ್ತಿದ್ದಾರೆ' ಎಂದು ಕಿಡಿಕಾರಿದ್ದಾರೆ. ಕಾಂಗ್ರೆಸ್ ಪಕ್ಷವನ್ನು ಸಂಪೂರ್ಣವಾಗಿ ಮುಳುಗಿಸಿ ಸೋತು ಸುಣ್ಣವಾಗಿರುವ ಬಾಲಕ ಬುದ್ಧಿ ರಾಹುಲ್ ಗಾಂಧಿ ಎಂದು ವ್ಯಂಗ್ಯವಾಡಿದ್ದಾರೆ.

## ಕರ್ನಾಟಕದಲ್ಲಿ ರೈಲ್ವೆ ಯೋಜನೆಗಳಿಗೆ 8,280 ಎಕರೆ ಭೂಸ್ವಾಧೀನ ಬಾಕಿ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ರೈಲ್ವೆ ಯೋಜನೆಗಳಿಗೆ 8,280 ಎಕರೆ ಭೂಸ್ವಾಧೀನ ಬಾಕಿ ಇದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಲೋಕಸಭೆಗೆ ತಿಳಿಸಿದರು. ಪ್ರಶೋತ್ತರ ಅವಧಿಯಲ್ಲಿ ರಾಯಚೂರು ಸಂಸದ ಜಿ.ಕುಮಾರ ನಾಯಕ ಕೇಳಿದ ಪ್ರಶ್ನೆಗೆ ಉತ್ತರ ನೀಡಿದ ಅವರು, ನಾಲ್ಕು ಪ್ರಮುಖ ಯೋಜನೆಗಳಿಗೆ ಒಂದೇ ಒಂದು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿಲ್ಲ ಎಂದರು.

ಕರ್ನಾಟಕ ರಾಜ್ಯದಲ್ಲಿ 25 ರೈಲ್ವೆ (ಹೊಸ ಹಾಗೂ ಜೋಡಿ ಹಳಿ) ಯೋಜನೆಗಳು ಅನುಷ್ಠಾನಗೊಳ್ಳುತ್ತಿವೆ. ಈ ಯೋಜನೆಗಳ ಒಟ್ಟು ಉದ್ದ 3,264 ಕಿ.ಮೀ. ಈ ತನಕ ಪೂರ್ಣಗೊಂಡಿರುವ 1,394 ಕಿ.ಮೀ. ಪೂರ್ಣಗೊಂಡಿದೆ. ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಿರುವುದರಿಂದ ಯೋಜನೆಗಳ ಅನುಷ್ಠಾನ ತಡವಾಗಿದೆ. ಶೇ 37ರಷ್ಟು ಜಮೀನು ಸ್ವಾಧೀನಪಡಿಸಿಕೊಳ್ಳಬೇಕಿದೆ ಎಂದು ಅವರು ಮಾಹಿತಿ ನೀಡಿದರು. ಹೆಜ್ಜಾಲ-ಚಾಮರಾಜನಗರ ನಡುವೆ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈ ಯೋಜನೆಗೆ ರಾಜ್ಯ ಸರ್ಕಾರ ಶೇ 50ರಷ್ಟು ಅನುದಾನ ನೀಡಬೇಕಿತ್ತು. ಆದಾಗ್ಯೂ, ಕರ್ನಾಟಕ ಸರ್ಕಾರ ಇದೀಗ ನಿಲುವು ಬದಲಿಸಿದ್ದರಿಂದ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲು ಆಗುತ್ತಿಲ್ಲ ಎಂದು ವೈಷ್ಣವ್ ತಿಳಿಸಿದರು.

## ಕೇಂದ್ರದಿಂದ ಪೂರೈಕೆ ಕೊರತೆಯಿಂದ ರಾಜ್ಯದಲ್ಲಿ ರಸಗೊಬ್ಬರ ಸಮಸ್ಯೆ

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ಸರ್ಕಾರದಿಂದ ಯೂರಿಯಾ ಪೂರೈಕೆಯಲ್ಲಿ ಕೊರತೆಯಾದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ವಿತರಣೆಯಲ್ಲಿ ಸಮಸ್ಯೆಯಾಗಿದ್ದು, ಅದನ್ನು ನಿಭಾಯಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಗೊಂದಲಗಳು ಬಗೆಹರಿಯಲಿವೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ 3 ಮುಂಗಾರು ಹಂಗಾಮಿನಲ್ಲಿ ಇದೇ ಸರ್ಕಾರ ಅಧಿಕಾರದಲ್ಲಿದೆ. ನಾನೇ ಕೃಷಿ ಸಚಿವನಾಗಿ ಇದ್ದೇನೆ. ಈವರೆಗೆ ಉಂಟಾಗದ ಸಮಸ್ಯೆ ಈಗೇಕೆ ಎಂಬುದನ್ನು ವಿಶ್ಲೇಷಿಸಬೇಕಾಗಿದೆ ಎಂದು ಹೇಳಿದ್ದಾರೆ. ರಾಜ್ಯಕ್ಕೆ ಪೂರೈಕೆಯಾಗಬೇಕಾಗಿದ್ದ ಯೂರಿಯಾ ರಸಗೊಬ್ಬರದಲ್ಲಿ ಈ ಬಾರಿ 1.36 ಲಕ್ಷ ಮೆಟ್ರಿಕ್ ಟನ್ ಕೊರತೆಯಾಗಿದೆ. ಇದೇ ಈ ಎಲ್ಲಾ ಸಮಸ್ಯೆ ಹೆಚ್ಚಾಗಲು ಪ್ರಮುಖ ಕಾರಣವಾಗಿದೆ ಎಂದು ವಿವರಿಸಿದ್ದಾರೆ. ಈ ಬಾರಿ ಮುಂಗಾರು ಬೇಗ ಪ್ರಾರಂಭವಾಗಿ ಉತ್ತಮ ಮಳೆಯಾಗಿದ್ದು, 2 ಲಕ್ಷ ಹೆಕ್ಟೇರ್ ಹೆಚ್ಚುವರಿ ಮುಸುಕಿನ ಜೋಳ ಬಿತ್ತನೆ ಕೂಡ ಯೂರಿಯಾ ಬೇಡಿಕೆಯ ಹಠಾತ್ ಏರಿಕೆಗೆ ಕಾರಣವಾಗಿದೆ ಎಂದಿದ್ದಾರೆ. ರಾಜ್ಯದಲ್ಲಿ ಅಕ್ರಮ ಸಾಗಾಟ, ಯೂರಿಯಾ ದುರ್ಬಳಕೆ ಬಗ್ಗೆ ವಿಲಕ್ಷಣದಳ ಚುರುಕಾಗಿ ಕಾರ್ಯನಿರ್ವಹಿಸುತ್ತಿದ್ದು, ಅಕ್ರಮಗಳಿಗೆ ಕಡಿವಾಣ ಹಾಕಿದೆ ಎಂದು ಹೇಳಿದ್ದಾರೆ.

# ಬಾರದ ಅನುದಾನ ಶಾಸಕರ ಅಸಮಾಧಾನ



**ಎರಡನೇ ದಿನವೂ ಮುಂದುವರೆದ ಸಿಎಂ ಸಿದ್ದರಾಮಯ್ಯ ಸಮಾಲೋಚನೆ; ಅಸಮಾಧಾನ ಹೊರಹಾಕಿದ ಶಾಸಕರು**

**ಕ್ಷೇತ್ರದ ಅಭಿವೃದ್ಧಿ ಅನುದಾನದ ಸೇರಿದಂತೆ ಶಾಸಕರ ಅಸಮಾಧಾನ ಶಮನಕ್ಕೆ ಮುಂದಾಗಿರುವ ಸಿಎಂ**

**ಮೊದಲ ಸಭೆಯಲ್ಲಿ ಸುದೀರ್ಘ ಚರ್ಚೆ**

ಮೊದಲ ದಿನ ನಡೆದ ಸಭೆಯಲ್ಲಿ ಸಿದ್ದರಾಮಯ್ಯ ಅವರು ಶಾಸಕರ ಜೊತೆಗೆ ಸುದೀರ್ಘ ಚರ್ಚೆ ನಡೆಸಿದ್ದಾರೆ. ಅನುದಾನ, ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ ಕಾರ್ಯ ಹಾಗೂ ಗ್ಯಾರಂಟಿ ಯೋಜನೆಗಳ ಜಾರಿಯ ಕುರಿತಾಗಿ ಚರ್ಚೆ ನಡೆಸಿದ್ದಾರೆ. ಅಲ್ಲದೆ ಶಾಸಕರಿಗೆ ಕೆಲವೊಂದು ಸಲಹೆ ಸೂಚನೆಗಳನ್ನು ನೀಡಿದ್ದರು.

• **ಉದಯವಾಹಿನಿ, ಬೆಂಗಳೂರು**

ಅನುದಾನ, ಕ್ಷೇತ್ರಗಳ ಅಭಿವೃದ್ಧಿ ಸೇರಿದಂತೆ ಹಲವು ವಿಚಾರಗಳ ಕುರಿತು ಜಿಲ್ಲಾವಾರು ಶಾಸಕರು, ಸಚಿವರು ಹಾಗೂ ಸಚಿವರೊಂದಿಗೆ ಎರಡನೇ ದಿನ ಕೂಡ ಸಿಎಂ ಸಿದ್ದರಾಮಯ್ಯ ವಿಧಾನಸೌಧದದಲ್ಲಿ ಚರ್ಚೆ ನಡೆಸಿದರು.

**ಕಲ್ಯಾಣ ಕರ್ನಾಟಕ ಜಿಲ್ಲೆ ಶಾಸಕರೊಂದಿಗೆ ಚರ್ಚೆ:** ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ವಿಜಯನಗರ, ಬಳ್ಳಾರಿ ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರು, ಸಚಿವರು ಹಾಗೂ ಶಾಸಕರು, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರುಗಳ ಜೊತೆ ಸಮಾಲೋಚನೆ ನಡೆಸಿದರು. ಬೆಳಗ್ಗೆ 10ರಿಂದ ಮಧ್ಯಾಹ್ನದವರೆಗೆ ಈ ಐದು ಜಿಲ್ಲೆಗಳ ನಾಯಕರೊಂದಿಗೆ ಸುದೀರ್ಘ ಚರ್ಚೆ ನಡೆಸಿದ್ದಾರೆ.

**ಹಲವು ಜಿಲ್ಲೆಗಳ ನಾಯಕರೊಂದಿಗೆ ಚರ್ಚೆ**

ಮಧ್ಯಾಹ್ನದ ನಂತರ ಬೆಳಗಾವಿ, ಹುಬ್ಬಳ್ಳಿ-ಧಾರವಾಡ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಶಾಸಕರುಗಳ ಜೊತೆ ಚರ್ಚೆ ನಡೆಸಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಸಭೆಯಿಂದ ದೂರ ಇಡಲಾಗಿದೆ. ಡಿಸಿಎಂ ಬೆಂಗಳೂರಿನಲ್ಲೇ ಇದ್ದರೂ ಸಭೆಗೆ ಹಾಜರಾಗಲಿಲ್ಲ. ಬೀದರ್ ಜಿಲ್ಲೆಯ ಕಾಂಗ್ರೆಸ್‌ನಲ್ಲಿ ಭಿನ್ನಮತ ಸ್ಫೋಟಗೊಂಡಿತ್ತು. ವಿಧಾನಪರಿಷತ್ ಸದಸ್ಯ ಚಂದ್ರಶೇಖರ್ ಪಾಟೀಲ್, ರಾಜಶೇಖರ್ ಬಸವರಾಜ್ ಹಿಟ್ನಾಳ್ ಅವರ ನೇತೃತ್ವದಲ್ಲಿ ಜಿಲ್ಲೆಯ ಕಾಂಗ್ರೆಸ್ ಮುಖಂಡರು ಸಚಿವ ಈಶ್ವರ್ ಖಂಡ್ರೆ ವಿರುದ್ಧ ಬಹಿರಂಗ ಆಕ್ರೋಶ ವ್ಯಕ್ತಪಡಿಸಿದ್ದರು. ಅವರೊಂದಿಗೆ ಡಿಕೆಶಿ ಸಂಧಾನ ಮಾತುಕತೆ ನಡೆಸಿ ಸಮಾಧಾನಪಡಿಸಿದ್ದರು. ಆದರೂ ಆಂತರಿಕ ಬೇಗುದಿ ಬೂದಿ ಮುಚ್ಚಿದ ಕೆಂಡದಂತೆ ಇತ್ತು.

**ಚರ್ಚೆಗೆ ಗ್ರಾಸವಾದ ಸಿಎಂ ನಡೆ!**

**ಸಿದ್ದು ಎದುರಲ್ಲೇ ರಾಜಣ್ಣ-ಗುಬ್ಬಿ ಶಾಸಕ ಶ್ರೀನಿವಾಸ್ ಜಟಾಪಟಿ..!**



ಇಂದಿನ ಸಭೆಯಲ್ಲಿ ಮುಖ್ಯಮಂತ್ರಿಯವರು ಸಚಿವರು ಹಾಗೂ ಶಾಸಕರ ಜೊತೆ ಮಾತ್ರ ಚರ್ಚೆ ನಡೆಸಿದ್ದು, ಭಿನ್ನಮತ ಪೂರ್ಣವಾಗಿ ಶಮನವಾದಂತೆ ಕಾಣುತ್ತಿಲ್ಲ. ಕಲಬುರಗಿ ಜಿಲ್ಲೆಯಲ್ಲೂ ಶಾಸಕರು ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧ ಅಸಹನೆ ವ್ಯಕ್ತಪಡಿಸಿದ್ದರು. ಮುಖ್ಯಮಂತ್ರಿಯವರು ಕ್ಷೇತ್ರವಾರು ಬಿಡುಗಡೆ ಮಾಡಲಿರುವ 50 ಕೋಟಿ ರೂ.ಗಳ ಅನುದಾನದ ಬಳಕೆಗೆ ಸೀಮಿತವಾಗಿ ಸಭೆ ನಡೆಸಲಿದ್ದಾರೆ ಎಂದು ಆರಂಭದಲ್ಲಿ ಹೇಳಲಾಗಿತ್ತು. ಆದರೆ ಶಾಸಕರು, ಸಚಿವರ ಸಭೆಯಲ್ಲಿ ಜಿಲ್ಲೆಯ ಭಿನ್ನಮತಗಳ ಬಗ್ಗೆ ಸಮಾಲೋಚನೆಗಳಾಗುತ್ತಿವೆ. ಪರಸ್ಪರ ಒಗ್ಗಟ್ಟಿನಿಂದ ಮುನ್ನಡೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರು ಹಾಗೂ ಶಾಸಕರಿಗೆ ಸೂಚನೆ ನೀಡುತ್ತಿದ್ದಾರೆ ಎಂದು ತಿಳಿದುಬಂದಿದೆ.

**ಹಲವು ವಿಚಾರಗಳ ಚರ್ಚೆ:** ಗ್ಯಾರಂಟಿ ಯೋಜನೆಗಳ ಜೊತೆ ನಿರಂತರ ಸಂಪರ್ಕದಲ್ಲಿರುವಂತೆಯೂ ಸಲಹೆ ನೀಡಿದ್ದಾರೆ. ಕೆಡಿಪಿ ಸಭೆಗಳಲ್ಲಿನ ಜಟಾಪಟಿ, ಪಕ್ಷ ಸಂಘಟನೆ, ಜಿಲ್ಲೆಯ ಅಭಿವೃದ್ಧಿ ಕಾರ್ಯಗಳು, ಕೃಷಿ ಚಟುವಟಿಕೆ, ಬಿಡುಗಡೆಯಾಗಿರುವ ಅನುದಾನ, ಬಳಕೆಯಾಗಿರುವ ಪ್ರಮಾಣ, ಬಜೆಟ್ ಘೋಷಿತ ಯೋಜನೆಗಳ ತ್ವರಿತ ಅನುಷ್ಠಾನ ಸೇರಿದಂತೆ ಚರ್ಚೆಯಾಗಿವೆ ಎಂದು ಹೇಳಲಾಗುತ್ತಿದೆ.

**ಶಾಸಕರ ಅಸಮಾಧಾನಕ್ಕೆ ಕಾರಣಗಳೇನು?**

ಅನೇಕ ಕಾಂಗ್ರೆಸ್ ಶಾಸಕರು ತಮ್ಮ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಸರ್ಕಾರ ಹಣ ನೀಡುತ್ತಿಲ್ಲ ಎಂದು ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ರಾಜು ಕಾಗೆ ಸೇರಿದಂತೆ ಹಲವರು ಶಾಸಕರು ಅನುದಾನ ಲಭ್ಯವಾಗದಿದ್ದರೆ ರಾಜೀನಾಮೆ ನೀಡುವುದಾಗಿ ಬೆದರಿಕೆ ಹಾಕಿದ್ದರು. ನಿಧಿಯ ಕೊರತೆಯಿಂದಾಗಿ ಶಾಸಕರು ತಮ್ಮ ಕ್ಷೇತ್ರಗಳಲ್ಲಿ ರಸ್ತೆ, ಕುಡಿಯುವ ನೀರು, ಶಾಲಾ ಕಟ್ಟಡಗಳಂತಹ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಆರೋಪಿಸಿದ್ದರು. ಶಾಸಕರು, ಸಚಿವರ ಅಸಮಧಾನದ ಬೆನ್ನಲ್ಲೇ ಎಐಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯದ ಉಸ್ತುವಾರಿ ರಂದೀಪ್ ಸುರ್ಜೇವಾಲಾ ರಾಜ್ಯಕ್ಕೆ ಭೇಟಿ ನೀಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಇತರ ಹಿರಿಯ ಸಚಿವರೊಂದಿಗೆ ಸಭೆ ನಡೆಸಿದ್ದರು. ಇದರೊಂದಿಗೆ ಅಸಮಾಧಾನಗೊಂಡಿದ್ದ ಶಾಸಕರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸಿ ಅವರ ದೂರುಗಳನ್ನು ಆಲಿಸಿದ್ದರು.

**ಬೇಡಿಕೆ ಏನು, ನಿರೀಕ್ಷೆಗಳೇನು..?**

ಸಿಎಂ ಸಿದ್ದರಾಮಯ್ಯ ಜೊತೆಗಿನ ಸಭೆಯ ಕುರಿತಾಗಿ ಶಾಸಕ ಅಜಯ್ ಸಿಂಗ್ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಶಾಸಕರ ಸಭೆ ಕರೆದಿದ್ದಾರೆ. ಏನೇನು ಕೆಲಸ ಕಾರ್ಯಗಳನ್ನು ಮಾಡಬೇಕು ಅನ್ನೋದನ್ನು ಕೇಳ್ತಿದ್ದಾರೆ. ಕಲ್ಯಾಣ ಕರ್ನಾಟಕದ ಯೋಜನೆ ಹೊರತಾಗಿ ಬೇರೆ ಬೇರೆ ಯೋಜನೆ ಬಗ್ಗೆಯೂ ಕೇಳ್ತೇನೆ. ನಮ್ಮ ಕ್ಷೇತ್ರಕ್ಕೆ ಸಿಎಂಗೆ ಆಹ್ವಾನಿಸುತ್ತೇವೆ ಎಂದರು. ಸಚಿವರು ಹಾಗೂ ಉಸ್ತುವಾರಿ ಸಚಿವರ ಬಗ್ಗೆ ಅಸಮಾಧಾನ ಇದ್ಯಾ ಎಂಬ ಪ್ರಶ್ನೆಗೆ ಉಸ್ತುವಾರಿ ಸಚಿವರು ಇಲ್ಲಿಯೆ ಇದ್ದಾರೆ. ನಮ್ಮ ಜಿಲ್ಲೆಯಲ್ಲಿ ಇಬ್ಬರು ಸಚಿವರಿದ್ದಾರೆ. ನಮ್ಮಲ್ಲಿ ಏನೂ ಸಮಸ್ಯೆ ಇಲ್ಲ. ಎಲ್ಲಾ ಜೊತೆಯಾಗಿದ್ದೇವೆ ಎಂದು ಹೇಳಿದರು. ಇದೇ ವಿಚಾರವಾಗಿ ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ಸಿಎಂ ಬೀದರ್ ಜಿಲ್ಲೆಯ ಶಾಸಕರ ಸಭೆ ಕರೆದಿದ್ದಾರೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ್ಮೇಲೆ ಸಾಧನೆಗಳು, ಜಿಲ್ಲೆಯ ಬೇಡಿಕೆಗಳು, ಸಮಸ್ಯೆಗಳಿಗೆ ತುರ್ತಾಗಿ ಸ್ಪಂದನೆ ಮಾಡಬೇಕಾಗಿದೆ. ಬೀದರ್ ನಲ್ಲಿ ನೀರಾವರಿ, ಶಿಕ್ಷಣ ಅರೊಗ್ಯ ಉದ್ಯೋಗ ಮಹಿಳಾ ಸಬಲೀಕರಣ, ಅನುಭವ ಮಂಟಪ ಪೂರ್ಣಗೊಳಿಸಬೇಕಿದೆ. ಎರಡು ಮುಕ್ಕಾಲು ವರ್ಷದಲ್ಲಿ ಇನ್ನೂ ಹಲವು ಭರವಸೆಯನ್ನು ಈಡೇರಿಸಬೇಕಿದೆ ಎಂದರು.

## 383 ಅಪಾರ್ಟ್ಮೆಂಟ್, 43 ಸಾವಿರ ಮನೆಗಳಿಗೆ ಜಲಮಂಡಳಿ ನೋಟಿಸ್!

• **ಉದಯವಾಹಿನಿ, ಬೆಂಗಳೂರು**

ಇಲ್ಲಿನ ಅಪಾರ್ಟ್ಮೆಂಟ್, ಮನೆಗಳಿಗೆ ಜಲಮಂಡಳಿ ಬಿಗ್ ಶಾಕ್ ಕೊಟ್ಟಿದೆ. ಬೆಂಗಳೂರಿನ 383 ಅಪಾರ್ಟ್ಮೆಂಟ್, 43 ಸಾವಿರ ಮನೆಗಳಿಗೆ ನೀರಿನ ಸಂಪರ್ಕ ಕಡಿತಗೊಳಿಸುವುದಾಗಿ ಜಲಮಂಡಳಿ ನೋಟಿಸ್ ಜಾರಿ ಮಾಡಿದೆ. ಕಾವೇರಿ ನೀರಿನ ಸಂಪರ್ಕ ಪಡೆಯದೇ ಅಕ್ರಮವಾಗಿ ನೀರಿನ ಸಂಪರ್ಕ ಪಡೆದಿರುವ ಬಗ್ಗೆ ಜಲಮಂಡಳಿ ತನಿಖೆ ಮಾಡುತ್ತಿತ್ತು. ಜಲಮಂಡಳಿ ತನಿಖೆ ವೇಳೆ ಶಾಕಿಂಗ್ ವಿಚಾರ ಬಯಲಾಗಿದೆ. ದೊಡ್ಡ ದೊಡ್ಡ ಅಪಾರ್ಟ್ಮೆಂಟ್‌ಗಳು ಜಲಮಂಡಳಿಗೆ ವಂಚಿಸಿರೋದು ಬಯಲಾಗಿದೆ. ನೀರಿನ ಸಂಪರ್ಕ ಪಡೆಯದೇ ಅಕ್ರಮವಾಗಿ ನೀರಿನ ಸಂಪರ್ಕ ಪಡೆದು 383 ಅಪಾರ್ಟ್ಮೆಂಟ್‌ಗಳು 43 ಸಾವಿರ ಮನೆಗಳು ಅಕ್ರಮ ರೀತಿ ನೀರಿನ ಸಂಪರ್ಕ ಪಡೆದಿರೋದು ಜಲಮಂಡಳಿ ತನಿಖೆಯಲ್ಲಿ ಬಯಲಾಗಿದೆ.ಇನ್ನೂ 383 ಅಪಾರ್ಟ್ಮೆಂಟ್ ಮತ್ತು 43 ಸಾವಿರ ಮನೆಗಳಿಗೆ ಜಲಮಂಡಳಿ ನೋಟಿಸ್ ಜಾರಿ ಮಾಡಿದೆ.

ನೋಟಿಸ್ ಜಾರಿ ಮಾಡಿ ಬರೋಬ್ಬರಿ 200 ಕೋಟಿ ರೂ. ದಂಡ ವಿಧಿಸಿದೆ. ಹಲವು ವರ್ಷಗಳಿಂದ ನೀರನ್ನ ಕದಿಯುತ್ತಾ ಇರೋದು ಬಯಲಾಗಿದೆ. ಹೀಗಾಗಿ ದಂಡ ವಿಧಿ ಕ್ರಮ ವಹಿಸುತ್ತಾ ಇದೆ. ಅಕ್ರಮ ಕನೆಕ್ಷನ್‌ಗಳಿಗೆ ನೋಟಿಸ್ ಕೊಟ್ಟಿದ್ದು ಸಕ್ರಮ ಮಾಡಿಕೊಳ್ಳಲು ಅವಕಾಶ ನೀಡಲಾಗುತ್ತಿದೆ ಎನ್ನಲಾಗಿದೆ. ಒಟ್ಟಾರೆ ಬೆಂಗಳೂರಿನಲ್ಲಿ ಕಾವೇರಿ ನೀರಿನ ಸಂಪರ್ಕವನ್ನ ಅಕ್ರಮವಾಗಿ ಪಡೆಯುತ್ತಿರುವ ಮನೆಗಳಿಗೆ ಅಪಾರ್ಟ್ಮೆಂಟ್‌ಗಳಿಗೆ ಜಲಮಂಡಳಿ ಬಿಸಿ ಮುಟ್ಟಿಸಿದೆ. ಅಧಿಕೃತವಾಗಿ ನೀರಿನ ಸಂಪರ್ಕ ಪಡೆಯದೇ ಅಕ್ರಮವಾಗಿ ಪಡೆಯುತ್ತಿರುವುದು ಬಯಲಾಗಿದ್ದು, ಯಾರೇ ತಪ್ಪು ಮಾಡಿದ್ರು ನೀರಿನ ಸಂಪರ್ಕ ಕಡಿತವಾಗೋದು ಕಟ್ಟಿಟ್ಟಬುತ್ತಿಯಾಗಿದೆ.

# ಕೆಎಂಎಫ್ ಅಧ್ಯಕ್ಷ ಸ್ಥಾನಕೂ ಬಣ ಬಡಿದಾಟ ಶುರು!

## ● ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಆಪ್ತರಲ್ಲಿ ಯಾರಿಗೆ ಪಟ್ಟ ಅಧ್ಯಕ್ಷ ಸ್ಥಾನಕ್ಕಾಗಿ ತೀವ್ರಗೊಂಡ ಲಾಬಿ

• **ಉದಯವಾಹಿನಿ, ಬೆಂಗಳೂರು**

ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ಬಣ ಬಡಿದಾಟ ತೀವ್ರಗೊಂಡಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಆಪ್ತರು ಕರ್ನಾಟಕ ಹಾಲು ಒಕ್ಕೂಟದ ಅಧ್ಯಕ್ಷರಾಗಲು ಪ್ರಯತ್ನ ನಡೆಸುತ್ತಿದ್ದಾರೆ. ಒಂದು ಕಡೆಯಲ್ಲಿ ಡಿಕೆ ಸುರೇಶ್ ಗೆ ಪಟ್ಟಕಟ್ಟಲು ಡಿಕೆಶಿ ಸಿದ್ದತೆ ಮಾಡುಕೊಂಡರೆ, ಮತ್ತೊಂದು ಕಡೆಯಲ್ಲಿ ಸಿದ್ದರಾಮಯ್ಯ ಆಪ್ತರು ಅಧ್ಯಕ್ಷ ಗಿರಿಯತ್ತ ಚಿತ್ತ ನೆಟ್ಟಿದ್ದಾರೆ.

**ತೀವ್ರ ಪೈಪೋಟಿ:** ಜಿಲ್ಲಾ ಮಟ್ಟದ ಹಾಲು ಒಕ್ಕೂಟಗಳ ಚುನಾವಣೆಯ ಬೆನ್ನಲ್ಲೇ ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ಪೈಪೋಟಿ ಶುರುವಾಗಿದೆ. ಡಿಕೆ ಸುರೇಶ್, ಕೆವೈ ನಂಜೇಗೌಡ, ಭೀಮಾ ನಾಯ್ಕ್ ಮಾತ್ರವಲ್ಲ, ಇದೀಗ ರಾಘವೇಂದ್ರ ಹಿಟ್ನಾಳ್ ಕೂಡಾ ಅಧ್ಯಕ್ಷ ಸ್ಥಾನಕ್ಕೆ ಕಣ್ಣಿಟ್ಟಿದ್ದಾರೆ.




**ಎಲ್ಲರ ಚಿತ್ತ ಅಧ್ಯಕ್ಷ ಗಿರಿಯತ್ತ**

**ಸತೀಶ್ ಭೇಟಿಯಾಗಿ ಗೌಪ್ಯ ಮಾತುಕತೆ!:** ಕೆಎಂಎಫ್ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿರುವ ಸಿದ್ದರಾಮಯ್ಯ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿರುವ ರಾಘವೇಂದ್ರ ಹಿಟ್ನಾಳ್ ಸಚಿವ ಸತೀಶ್ ಜಾರಕಿಹೊಳಿಯನ್ನು ಭೇಟಿ ಮಾಡಿ ಮಾತುಕತೆ ನಡೆದಿರುವುದು ಕುತೂಹಲಕ್ಕೆ ಕಾರಣವಾಗಿದೆ. ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ವಿಭಾಗದ ಹಾಲು ಒಕ್ಕೂಟದ ಚುಕ್ಕಾಣಿ ಹಿಡಿದಿರುವ ಹಿಟ್ನಾಳ್, ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ತೆರೆಮರೆಯಲ್ಲಿ ಪೈಪೋಟಿ ನೀಡುತ್ತಿದ್ದಾರೆ. ಚುನಾವಣೆ ಗೆದ್ದ ಬೆನ್ನಲ್ಲೇ ಸತೀಶ್ ಜಾರಕಿಹೊಳಿ ಭೇಟಿ ಮಾಡಿ ಕೆಎಂಎಫ್ ಅಧ್ಯಕ್ಷ ಸ್ಥಾನ ಸಂಬಂಧ ಚರ್ಚಿಸಿದ್ದಾರೆ ಎಂಬ ಮಾಹಿತಿ ಇದೆ. ಸುಮಾರು ಹದಿನೈದು ನಿಮಿಷಗಳ ಕಾಲ ಚರ್ಚಿಸಿ ತೆರಳಿರುವ ಹಿಟ್ನಾಳ್ ನಡೆ ಕುತೂಹಲಕ್ಕೆ ಕಾರಣವಾಗಿದೆ.

**ಎಸಿಪಿ ದರ್ಜೆಯ ಅಧಿಕಾರಿ ನೇಮಕ**

**ಪಟ್ಟು ಸಡಿಲಿಸ್ತಾರಾ ಡಿಕೆಶಿ**

ಈ ನಡುವೆ ಮಾಜಿ ಸಂಸದ ಡಿಕೆ ಸುರೇಶ್ ಇದೀಗ ಬಮೂಲ್ ಅಧ್ಯಕ್ಷರಾಗಿದ್ದಾರೆ. ಅವರು ಕೆಎಂಎಫ್ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಸಹೋದರನಿಗೆ ಕೆಎಂಎಫ್ ಪಟ್ಟ ಕಟ್ಟಲು ಡಿಕೆಶಿ ತೆರೆಮರೆಯ ಪ್ರಯತ್ನ ನಡೆಸುತ್ತಿದ್ದಾರೆ. ಆದರೆ ಬಣ ಬಡಿದಾಟ ಇದಕ್ಕೆ ಅಡ್ಡಿಯಾಗುವ ಲಕ್ಷಣಗಳು ಗೋಚರಿಸುತ್ತಿವೆ. ಯಾರು ಪಟ್ಟು ಸಡಿಲಿಸುತ್ತಾರೆ, ಯಾರು ಅಧ್ಯಕ್ಷರಾಗಿ ಆಯ್ಕೆಯಾಗುತ್ತಾರೆಂದು ಇಡೀ ರಾಜ್ಯದ ಜನರ ಕುತೂಹಲಕ್ಕೆ ಈಗ ಕಾರಣವಾಗಿದೆ.

**ರಾಬಕೊವಿಯಿಂದ ಕೆಎಂಎಫ್:** ಶಾಸಕ ಹಿಟ್ನಾಳ್ ರಾಬಕೊವಿ ಒಕ್ಕೂಟದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಸಿದ್ದರಾಮಯ್ಯ ಬಣದಲ್ಲಿ ಗುರುತಿಸಿಕೊಂಡಿರುವ ಅವರು ಕೆಎಂಎಫ್ ಗಾದಿಯ ಮೇಲೆ ಕಣ್ಣಿಟ್ಟಿದ್ದಾರೆ.

ಈ ನಿಟ್ಟಿನಲ್ಲಿ ಅಗತ್ಯ ವೇದಿಕೆಯನ್ನು ಸಿದ್ಧಪಡಿಸಿಕೊಳ್ಳುತ್ತಿದ್ದಾರೆ. ಕುತೂಹಲ ಸಂಗತಿ ಏನೆಂದರೆ, ಇದರ ಮುಂದುವರಿದ ಭಾಗವಾಗಿಯೇ ಅವರು, ರಾಜ್ಯದ ವಿವಿಧ ಹಾಲು ಒಕ್ಕೂಟಗಳಲ್ಲಿರುವ ಆಪ್ತರನ್ನು ಕೆಎಂಎಫ್‌ಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ಮಾಡುವ ಪ್ರಯತ್ನ ಮಾಡುತ್ತಿದ್ದಾರೆ ಎನ್ನಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,048/Gram24ct ₹9,210/Gram22ct ಬೆಳ್ಳಿ: ₹117.00/Gram

• ಕೇಂದ್ರ ಕಾರಾಗೃಹದಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ವರದಿ ಪ್ರಸ್ತಾಪಿಸಿದ ಸಚಿವರು

# ಅಕ್ರಮ ಚಟುವಟಿಕೆಗಳನ್ನು ಕಟ್ಟುನಿಟ್ಟಾಗಿ ನಿಗ್ರಹಿಸಿ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ ಕಲಬುರಗಿ

ಅಕ್ರಮ ಚಟುವಟಿಕೆಗಳ ವಿಚಾರದಲ್ಲಿ ಸರ್ಕಾರ ಶೂನ್ಯ ಸಹಿಷ್ಣುತೆ ಹೊಂದಿದ್ದು, ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೂಚಿಸಿದರು.

ಕಲಬುರಗಿ ಪೊಲೀಸ್ ಕಮೀಷನರ್ ಕಚೇರಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಆನ್ ಲೈನ್ ದಂಧೆ, ಬೆಟ್ಟಿಂಗ್, ಮಟ್ಕಾ, ಇಸ್ಪೀಟ್, ಗಾಂಜಾ ಹಾಗೂ ಡ್ರಗ್ಸ್ ಸೇರಿದಂತೆ ಇತರೆ ಅಕ್ರಮ ಚಟುವಟಿಕೆಗಳ ಬಗ್ಗೆ ವರದಿಗಳಿದ್ದು ಅಂತಹ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಗ್ರಹಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕೇಂದ್ರ ಕಾರಾಗೃಹದಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ವರದಿ ಪ್ರಸ್ತಾಪಿಸಿದ ಸಚಿವರು ನಗರ ಪೊಲೀಸ್ ಆಯುಕ್ತ ಡಾ ಶರಣಪ್ಪ ಢಗೆ ಹಾಗೂ ಜಿಲ್ಲಾ ಎಸ್ ಪಿ ಶ್ರೀನಿವಾಸಲು ಅಡ್ಡೂರು ಅವರಿಗೆ ಕಾರಾಗೃಹಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಸೂಚಿಸಿದರು.

ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಸಾರ್ವಜನಿಕರಿಗೆ ತಪ್ಪು ಮಾಹಿತಿ ನೀಡುತ್ತಿರುವವರ ಮೇಲೆ ಕಾನೂನು ಕ್ರಮ ಜರುಗಿಸುವಂತೆ ಅವರು ಇದೇ ಸಂದರ್ಭದಲ್ಲಿ ಹೇಳಿದರು. ಇತ್ತೀಚಿಗೆ ಕಲಬುರಗಿಯಲ್ಲಿ ನಡೆದ ಬಂಗಾರದ ಅಂಗಡಿಯ ದರೋಡೆ ಹಾಗೂ ಅಕ್ರಮ ನೇಮಕಾತಿ ಪ್ರಕರಣ ಬೇಧಿಸಿದನ್ನು ಶ್ಲಾಘಿಸಿದ ಸಚಿವರು, ಪೊಲೀಸರು ದಕ್ಷತೆಯಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಜಿಲ್ಲೆಗೆ ಹೆಸರು ಬರುತ್ತದೆ ಎಂದರು.

ಹಿರಿಯ ಶಾಸಕರಾದ ಎಂ.ವೈ.ಪಾಟೀಲ್ ಮಾತನಾಡಿ, ಗಾಣಗಾಪುರ ದತ್ತಾತ್ರೇಯ ದೇವಸ್ಥಾನದ ಬಳಿ ವ್ಯವಸ್ಥಿತ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಕುರಿತಂತೆ ಪೊಲೀಸರಿಗೆ ಹೇಳಿದರು. ಶಾಸಕರಾದ ಅಲ್ಲಮಪ್ರಭು ಪಾಟೀಲ್ ಮಾತನಾಡಿ, ನಗರದ ಎಸ್ ಬಿ ಕಾಲೇಜ್ ಹಾಗೂ ಕೇಂದ್ರ ಬಸ್ ನಿಲ್ದಾಣ ಬಳಿ ಉಂಟಾಗುತ್ತಿರುವ ಟ್ರಾಫಿಕ್ ಜಾಮ್ ಬಗ್ಗೆ ಕ್ರಮವಹಿಸುವಂತೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಡಾ.ಶರಣಪ್ಪ ಢಗೆ ಹಾಗೂ ಅಡ್ಡೂರು ಶ್ರೀನಿವಾಸಲು ಅವರು ತಮ್ಮ ವ್ಯಾಪ್ತಿಯಲ್ಲಿ ಕೈಗೊಂಡ ಪೊಲೀಸ್ ಕಾರ್ಯಾಚರಣೆಗಳು, ಬಂದೋಬಸ್ತ್, ಹಾಗೂ ಅಪರಾಧ ಪ್ರಕರಣಗಳನ್ನು ಬೇಧಿಸಿದ ಬಗ್ಗೆ ಸಚಿವರಿಗೆ ಮಾಹಿತಿ ನೀಡಿದರು.

ನಗರದ ರಾಷ್ಟ್ರಪತಿ ಚೌಕ್, ವಲ್ಲಭಭಾಯಿ ಚೌಕ್, ಸೇಡಂ ವೃತ್ತ, ಹುಮನಾಬಾದ್ ರಿಂಗ್ ರಸ್ತೆ ವೃತ್ತ, ಸೇರಿದಂತೆ ನಗರದ ಪ್ರಮುಖ ವೃತ್ತಗಳಲ್ಲಿ ನೂತನ ಟ್ರಾಫಿಕ್ ಲೈಟ್ ಅಳವಡಿಸುವ ಕುರಿತು ಇಲಾಖೆಯ ಹಿರಿಯ ಅಧಿಕಾರಿಗಳು ಸಚಿವರಿಗೆ ಪ್ರಸ್ತಾವನೆ ಸಲ್ಲಿಸಿದರು. ವೇದಿಕೆಯ ಮೇಲೆ ಶಾಸಕರಾದ ಎಂ ವೈ. ಪಾಟೀಲ, ಅಲ್ಲಮಪ್ರಭು ಪಾಟೀಲ, ಅವಿನಾಶ ಜಾಧವ, ಎಂ ಎಲ್ ಸಿ ಜಗದೇವ ಗುತ್ತೇದಾರ, ಡಿಐಜಿ ಶಂತನು ಸಿನ್ಹಾ, ನಗರ ಪೊಲೀಸ್ ಆಯುಕ್ತ ಡಾ ಶರಣ್ಣ ಢಗೆ, ಎಸ್ ಪಿ ಅಡ್ಡೂರು ಶ್ರೀನಿವಾಸಲು, ಡಿಸಿಪಿ ಕನ್ನಿಕಾ ಸಿಕ್ರೀವಾಲ್ ಇದ್ದರು.


ಉದಯವಾಹಿನಿ ಚಿತ್ರ

> ಸಿವಿಲ್ ಸ್ವರೂಪದ ಪ್ರಕರಣಗಳಲ್ಲಿ ಪೊಲೀಸ್ ಅಧಿಕಾರಿಗಳು ಮಧ್ಯೆ ವರ್ತಿಗಳಂತೆ ವರ್ತಿಸುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳಿದ್ದು, ಸರಿಪಡಿಸಿಡಿ ಕೊಳ್ಳುವಂತೆ ಸಲಹೆ ನೀಡಿದ ಸಚಿವರು ಈ ತರಹದ ಪ್ರಕರಣಗಳಲ್ಲಿ ಪೊಲೀಸರು ಮೂಗು ತೂರಿಸುವಂತಿಲ್ಲ. -ಪ್ರಿಯಾಂಕ್ ಖರ್ಗೆ
> ಜಿಲ್ಲಾ ಉಸ್ತುವಾರಿ ಸಚಿವ

> ಗ್ರಾಮೀಣ ಭಾಗದ ಬಹುತೇಕ ಜನರು ಒಮ್ಮೆ ಕೂಡಾ ಪೊಲೀಸ್ ಠಾಣೆಗೆ ಬಂದಿರುವುದಿಲ್ಲ. ಸಮಸ್ಯೆ ಹೇಳಿಕೊಂಡು ಬರುವ ಅಂತಹ ಸಾರ್ವಜನಿಕರೊಂದಿಗೆ ಸೌಜನ್ಯದೊಂದಿಗೆ ವರ್ತಿಸುವಂತೆ ಸಲಹೆ ನೀಡಿದ ಪ್ರಿಯಾಂಕ್ ಖರ್ಗೆ ಪೋಕ್ಸೋ ದಂತ ಗಂಭೀರ ಪ್ರಕರಣಗಳಲ್ಲಿ ಸುಪ್ರಿಂ ಕೋರ್ಟ್ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದರು.

> ಗ್ರಾಮೀಣ ಭಾಗದಲ್ಲಿ ರಾತ್ರಿ ವೇಳೆಯ ಪೊಲೀಸ್ ಗಸ್ತು ಹೆಚ್ಚಿಸಬೇಕು. ಗುಪ್ತಚರ ಇಲಾಖೆಯನ್ನು ಮತ್ತಷ್ಟು ಬಲಿಷ್ಠಗೊಳಿಸಿ ಕಾನೂನು ಸುವ್ಯವಸ್ಥೆ ಯನ್ನು ಕಾಪಾಡಬೇಕು. ರಸ್ತೆಯ ಬದಿಯಲ್ಲಿ ನಿಂತು ವಾಹನ ಸವಾರರಿಗೆ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ಪದೇ ಪದೇ ದೂರುಗಳು ಬರುತ್ತಿದ್ದು ಈ ಬಗ್ಗೆ ಗಮನಹರಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳ ಕಿರುಕುಳ ಗ್ರಾಮೀಣ ಭಾಗದಲ್ಲಿ ಹೆಚ್ಚಾಗುತ್ತಿದ್ದು ಅಂತವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಸೂಚಿಸಿದ ಸಚಿವರು, ಹೆಚ್ಚಿನ ಬಡ್ಡಿದರಲ್ಲಿ ವಿದ್ಯಾರ್ಥಿಗಳಿಗೆ ಸಾಲ ನೀಡಿ ಅವರ ಮನೆಯವರಿಗೆ ಕಿರುಕುಳ ನೀಡುತ್ತಿರುವ ಬಗ್ಗೆ ವರದಿಗಳಿವೆ, ಆ ಬಗ್ಗೆ ಗಮನಹರಿಸಬೇಕು.
> -ಡಾ.ಶರಣಪ್ರಕಾಶ್ ಪಾಟೀಲ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ

## ವಿದ್ಯಾರ್ಥಿಗಳ ಅನುಕೂಲಕ್ಕೆ ಹೆಚ್ಚುವರಿ ಬಸ್, ಅಥಣಿ ಮಾದರಿ ಕ್ಷೇತ್ರವನ್ನಾಗಿಸುವ ಸಂಕಲ್ಪ


ಉದಯವಾಹಿನಿ ಚಿತ್ರ

• ಉದಯವಾಹಿನಿ ಅಥಣಿ

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರಕ್ಕೆ ಯಾವುದೇ ಆರ್ಥಿಕ ಸಂಕಷ್ಟ ಎದುರಾಗಿಲ್ಲ. ಕ್ಷೇತ್ರದ ನೀರಾವರಿ ಯೋಜನೆಗಳು ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಸಾಕಷ್ಟು ಅನುದಾನ ಬರುತ್ತಿದೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಪತ್ರಿಕಾ ದಿನಾಚರಣೆಯ ಅಂಗವಾಗಿ ಸ್ಥಳೀಯ ಎಸ್ ಎಸ್ ಎಂ ಎಸ್ ಕಾಲೇಜಿನ ಖೋತ ಸಭಾಂಗಣದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರಿಸುತ್ತಿದ್ದರು. ಅಥಣಿ ಪಟ್ಟಣದಲ್ಲಿ ವಿಪರೀತ ಟ್ರಾಫಿಕ್ ಸಮಸ್ಯೆ, ಮತಕ್ಷೇತ್ರದಲ್ಲಿ ಗ್ರಾಮೀಣ ಪ್ರದೇಶದಿಂದ ಪಟ್ಟಣಕ್ಕೆ ಬರುವ ವಿದ್ಯಾರ್ಥಿಗಳಿಗೆ ಬಸ್ ಗಳ ಕೊರತೆ, ಗ್ಯಾರೆಂಟಿ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬ ನೀತಿ, ಅಭಿವೃದ್ಧಿ ಕಾರ್ಯಗಳಿಗೆ ಅನುದಾನದ ಕೊರತೆ, ವಿದ್ಯಾರ್ಥಿಗಳಿಗೆ ವಸತಿ ನಿಲಯಗಳ ವ್ಯವಸ್ಥೆ, ಡಿಜಿಟಲ್ ಗ್ರಂಥಾಲಯಗಳ ವ್ಯವಸ್ಥೆ ಸೇರಿದಂತೆ ಅನೇಕ ಸಮಸ್ಯೆಗಳ ಕುರಿತು ವಿದ್ಯಾರ್ಥಿ ವಿದ್ಯಾರ್ಥಿನಿಯರು ಕೇಳಿದ ಪ್ರಶ್ನೆಗಳಿಗೆ ಶಾಸಕ ಲಕ್ಷ್ಮಣ ಸವದಿ ಸೂಕ್ತ ಉತ್ತರಗಳನ್ನು ನೀಡುವುದರ ಜೊತೆಗೆ ಮುಂಬರುವ ದಿನಗಳಲ್ಲಿ ಅಥಣಿ ಮತಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಪರಿವರ್ತಿಸುವ ಸಂಕಲ್ಪ ಹೊಂದಿದ್ದೇನೆ.

ತಾವು ಕೇಳಿರುವ ಈ ಎಲ್ಲಾ ಕೊರತೆಗಳನ್ನು ನೀಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಶೀಘ್ರದಲ್ಲಿಯೇ ಅಥಣಿ ತಾಲ್ಲೂಕಿಗೆ ಹೆಚ್ಚುವರಿ ಬಸ್‌ಗಳನ್ನು ಒದಗಿಸಲು ಸಂಬಂಧಪಟ್ಟ ನಿಗಮದವರಿಗೆ ಮಾತನಾಡಿದ್ದೇನೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ಬಸ್‌ಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

### ಪತ್ರಕರ್ತರಿಗೆ ಆರೋಗ್ಯ ಮತ್ತು ಅಪಘಾತ ವಿಮೆ ಬಾಂಡ್ ವಿತರಣೆ

ಅಥಣಿ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ಎಲ್ಲಾ ಸದಸ್ಯರಿಗೆ ಆರೋಗ್ಯ ಮತ್ತು ಅಪಘಾತ ವಿಮೆ ಬಾಂಡ್ ಗಳನ್ನು ಶಾಸಕ ಲಕ್ಷ್ಮಣ ಸವದಿ ವಿತರಿಸಿ ಮಾತನಾಡಿ ಸಮಾಜದ ಕನ್ನಡಿಯಾಗಿ ಕಾರ್ಯನಿರ್ವಹಿಸುತ್ತಿರುವ ನಮ್ಮ ಪತ್ರಕರ್ತರು ದಿನದ 24 ಗಂಟೆ ಸೇವೆ ಸಲ್ಲಿಸುತ್ತಿರುತ್ತಾರೆ. ಸಮಾಜದ ಆರೋಗ್ಯಕ್ಕಾಗಿ ಶ್ರಮಿಸುವ ನಮ್ಮ ಪತ್ರಕರ್ತರು ಕೂಡಾ ತಮ್ಮಮತ್ತು ಕುಟುಂಬದ ಸದಸ್ಯರ ಆರೋಗ್ಯ ಮತ್ತು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಬೇಕು. ಸರ್ಕಾರದಿಂದ ದೊರಕುವ ಸೌಲಭ್ಯಗಳನ್ನು ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು. ತಾಲ್ಲೂಕಿನ ಎಲ್ಲಾ ಪತ್ರಕರ್ತರಿಗೆ ಆರೋಗ್ಯ ಮತ್ತು ಅಪಘಾತ ವಿಮೆ ಮಾಡಲು ಸಹಾಯಧನ ನೀಡಿದ ಸಮಾಜ ಸೇವಕಿ ಸುನಿತಾ ಐಹೊಳೆ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

## ರಸ್ತೆ ಗುಂಡಿಗಳಲ್ಲಿ ತೆಂಗಿನ ಸಸಿ ನೆಟ್ಟು ಪ್ರತಿಭಟನೆ

• ಉದಯವಾಹಿನಿ ಮುಂಡಗೋಡ


ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ ಹಾದು ಹೋಗಿರುವ ರಾಜ್ಯ ಹೆದ್ದಾರಿಗಳಲ್ಲಿ ಬಿದ್ದಿರುವ ಗುಂಡಿಗಳನ್ನು ದುರಸ್ತಿ ಮಾಡದ ಲೋಕೋಪಯೋಗಿ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಜೆಡಿಎಸ್ ಕಾರ್ಯಕರ್ತರು, ಗುಂಡಿಗಳಲ್ಲಿ ತೆಂಗಿನ ಸಸಿ ನೆಟ್ಟು ಮಂಗಳವಾರ ಪ್ರತಿಭಟಿಸಿದರು.

ರಾಜ್ಯ ಹೆದ್ದಾರಿಗಳಲ್ಲಿ ದೊಡ್ಡ ಗುಂಡಿಗಳು ಬಿದ್ದಿದ್ದು, ಬೈಕ್ ಸವಾರರು ನಿತ್ಯವೂ ಬೀಳುತ್ತಿದ್ದಾರೆ. ಕಳೆದ ಎರಡು ತಿಂಗಳಿಂದ ಗುಂಡಿಗಳು ಬಿದ್ದಿದ್ದರೂ ಸಂಬಂಧಿಸಿದ ಇಲಾಖೆಯವರು ತಾತ್ಕಾಲಿಕ ದುರಸ್ತಿ ಕ್ರಮ ಸಹ ಕೈಗೊಂಡಿಲ್ಲ.

ಇದರಿಂದ ಗುಂಡಿಗಳು ದಿನೆ ದಿನೇ ದೊಡ್ಡದಾಗುತ್ತ ಬೈಕ್ ಹಾಗೂ ವಾಹನ ಸವಾರರಿಗೆ ಕಂಟಕವಾಗುತ್ತಿವೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಶಿರಸಿ- ಮುಂಡಗೋಡ ರಾಜ್ಯ ಹೆದ್ದಾರಿಯಲ್ಲಿ ಪ್ರಯಾಣಿಸಲು ಸಾಹಸ ಪಡಬೇಕಾಗಿದೆ. ತಾಲ್ಲೂಕಿ ಮಳಗಿ, ಕಾತೂರ, ಪಾಳಾ, ಕಾವಲಕೊಪ್ಪ ಕ್ರಾಸ್,ಸಾಲಗಾಂವ, ಜೋಗೇಶ್ವರ್ ಹಳ್ಳ, ಮಹಾಲೆ ಮಿಲ್ ಸನಿಹ ಸೇರಿದಂತೆ ಹಲವೆಡೆ ದೊಡ್ಡ ಗುಂಡಿಗಳು ಬಿದ್ದಿವೆ. ಕಾರು, ಬೈಕ್‌ಗಳು ಈ ಗುಂಡಿಗಳನ್ನು ಪಾರು ಮಾಡಿ ಮುಂದೆ ಹೋಗಲು ಇನ್ನಿಲ್ಲದ ಸಾಹಸ ಮಾಡಬೇಕಾಗಿದೆ. ಜನರ ಜೀವ ಹಾನಿಯಾಗುವ ಮುಂಚೆಯೇ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು ಎಂದು ಜೆಡಿಎಸ್ ಕ್ಷೇತ್ರಾಧ್ಯಕ್ಷ ಎ.ಎಸ್. ಸಂಗೂರಮಠ ಆಗ್ರಹಿಸಿದರು.

## ವಿರೋಧ ಪಕ್ಷ ಪ್ರಶ್ನೆಯನ್ನೇ ಮಾಡಬಾರದು ಎಂಬ ಮನೋಭಾವ ಬಿಜೆಪಿಯದ್ದು : ಸಂತೋಷ ಲಾಡ್

• ಉದಯವಾಹಿನಿ ಕಾರವಾರ


ಉದಯವಾಹಿನಿ ಚಿತ್ರ

ಪೆಹಲ್ಗಾಮ್ ದಾಳಿಯ ಉಗ್ರರ ಹತ್ಯೆ ಪ್ರಕರಣ ಮಾತಾಡಿದರೆ ,ಪ್ರಶ್ನೆ ಕೇಳಿದರೆ ,ದೇಶದ ವಿಷಯ ಮಾತನಾಡಬಾರದು ಎಂದು ಬಿಜೆಪಿ ಹೇಳುತ್ತದೆ. ವಿರೋಧ ಪಕ್ಷದವರು ಪ್ರಶ್ನೆಯನ್ನೇ ಮಾಡಬಾರದು ಎಂಬ ಮನೋಭಾವ ಬಿಜೆಪಿಯದ್ದು ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು.

ಕಾರವಾರದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು ಸೇನೆಯ ಮಾಹಿತಿ ಸೋರಿಕೆ ಮಾಡುವಂತಹ ಕೆಲಸ ಮಾಡಬಾರದು ಎಂದು ರಕ್ಷಣಾ ರಕ್ಷಣಾ ಸಚಿವ ರಾಜನಾಥ ಸಿಂಗ್ ಹೇಳುತ್ತಾರೆ. ಆದರೆ ಬಿಜೆಪಿಯವರು ಏನಾದರೂ ಹೇಳಿಕೆ ಕೊಡಬಹುದು. ಬಿಜೆಪಿ ಯ ಅಧಿಕಾರದಲ್ಲಿ ಬೇರೆಯವರು ಏನನ್ನು ಕೇಳಬಾರದು, ಬಿಜೆಪಿಗೆ ಪ್ರಶ್ನೆ ಕೇಳಿದಾಕ್ಷಣ ಅದು ದೇಶದ ವಿಷಯ ಎಂದು ಕೂಗು ಎಬ್ಬಿಸುತ್ತಾರೆ . ನಾವು ಸಹ ಇದೇ ದೇಶದವರಲ್ಲವೇ? ಎಂದು ಸಚಿವರು ಪ್ರಶ್ನಿಸಿದರು. ಎಲ್ಲಾ ರಾಜಕೀಯ ಪಕ್ಷಗಳು ದೇಶದ ಭಾಗವಲ್ಲವೇ?, ಪ್ರತಿಯೊಬ್ಬ ಪ್ರಜೆಗೂ ಪ್ರಶ್ನೆ ಕೇಳುವ ಹಕ್ಕಿದೆ. ವಿಷಯ ತಿಳಿದಿಕೊಳ್ಳುವ ಹಕ್ಕಿದೆ ಎಂದು ಸಚಿವ ಲಾಡ್ ಪ್ರತಿಪಾಸಿದರು. ಹೊರದೇಶದವರು ನಮ್ಮ ದೇಶದ ಬಗ್ಗೆ ಏನಾದರೂ ಮಾತನಾಡಬಹುದು, ಆ ಬಗ್ಗೆ ಬಿಜೆಪಿಯವರು ಏನೂ ಹೇಳಲ್ಲ. ರಾಜನಾಥ ಸಿಂಗ್ ಅವರು ಇಲ್ಲಿವರೆಗೆ ಪೆಹಲ್ಗಾಮ್ ವಿಷಯದ ಬಗ್ಗೆ ಯಾಕೆ ಮಾತನಾಡಿಲ್ಲ ಈಗ ಯಾಕೆ ಮಾತನಾಡಿದಾರೆ ಎಂದು ನಾವು ಕೇಳಬೇಕಿದೆ ಎಂದರು.

## ಐತಿಹಾಸಿಕ ಕೋಟೆ ವೀಕ್ಷಣೆಗೆ ಬರುವ ಪ್ರವಾಸಿಗರಿಗೆ ಹೆಚ್ಚಿದ ಸೌಲಭ್ಯ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

- ಐತಿಹಾಸಿಕ ಕೋಟೆ ವೀಕ್ಷಣೆಗೆ ಬರುವ ಪ್ರವಾಸಿಗರಿಗೆ ಹೆಚ್ಚಿದ ಸೌಲಭ್ಯ
- ರೂ.2 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ

ಐತಿಹಾಸಿಕ ಕೋಟೆ ವೀಕ್ಷಣೆಗೆ ಬರುವ ಪ್ರವಾಸಿಗರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ರೂ.2 ಕೋಟಿ ವೆಚ್ಚದಲ್ಲಿ ನಿರ್ಮಿಸಿದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಬುಧವಾರ ಲೋಕಾರ್ಪಣೆಗೊಳಿಸಿದರು.

ಕೋಟೆ ಮುಂಭಾಗದ ಮಯೂರ ಹೋಟೆಲ್ ಪಕ್ಕದಲ್ಲಿ 2018-19ನೇ ಸಾಲಿನ ಬಂಡವಾಳ ವೆಚ್ಚ ಯೋಜನೆಯಡಿ ಪ್ರವಾಸಿ ಮಾಹಿತಿ ಕೇಂದ್ರ, ಪಾರ್ಕಿಂಗ್ ಸೌಲಭ್ಯ, ಲಗೇಜ್ ಕೊಠಡಿ, ಕುಡಿಯುವ ನೀರಿನ ಸೌಲಭ್ಯ, ಪ್ರವಾಸಿಗರಿಗೆ ವಿಶ್ರಾಂತಿ ಕೊಠಡಿ, ಮಹಿಳಾ ಮತ್ತು ಪುರುಷ ಸ್ನಾನಗೃಹ ಹಾಗೂ ಶೌಚಾಲಯಗಳನ್ನು ನಿರ್ಮಿಸಲಾಗಿದೆ.

ಈ ವೇಳೆ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಪ್ರವಾಸೋದ್ಯಮ ಇಲಾಖೆಯಿಂದ ಕಾಮಗಾರಿಗಳು ಪೂರ್ಣಗೊಂಡು ಬಹಳ ದಿನಗಳು ಆಗಿದ್ದವು. ಕೆಲ ದಿನಗಳ ಹಿಂದೆ ಇಲ್ಲಿ ವೀಕ್ಷಣೆಗೆ ಆಗಮಿಸಿದ ವೇಳೆ, ಕಟ್ಟಡಗಳು ಪೂರ್ಣಗೊಂಡಿದ್ದು ಕಂಡು ಬಂದಿತು. ಶೀಘ್ರವೇ ಉದ್ಘಾಟನೆ ನೆರವೇರಿಸಿ ಬರುವ ಪ್ರವಾಸಗರಿಗೆ ಅನುಕೂಲ ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದೆ, ಅದರಂತೆ ಇಂದು ಪ್ರವಾಸಿ ಮಾಹಿತಿ ಕೇಂದ್ರ, ಪಾರ್ಕಿಂಗ್ ಸೌಲಭ್ಯ, ಲಗೇಜ್ ಕೊಠಡಿ, ಕುಡಿಯುವ ನೀರಿನ ಸೌಲಭ್ಯ, ಪ್ರವಾಸಿಗರಿಗೆ ವಿಶ್ರಾಂತಿ ಕೊಠಡಿ, ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ಲೋಕಾರ್ಪಣೆಗೊಳಿಸಿ ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಲಾಗಿದೆ. ಈ ಎಲ್ಲಾ ಸೌಲಭ್ಯಗಳು ಒಂದೇ ಆವರಣದ ಒಳಗಡೆ ಇದ್ದು, ರಕ್ಷಣೆಗಾಗಿ ಸುತ್ತಲೂ ಕಾಂಪೌಂಡ್ ನಿರ್ಮಿಸಲಾಗಿದೆ. ಐತಿಹಾಸಿಕ ಕೋಟೆ ವೀಕ್ಷಣೆಗೆ ಸಂಜೆಯವರೆಗೆ ಮಾತ್ರ ಅವಕಾಶವಿದ್ದು ಪ್ರವಾಸಿಗರು ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಪೌರಾಯುಕ್ತೆ ಎಂ.ರೇಣುಕಾ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕಿ ಡಾ.ನಾಗವೇಣಿ, ಕೆಆರ್‌ಐಡಿಎಲ್ ಕಾರ್ಯಪಾಲಕ ಅಭಿಯಂತರ ಟಿ.ಎನ್. ವಿನಾಯಕ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

## ಧರ್ಮಸ್ಥಳದ ಕೊಲೆ ಅತ್ಯಾಚಾರ ನಿಷ್ಪಕ್ಷಪಾತ ತನಿಖೆ ನಡೆಸಲಿ: ಒಕ್ಕೂಟದ ಆಗ್ರಹ

• ಉದಯವಾಹಿನಿ ಸಿಂಧನೂರು


ಉದಯವಾಹಿನಿ ಚಿತ್ರ

ದಾರ್ಮಿಕ ಕ್ಷೇತ್ರ ಎಂದು ಹೆಸರಾದ ಧರ್ಮಸ್ಥಳದ ವ್ಯಾಪ್ತಿಯಲ್ಲಿ ನೂರಾರು ಮಹಿಳೆಯರ ಕೊಲೆ, ಅತ್ಯಾಚಾರ ಹಾಗೂ ಅಸಹಜ ಸಾವುಗಳಂತಹ ಪೈಶಾಚಿಕ ಕೃತ್ಯಗಳು ನಡೆದಿರುವುದು ಅತ್ಯಂತ ಆಘಾತಕಾರಿಯಾಗಿದ್ದು. ಯಾವುದೇ ಪ್ರಭಾವ ಒತ್ತಡಕ್ಕೆ ಮಣಿಯದೆ ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು, ಪ್ರಗತಿಪರ ಸಂಘಟನೆಗಳ ಒಕ್ಕೂಟ ಸಿಂಧನೂರು ಈ ಮೂಲಕ ಆಗ್ರಹಿಸುತ್ತಿದೆ.

ನಗರದ ಪ್ರವಾಸಿ ಮಂದಿರದಿಂದ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ವಿರುದ್ಧ ಘೋಷಣೆ ಕೂಗುತ್ತ ತಾಲ್ಲೂಕು ಕಛೇರಿಗೆ ತಲುಪಿ ಪ್ರತಿಭಟನೆ ನಂತರ ತಹಶೀಲ್ದಾರ್ ಅವರು ಮೂಲಕ ಮುಖ್ಯಮಂತ್ರಿ ಮಾನ್ಯ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದರು

ಧರ್ಮಸ್ಥಳದಲ್ಲಿ ಆಕ್ರಮಕೂಟ ಕೊಲೆ ಮಾಡಿದವರನ್ನು ತಾನೇ ಕಾಡಿನಲ್ಲಿ ಹೂತುಹಾಕಿರುವುದಾಗಿ ಹೇ ಕೋರ್ಟ್‌ನಲ್ಲಿ ವ್ಯಕ್ತಿಯೊಬ್ಬ ಸಾಕ್ಷಿ ನುಡಿದಿದ್ದು, ಆದರೆ ಕೆಲವು ಪಟ್ಟಭದ್ರ ಹಿತಾಸಕ್ತಿಗಳಿಂದ ಧರ್ಮದ ಹೆಸರಿನಲ್ಲಿ ದಾರಿ ತಪ್ಪಿಸುವ ಕೆಲಸ ನಡೆಯುತ್ತಿದೆ. ಸಣ್ಣ ಘಟನೆ ಸಿಕ್ಕರೆ ಸಾಕು ಕೋಮುಬಣ್ಣ ಹಚ್ಚಿ ಕೂಗುಮಾರಿಯಂತೆ ಕೂಗ ಹಾಕುತ್ತಿದ್ದ ಬಿಜೆಪಿ ಮತ್ತು ಸಂಘ ಪರಿವಾರದವರು ಧರ್ಮಸ್ಥಳದ ವ್ಯಾಪ್ತಿಯಲ್ಲಿ ನೂರಾರು ಹಿಂದೂ ಮಹಿಳೆಯಾ ಕೊಲೆ, ಅತ್ಯಾಚಾರ , ಅಸಹಜ ಸಾವುಗಳು ನಡೆದರೂ ಯಾರೊಬ್ಬರೂ ಕೊಲೆಗೀಡಾದವರ ಪರ ಮಾತನಾಡದಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ ಎಂದು ಆಗ್ರಹಿಸಿದರು.

ಬಿಜೆಪಿಯ ಪ್ರತಿಪಕ್ಷದ ನಾಯಕ ಆರ್.ಅಶೋಕ, ಮುಸ್ಲಿಮ ಆರೋಪ, ಕೇರಳ ಸರ್ಕಾರದ ಬೆಂಬಲ ಇದೆ ಎಂದು ಹೇಳಿಕೆ ನೀಡುವ ಮೂಲಕ ಈ ಪ್ರಕರಣಕ್ಕೆ ಧರ್ಮ ಲೇಪನಹಚ್ಚಲು ಹೊರಟರುವುದು ಇಡೀ ತನಿಖೆಯ ದಿಕ್ಕು ತಪ್ಪಿಸುವ ತನಿಖಾ ಸಂಸ್ಥೆಗಳ ನೈತಿಕ ಕ್ಷಯ ಕುಸಿಯುವಂತೆ ಮಾಡುವ ಹುನ್ನಾರವಾಗಿದೆ ಎಂದರು. ಹಿಂದೂ ಮಹಿಳೆಯರು ಅಮಾನುಷವಾಗಿ ಕೊಲೆಗೀಡಾದರೂ ಆವ ಬಗ್ಗೆ ಕಿಂಚಿತ್ತೂ ಮರುಗದ ಆರ್.ಅಶೋಕ ನಾಚಿಕೆಗೇಡಿತನದ ಹೇಳಿಕೆ ನೀಡಿರುವುದು ಬಿಜೆಪಿಯ ಮಹಿಳಾ ವಿರೋಧಿ ನಡೆಯನ್ನು ಬಯಲು ಮಾಡಿದೆ ಎಂದು ಬಿಜೆಪಿ ನಾಯಕರು ವಿರುದ್ಧ ಬಸವಂತರಾಯ ಗೌಡ ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ, ಬಿ ಎನ್ ಯರದಿಹಾಳ. ರೇಮಶ ಪಾಟೀಲ್ ಬೆರೀಗಿ .ಚಿಟ್ಟಿ ಬಾಬು. ಬಸವರಾಜ ಬಾದರ್ಲಿ, ಅಮೀನ್ ಸಾಬ್ ರೇಣುಕಮ್ಮ .ಗೀತಾ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

> ಸಮಾಜವೇ ತಲೆತಗ್ಗಿಸುವಂತಹ ಹೇಯ ಕೃತ್ಯವಾಗಿದೆ. ಈ ಕುಂತು ರಾಜ್ಯ ಮಹಿಳಾ ಆಯೋಗ ಕೂಡ ಸರ್ಕಾರ ಈಗಾಗಲೇ ದೂರು ಸಲ್ಲಿಸಿದ ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಾಧೀಶರಾದ ಗೋಪಾಲಕೃಷ್ಣಗೌಡ ಅವರು ಸದ ಈ ಪ್ರಕರಣದ ಕುರಿತು ಧ್ವನಿ ಎತ್ತಿ ನ್ಯಾಯಕ್ಕಾಗಿ ಆಗ್ರಹಿಸಿದ್ದಾರೆ.
> -ಚಂದ್ರಶೇಖರ ಗೋರೇಬಾಳ
> ಪ್ರ.ಪ ಸಂಘಟನೆ ಸಂಚಾಲಕ

## ರೈತರಿಗೆ ಯೂರಿಯಾ ಸಮಸ್ಯೆ ಇಲ್ಲ: ಡಿಸಿ

• ಉದಯವಾಹಿನಿ ಬಳ್ಳಾರಿ

- ಶೇ 67 ರಷ್ಟು ಈಗಾಗಲೇ ಮಾರಾಟ
- ಅಗತ್ಯಕ್ಕಿಂತ ಹೆಚ್ಚು ಸಂಗ್ರಹ
- ಕಾಳ ಸಂತೆ ಮಾರಾಟಕ್ಕೆ ದೂರು ನೀಡಿದರೆ ಕ್ರಮ
- ಆ ಮೊದಲವಾರಕ್ಕೆ ಮತ್ತೆ ಬರಲಿದೆ ಸ್ಟಾಕ್
- ನ್ಯಾನೋ ಉತ್ಪನ್ನ ಬಳಕೆಗೆ ರೈತರು ಮುಂದಾಗಬೇಕು

ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರದ ಸಮಸ್ಯೆ ಇಲ್ಲ. ಮಾರುಕಟ್ಟೆಯಲ್ಲಿ ವಿನಾ ಕಸರಣ ಗೊಂದಲ ಸೃಷ್ಟಿ ಬೇಡ, ಈಗಾಗಲೇ ಜಿಲ್ಲೆಯಲ್ಲಿ ಶೇ 67 ರಷ್ಟು ಯೂರಿಯಾ ರೈತರು ಖರೀದಿ ಮಾಡಿದ್ದಾರೆಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ಹೇಳಿದ್ದಾರೆ.

ಸಂಜೆವಾಣಿಯೊಂದಿಗೆ ಮಾತನಾಡಿದ ಅವರು ಈ ಹಂಗಾಮಿನಲ್ಲಿ ಅವಧಿ ಪೂರ್ವ ಮಳೆಯಾಗಿದ್ದರಿಂದ ಇತರೇ ಜಿಲ್ಲೆಗಳಲ್ಲಿ ಒಂದಿಷ್ಟು ಸಮಸ್ಯೆಯಾಗಿದೆ. ಇದನ್ನು ಮಾಧ್ಯಮಗಳಲ್ಲಿ ನೋಡಿದ ರೈತರು ಮುಂದೆ ಸಿಗುತ್ತೋ, ಇಲ್ಲವೋ ಎಂದು ನಮ್ಮ ಜಿಲ್ಲೆಯಲ್ಲೂ ಅಗತ್ಯಕ್ಕಿಂತ ಹೆಚ್ಚು ಯೂರಿಯಾ ಗೊಬ್ಬರ ಖರೀದಿ ಮಾಡಿ ತಮ್ಮಮನೆಗಳಲ್ಲಿ ಸಂಗ್ರಹ ಮಾಡಿಕೊಂಡಿದ್ದಾರೆ.

ಒಂದು ವರ್ಷಕ್ಕೆ ಬೇಕಾಗುವಷ್ಟು ಒಂದೇ ಬಾರಿಗೆ ಪೂರೈಕೆ ಮಾಡಲು ಆಗಲ್ಲ. ಮುಂಗಾರು, ಹಿಂಗಾರು ಹಂಗಾಮು ನೋಡಿಕೊಂಡು ಬೆಳೆಗಳ ಅವಧಿಯ ಅನುಸಾರ ಪೂರೈಕೆ ಆಗುತ್ತೆ. ಸಧ್ಯ ಜಿಲ್ಲೆಯಲ್ಲಿ 6 ಸಾವಿರ ಟನ್ ಯೂರಿಯಾ ದಾಸ್ತಾನು ಇದೆ ಎಂದು ಹೇಳಿದ್ದಾರೆ.

**ಅನ್ ಲೋಡ್ ಸಮಸ್ಯೆ ಇಲ್ಲ:** ರೈಲ್ವೇ ಟ್ರಾಕ್ ಸಮಸ್ಯೆಯಿಂದ ಅನ್ ಲೋಡ್ ಸಮಸ್ಯೆ ಇತ್ತು ಅದನ್ನು ಸರಿಪಡಿಸಿದೆ. ಅಗಷ್ಟ ಮೊದಲ ವಾರದಲ್ಲಿ ಮತ್ತೆ ಯೂರಿಯಾ ಜಿಲ್ಲೆಗೆ ಪೂರೈಕೆ ಮಾಡಲು ರೇಕ್ ಗಳು ಬರುತ್ತಿವೆ.

# ರಸ್ತೆ ಅಗೆತ, ಪ್ರಕರಣ ದಾಖಲಿಸಿ: ಶಾಸಕ ಟಿ.ಡಿ.ರಾಜೇಗೌಡ

### ನೀರಿನ ಮೂಲವಿಲ್ಲದೆ ಕಾಮಗಾರಿ ನಡೆಸಿದರೆ ಬಿಲ್ ಮಂಜೂರು ಮಾಡಬೇಡಿ, ಕಾಮಗಾರಿ ಪಂಚಾಯಿತಿ ಸುಪರ್ದಿಗೆ ತೆಗೆದುಕೊಳ್ಳಬೇಡಿ

• ಉದಯವಾಹಿನಿ ಕೊಪ್ಪ


ಉದಯವಾಹಿನಿ ಚಿತ್ರ

**ಅನುಮತಿ ಪಡೆಯದೆ ರಸ್ತೆ ಅಗೆದಿರುವುದಕ್ಕೆ ಪ್ರಕರಣ ದಾಖಲಿಸಿ**

ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿ ನಡೆಸುವಾಗ ಅನುಮತಿ ಪಡೆಯದೆ ರಸ್ತೆ ಅಗೆದಿರುವುದಕ್ಕೆ ಪ್ರಕರಣ ದಾಖಲಿಸಿ, ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳಿ ಎಂದು ಶಾಸಕ ಟಿ.ಡಿ.ರಾಜೇಗೌಡ ಅವರು ಅಧಿಕಾರಿಗಳಿಗೆ ಹೇಳಿದರು. ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಎಸ್.ಎನ್.ರಾಮಸ್ವಾಮಿ ಮಾತನಾಡಿ, ಜೆಜೆಎಂ ಕಾಮಗಾರಿ ನಡೆಸುವಾಗ ಬೇಸಿಗೆಯಲ್ಲಿ ರಸ್ತೆ ಅಗೆದಿದ್ದಾರೆ, ಈವರೆಗೂ ಮುಚ್ಚಿಲ್ಲ ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಲೋಕೋಪಯೋಗಿ ಇಲಾಖೆ ಅಧಿಕಾರಿ, ಇದಕ್ಕೆ ಸಂಬಂಧಿಸಿ ಜಯಪುರ, ಹರಿಹರಪುರ ಠಾಣೆಗೆ ದೂರು ಕೊಟ್ಟಿದ್ದೇವೆ’ ಎಂದರು. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಸರ್ಕಲ್ ಇನ್ಸ್‌ಪೆಕ್ಟರ್ ಗುರುದತ್ ಕಾಮತ್ ಅವರಿಗೆ ಶಾಸಕರು ತಿಳಿಸಿದರು. ನೀರಿನ ಮೂಲವಿಲ್ಲದೆ ಕಾಮಗಾರಿ ನಡೆಸಿದರೆ ಬಿಲ್ ಮಂಜೂರು ಮಾಡಬೇಡಿ. ಕಾಮಗಾರಿ ಪಂಚಾಯಿತಿ ಸುಪರ್ದಿಗೆ ತೆಗೆದುಕೊಳ್ಳಬೇಡಿ’ ಎಂದು ಪಿಡಿಒಗಳಿಗೆ ಹೇಳಿದರು.

ತಹಶೀಲ್ದಾರ್ ಲಿಖಿತಾ ಮೋಹನ್ ಮಾತನಾಡಿ, 10 ಮನೆಗಳಿಂದ 50 ಮನೆಗಳವರೆಗೆ ಇದ್ದರೆ ಉಪಗ್ರಾಮ ಎಂದು, 50 ಮನೆಗಳ ಮೇಲೆ ಇದ್ದರೆ ಕಂದಾಯ ಗ್ರಾಮ ಎಂದು ಪರಿಗಣಿಸಿ ಎಲ್ಲ ಸವಲತ್ತು ಕೊಡಬಹುದು ಎಂದರು.

ಅರಣ್ಯ ಇಲಾಖೆ ಅಧಿಕಾರಿಗಳು ರೈತರ ಪರವಾಗಿಯೂ ಇರಬೇಕು. ಅರಣ್ಯ ವ್ಯವಸ್ಥಾಪನಾಧಿಕಾರಿ ಆದೇಶವನ್ನು ಡಿಎಫ್‌ಒ ತಿರಸ್ಕರಿಸುವಂತಿಲ್ಲ. ಡಿಎಫ್‌ಒ ಬೇಕಾದರೆ ಮೇಲ್ಮನವಿ ಸಲ್ಲಿಸಬಹುದು ಎಂದು ಶಾಸಕರು ಹೇಳಿದರು. ಭೂ ಮಂಜರಾತಿ ಸಮಿತಿ ಅಧ್ಯಕ್ಷ ಕೆ.ಜಿ.ಶೋಭಿಂತ್, ಫಾರಂ 50, 53ರಲ್ಲಿ ಭೂಮಿ ಮಂಜೂರು ಆಗದೇ 57ರಲ್ಲಿ ಅರ್ಜಿ ಕೊಟ್ಟಿದ್ದನ್ನು ಪರಿಗಣಿಸಬೇಕು ಎಂದರು.

ದನಗಳನ್ನು ಅರಣ್ಯಕ್ಕೆ ಬಿಡಬೇಡಿ ಎಂದು ಅರಣ್ಯ ಸಚಿವರು ಮಾಡಿರುವ ಆದೇಶ ಮಲೆನಾಡಿಗೆ ಕಂಟಕ ಎಂದು ಎಸ್.ಎನ್.ರಾಮಸ್ವಾಮಿ ಹೇಳಿದರು. ಹೊರ ರಾಜ್ಯದ ಜಾನುವಾರುಗಳನ್ನು ರಾಜ್ಯದ ಅರಣ್ಯದಲ್ಲಿ ಮೇಯಿಸಲು ಅವಕಾಶವಿಲ್ಲದಂತೆ ಸಚಿವರು ಆದೇಶಿಸಿದ್ದಾರೆ. ನಮ್ಮ ಭಾಗಕ್ಕೆ ಅನ್ವಯ ಆಗದು ಎಂದು ರಾಜೇಗೌಡ ಹೇಳಿದರು. ಕೆಡಿಪಿ ಸದಸ್ಯ ನಾರ್ವೆ ಅಶೋಕ್ ಮಾತನಾಡಿ, ಹೇರೂರು ಭಾಗದಲ್ಲಿ ಬೀಟೆ ಮರ ಕಡಿದ ಪ್ರಕರಣಕ್ಕೆ ಕ್ರಮವಾಗಿಲ್ಲ ಎಂದರು. ಪ್ರಕರಣ ದಾಖಲಾಗಿದ್ದು, ವ್ಯಕ್ತಿ ಬಂಧನಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಆರ್.ಎಫ್.ಒ ರಂಗನಾಥ್ ಹೇಳಿದರು.

ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿಯೂ ಆದ ಜಂಟಿ ಕೃಷಿ ನಿರ್ದೇಶಕಿ ಸುಜಾತಾ ಎಚ್.ಎಲ್ ಮಾತನಾಡಿ, ’ಈ ವರ್ಷ ಪೂರೈಕೆಯಾಗಿರುವ ಯೂರಿಯಾ ಗೊಬ್ಬರದ ಅರ್ಧದಷ್ಟು ಮಾತ್ರ ಮುಂದಿನ ವರ್ಷ ಪೂರೈಕೆಯಾಗಲಿದೆ. ನ್ಯಾನೋ ಗೊಬ್ಬರ ಪೂರೈಕೆಗೆ ಆದ್ಯತೆ ನೀಡಲಾಗಿದೆ ಎಂದರು.

> ಈ ಹಿಂದೆ ವಸತಿ ಮಂಜೂರಾದ ಸಮಯ ಮಾರ್ಟ್‌ಗೇಜ್ ಮಾಡಿ, ಪಂಚಾಯಿತಿಯವರು ಹಕ್ಕುಪತ್ರ ವಾಪಸ್ ಕೊಟ್ಟಿಲ್ಲ. ಜನರಿಗೆ ಬ್ಯಾಂಕ್ ಸಾಲ ಇನ್ನಿತರ ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ. ಅಗಲಿ ಗ್ರಾಮದ ಜನರು ಇಂತಹ ಸಮಸ್ಯೆ ಎದುರಿಸುತ್ತಿದ್ದಾರೆ ಎಂದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಡಿ.ನವೀನ್ ಕುಮಾರ್, ಈ ಬಗ್ಗೆ ಗಮನ ಹರಿಸಿ, ಸಮಸ್ಯೆ ಬಗೆಹರಿಸಲಾಗುವುದು -ಕೆ.ಜಿ.ಶೋಭಿಂತ್
> ಭೂ ಮಂಜೂರಾತಿ ಸಮಿತಿ ಅಧ್ಯಕ್ಷ

## ಮಿನಿ ನ್ಯೂಸ್

### ಮನೆ ಬೀಗ ಮುರಿದು 4.74 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

• ಉದಯವಾಹಿನಿ ಕಲಬುರಗಿ

ಮನೆ ಬೀಗ ಮುರಿದು 4.74 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಕೋಟನೂರ (ಡಿ) ಗ್ರಾಮದ ಬಿ.ಎಸ್.ಎನ್.ಎಲ್.ಲೇಔಟ್ ಹತ್ತಿರ ನಡೆದಿದೆ. ಹಾಗರಗುಂಡಗಿಯ ಕೋ - ಆಪರೇಟಿವ್ ಸೊಸೈಟಿಯಲ್ಲಿ ಕಾರ್ಯದರ್ಶಿಯಾಗಿರುವ ಸಿದ್ರಾಮರೆಡ್ಡಿ ಎಂಬುವವರ ಮನೆ ಬೀಗ ಮುರಿದು ಕಳ್ಳರು 3 ಲಕ್ಷ ರೂ.ನಗದು, 60 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಒಂದು ಜೊತೆ ಕಿವಿಯೋಲೆ, 36 ಸಾವಿರ ರೂ.ಮೌಲ್ಯದ 6 ಗ್ರಾಂ.ಬಂಗಾರದ ಎರಡು ಉಂಗುರ, 47 ಸಾವಿರ ರೂ.ಮೌಲ್ಯದ 7 ಗ್ರಾಂ.ಬಂಗಾರದ ಹರಳಿನ ಉಂಗುರ, 36 ಸಾವಿರ ರೂ.ಮೌಲ್ಯದ 6 ಗ್ರಾಂ.ಬಂಗಾರದ ಕಿವಿಯೋಲೆ ಸೇರಿದಂತೆ 4.74 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ. ಇವರು ನಾಗರ ಪಂಚಮಿ ಹಬ್ಬದ ನಿಮಿತ್ಯ ಮನೆಗೆ ಬೀಗ ಹಾಕಿಕೊಂಡು ಪತ್ನಿ ಮತ್ತು ಮಕ್ಕಳೊಂದಿಗೆ ಸ್ವಗ್ರಾಮ ಕೌಲಗ (ಕೆ) ಗ್ರಾಮಕ್ಕೆ ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದು ಬಂದಿದೆ. ಗೊಬ್ಬರ ಖರೀದಿಗಾಗಿ ಕೋ-ಆಪರೇಟಿವ್ ಸೊಸೈಟಿಯ 3 ಲಕ್ಷ ನಗದನ್ನು ಮನೆಯಲ್ಲಿ ಇಟ್ಟಿದ್ದರು ಎಂದು ತಿಳಿದುಬಂದಿದೆ.

### ಧರಣಿಗೆ ವಾಹನ ಚಾಲಕರ ಬೆಂಬಲ

• ಉದಯವಾಹಿನಿ ಆಲಮೇಲ

ರುಕುಂಪೂರ ರಸ್ತೆ ತೆರವು, ವಿವಿದ ಸಮುದಾಯಗಳ ಬೇಡಿಕೆಗಳನ್ನು ಇಡೇರಿಸುವಂತೆ ಆಗ್ರಹಿಸಿ ಹಮ್ಮಿಕೊಂಡಿದ್ದ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಹೋರಾಟಕ್ಕೆ ಮಂಗಳವಾರ ಪಟ್ಟಣದ ವಾಹನ ಚಾಲಕರು ಬೆಂಬಲಿಸಿ ಧರಣಿಯಲ್ಲಿ ಪಾಲ್ಗೊಂಡರು. ವಾಹನ ಚಾಲಕ ಸುಬಾಸ ಗೋಳಸಾರ ಮಾತನಾಡಿ ಪಟ್ಟಣದ ಒಳತಿಗಾಗಿ ಹಮ್ಮಿಕೊಂಡಿರುವ ಈ ಹೋರಾಟಕ್ಕೆ ವಾಹನ ಚಾಲಕರು ಇಂದು ವೃತ್ತಿಯನ್ನು ಬಂದ ಮಾಡಿ ಬೆಂಬಲಿಸಿದ್ದೆವೆ. ಆಲಮೇಲ ಪಟ್ಟಣದ ಒಳತಿಗಾಗಿ ಯಾವುದೆ ಹೋರಾಟ ಹಮ್ಮಿಕೊಂಡರು ಅದಕ್ಕೆ ನಮ್ಮ ವಾಹಾನ ಚಾಲಕರ ಸಂಘದಿಂದ ಬೆಂಬಲ ನೀಡುವದಾಗಿ ಹೇಳಿದರು.

### ನಾಲ್ವರು ಮೀನುಗಾರರು ಕಣ್ಮರೆ

• ಉದಯವಾಹಿನಿ ಭಟ್ಕಳ

ಮೀನುಗಾರಿಕೆ ನಡೆಸಲು ತಾಲ್ಲೂಕಿನ ಜಾಲಿ ಕಡಲತೀರದಿಂದ ಸಾಂಪ್ರದಾಯಿಕ ದೋಣಿಯಲ್ಲಿ ಬುಧವಾರ ಮಧ್ಯಾಹ್ನ ತೆರಳಿದ್ದ ನಾಲ್ವರು ಅರಬ್ಬಿ ಸಮುದ್ರದಲ್ಲಿ ಕಣ್ಮರೆಯಾಗಿದ್ದಾರೆ. ಮೀನುಗಾರರು ಇದ್ದ ದೋಣಿ ಮಗುಚಿ ಬಿದ್ದಿದ್ದು, ಅಲೆಗಳ ರಭಸಕ್ಕೆ ದಡದ ಬಳಿ ಬಂದಿದೆ. ಅದರಲ್ಲಿದ್ದ ಮೀನುಗಾರರು ಸಮುದ್ರದ ಅಲೆಗಳಿಗೆ ಸಿಲುಕಿ ಕಣ್ಮರೆ ಆಗಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ. ದೋಣಿಯಲ್ಲಿ 6 ಮಂದಿ ಇದ್ದರು. ಅವರ ಪೈಕಿ ಇಬ್ಬರು ಈಜಿ ದಡ ಸೇರಿದ್ದಾರೆ. ಜಾಲಿಕೋಡಿಯ ರಾಮಕೃಷ್ಣ ಮೊಗೇರ (40), ಅಳ್ವೆಕೋಡಿಯ ಸತೀಶ ಮೊಗೇರ (26), ಗಣೇಶ ಮೊಗೇರ (27), ನಿಶ್ಚಿತ ಮೊಗೇರ (30) ಕಣ್ಮರೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

### ಇಂದಿರಾ ಕ್ಯಾಂಟೀನ್ ಉದ್ಘಾಟನೆ

• ಉದಯವಾಹಿನಿ ಹುಬ್ಬಳ್ಳಿ

ಈ ಹಿಂದೆ ಕಾಂಗ್ರೆಸ್ ಸರ್ಕಾರ ಬಡವರಿಗಾಗಿ ಇಂದಿರಾ ಕ್ಯಾಂಟೀನ್ ಯೋಜನೆ ಜಾರಿಗೆ ತಂದಿತ್ತು. ಆದರೆ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಇದು ನಿರ್ಲಕ್ಷ್ಯಕ್ಕೆ ಒಳಗಾಗಿತ್ತು. ಈಗ ನಮ್ಮ ಸರ್ಕಾರ ಮತ್ತೆ ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿ ಮಾಡುತ್ತಿದೆ’ ಶಾಸಕ ಪ್ರಸಾದ ಅಬ್ಬಯ್ಯ ಹೇಳಿದರು. ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 64ನೇ ವಾರ್ಡ್ ತಬೀಬ್ ಲ್ಯಾಂಡ್ ಬಡಾವಣೆಯಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ, ಮಾತನಾಡಿದರು. ಪೂರ್ವ ವಿಧಾನಸಭಾ ಕ್ಷೇತ್ರದ ಸೋನಿಯಾಗಾಂಧಿ ನಗರ, ಎಸ್.ಎಂ.ಕೃಷ್ಣನಗರ, ಶಿವಶಂಕರ ಕಾಲೊನಿ ಸೇರಿದಂತೆ ಐದು ಕಡೆ ಕ್ಯಾಂಟೀನ್ ಸ್ಥಾಪಿಸಲಾಗಿದ್ದು, ಇನ್ನೂ ಕೆಲವು ಬಡಾವಣೆಗಳಲ್ಲಿ ಕ್ಯಾಂಟೀನ್ ತೆರೆಯುವ ಚಿಂತನೆ ಇದೆ’ ಎಂದರು. ಇಂದಿರಾ ಕ್ಯಾಂಟೀನ್‌ಗಳಲ್ಲಿ ಕಡಿಮೆ ದರದಲ್ಲಿ ಬಡವರು, ಕೂಲಿ ಕಾರ್ಮಿಕರು, ಆಟೊ ಚಾಲಕರಿಗೆ ಉತ್ತಮ ಗುಣಮಟ್ಟದ ಊಟ, ಉಪಾಹಾರ ಸಿಗುವುದರಿಂದ ಹೆಚ್ಚು ಅನುಕೂಲವಾಗಿದೆ ಎಂದರು.

### ಗೊಬ್ಬರ ಶ್ರೀಮಂತರ ಪಾಲು: ರೈತ ಕಂಗಾಲು

• ಉದಯವಾಹಿನಿ ಹಾವೇರಿ

ಜಿಲ್ಲೆಯ ರೈತರ ಬೇಡಿಕೆಗೆ ತಕ್ಕಷ್ಟು ಯೂರಿಯಾ ಗೊಬ್ಬರ ಪೂರೈಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ರೈತರ ಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಲಾಗುತ್ತಿದೆ’ ಎಂದು ಆರೋಪಿಸಿ ಬಿಜೆಪಿ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಸಲಾಯಿತು. ನಗರದ ಹೊರವಲಯದಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಎದುರು ಸೇರಿದ್ದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ವಿರುದ್ಧ ಘೋಷಣೆ ಕೂಗಿದರು.

ಪ್ರತಿಭಟನೆಯ ಬಹಿರಂಗ ಸಭೆ ಮುಗಿಸಿದ ಮುಖಂಡರು-ಕಾರ್ಯಕರ್ತರು, ಜಿಲ್ಲಾಧಿಕಾರಿ ಕಚೇರಿಯೊಳಗೆ ತೆರಳಿ ಮುತ್ತಿಗೆ ಹಾಕಲು ಮುಂದಾಗಿದ್ದರು. ಕಚೇರಿಯ ಮುಖ್ಯ ಪ್ರವೇಶ ದ್ವಾರದಲ್ಲಿ ಬ್ಯಾರಿಕೇಡ್ ಹಾಕಿದ್ದ ಪೊಲೀಸರು, ಪ್ರತಿಭಟನಕಾರರನ್ನು ರಸ್ತೆಯಲ್ಲಿಯೇ ತಡೆದು ನಿಲ್ಲಿಸಿದರು. ಸ್ಥಳಕ್ಕೆ ಬಂದ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ, ಪ್ರತಿಭಟನಕಾರರ ಜೊತೆ ಮಾತುಕತೆ ನಡೆಸಿದರು. ’ಜಿಲ್ಲೆಯಲ್ಲಿ ಪ್ರತಿಯೊಬ್ಬ ರೈತರಿಗೂ ಗೊಬ್ಬರ ಸಿಗುವಂತಾಗಬೇಕು. ಕಾಳಸಂತೆಯಲ್ಲಿ ಗೊಬ್ಬರ ಮಾರಾಟ ತಡೆದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು’ ಎಂದು ಆಗ್ರಹಿಸಿದ ಪ್ರತಿಭಟನಕಾರರು, ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

**ಕೃಷಿ ಇಲಾಖೆ ಅಧಿಕಾರಿಗಳು ಶಾಮೀಲು:** ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ಕೃಷಿ ಇಲಾಖೆಯ ಮಾಜಿ ಸಚಿವರೂ ಆಗಿರುವ ಬಿಜೆಪಿ ಮುಖಂಡ ಬಿ.ಸಿ.ಪಾಟೀಲ, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ, ರೈತ ವಿರೋಧಿಯಾಗಿದೆ. ಕೇಂದ್ರ ಸರ್ಕಾರ ನೀಡಿರುವ ಗೊಬ್ಬರವನ್ನು ರಾಜ್ಯ ಸರ್ಕಾರ, ಕಾಳಸಂತೆಯಲ್ಲಿ ಮಾರುತ್ತಿದೆ. ಕೃಷಿ ಇಲಾಖೆಯ ಅಧಿಕಾರಿಗಳು ಇದರಲ್ಲಿ ಶಾಮೀಲಾಗಿದ್ದಾರೆ’ ಎಂದು ದೂರಿದರು.


ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಕುಟುಂಬದಲ್ಲಿ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ. ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ.

**ವೃಷಭ** ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ವ್ಯಾಪಾರಿಗಳಿಗೆ ಇಂದು ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು.

**ಮಿಥುನ** ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ. ಇಂದು ನೀವು ಹಣವನ್ನು ಉಳಿಸುವಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ.

**ಕರ್ಕಾಟಕ** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ಸಿಂಹ** ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ. ನಿಮ್ಮ ಧೈರ್ಯ ಪ್ರೀತಿಯನ್ನು ಗೆಲ್ಲಬಹುದು.

**ಕನ್ಯಾ** ನೀವು ದೀರ್ಘಕಾಲದ ಆಧಾರದ ಮೇಲೆ ಹೂಡಿಕೆ ಮಾಡಿದಲ್ಲಿ ಗಣನೀಯ ಲಾಭ ಮಾಡುತ್ತೀರಿ. ನೀವು ಕಾಳಜಿ ವಹಿಸುವ ಯಾರಾದರ ಜೊತೆಗಿನ ಸಂವಹನದ ಕೊರತೆ ನಿಮಗೆ ಖಿನ್ನತೆಯನ್ನು ಉಂಟುಮಾಡುತ್ತದೆ.

**ತುಲಾ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ.

**ವೃಶ್ಚಿಕ** ನಿಮ್ಮ ನಿರಾಶಾದಾಯಕ ನಡವಳಿಕೆಯಿಂದಾಗಿ ನೀವು ಯಾವುದೇ ಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿ ಯನ್ನು ಕುಂಠಿತಗೊಳಿಸಿದೆಯೆಂದು ಕಂಡುಕೊಳ್ಳಲು ಇದು ಸಕಾಲ.

**ಧನಸ್ಸು** ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ಮಕರ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

**ಕುಂಭ** ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು, ಆದ್ದರಿಂದ ಧೃಢವಾಗಿ, ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

**ಮೀನ** ದೇಹದ ನೋವು ಮತ್ತು ಒತ್ತಡ ಸಂಬಂಧಿತ ಸಮಸ್ಯೆಗಳನ್ನು ತಳ್ಳಿಹಾಕಲು ಸಾಧ್ಯವಿಲ್ಲ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ.

### ವಿದ್ಯಾರ್ಥಿಗಳ ಸುರಕ್ಷತೆ, ಆರೋಗ್ಯ ಮತ್ತು ಗುಣಮಟ್ಟದ ಶಿಕ್ಷಣಕ್ಕೆ ಹಾನಿ ಮಾಡುತ್ತಿರುವ ಶಾಲೆಯ ಮೇಲ್ಛಾವಣಿ

# ಕುಸಿಯುವ ಮೇಲ್ಛಾವಣಿ ಕೆಳಗೆ ಮಕ್ಕಳ ಭವಿಷ್ಯವೆಂದು ಕರೆಯುವುದು ಹೇಗೆ!

**ಉದಯ ವಾಹಿನಿ ವಿಶೇಷ**

• ಉದಯವಾಹಿನಿ ಯಾದಗಿರಿ

ಕುಸಿದು ಬೀಳುತ್ತಿರುವ ಶಾಲಾ ಮೇಲ್ಛಾವಣಿ, ಬಯಲಿನಲ್ಲಿ ಪಾಠ, ಪ್ರವಚನ, ಮೂಲಭೂತ ಸೌಕರ್ಯ ಮೊದಲೇ ಇಲ್ಲ ಇಂತಹ ಗಂಭೀರವಾದ ಶೈಕ್ಷಣಿಕ ಸವಾಲುಗಳನ್ನು ಎದುರಿಸುತ್ತಿರುವ ಪರಿಸ್ಥಿತಿ, ವಿದ್ಯಾರ್ಥಿಗಳ ಸುರಕ್ಷತೆ, ಆರೋಗ್ಯ ಮತ್ತು ಗುಣಮಟ್ಟದ ಶಿಕ್ಷಣಕ್ಕೆ ಹಾನಿ ಮಾಡುತ್ತಿರುವ ಶಾಲೆಯ ಮೇಲ್ಛಾವಣಿ, ಶಾಲೆಗೆ ಬರಲು ಹಿಂದೇಟು ಹಾಕುತ್ತಿರುವ ವಿದ್ಯಾರ್ಥಿಗಳು, ಕುಸಿಯುವ ಮೇಲ್ಛಾವಣಿ ಕೆಳಗೆ ಮಕ್ಕಳ ಭವಿಷ್ಯವೆಂದು ಕರೆಯುವುದು ಹೇಗೆ....ಎಂಬುದು ಪಾಲಕರಲ್ಲಿ ಕಾಡುತ್ತಿರುವ ಪ್ರಶ್ನೆ. ಹೌದು, ಹಿಂದುಳಿದ ಜಿಲ್ಲೆಯೆಂದು ಕರೆಯಲ್ಪಡುವ ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ರೊಟ್ನಡಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯು ಮೂಲಭೂತ ಸೌಕರ್ಯ ವಂಚಿತ ಶಾಲೆಯಾಗಿದೆ.

ಈ ಶಾಲೆಗೆ ಮೂಲಭೂತ ಸೌಕರ್ಯ, ನೂತನ ಕಟ್ಟಡ ನಿರ್ಮಾಣಕ್ಕಾಗಿ ಹಲವು ಬಾರಿ ಮನವಿ ಸಲ್ಲಿಸಿದರು. ಕೂಡ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸಂಪೂರ್ಣ ನಿರ್ಲಕ್ಷ್ಯವಹಿಸುತ್ತಿದ್ದಾರೆ ಎಂದು ಪಾಲಕರು ಹಿಡಿಶಾಪ ಹಾಕುತ್ತಿದ್ದಾರೆ.



ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

**ಉದಯ ವಾಹಿನಿ ಹೈಲೆಟ್ಸ್**

- ವಡಗೇರಾ ತಾಲ್ಲೂಕಿನ ರೊಟ್ನಡಗಿ ಗ್ರಾಮದ ಸರ್ಕಾರಿ ಶಾಲೆಯ ಗತಿ.
- ಕೈಯಲ್ಲಿ ಜೀವ ಹಿಡಿದುಕೊಂಡು ಶಾಲೆಗೆ ಬರುತ್ತಿರುವ ವಿದ್ಯಾರ್ಥಿಗಳು.
- ಶಾಲೆಯ ಮೇಲ್ಛಾವಣಿ ಯಾವಗ ಬೀಳುತ್ತೆ ಏನೂ ಗೊತ್ತಿಲ್ಲ.
- ಡೋಂಟ್‌ಕೇರ್ ಅನ್ನುತ್ತಿರುವ ಅಧಿಕಾರಿಗಳು.

**ಮೂಲಭೂತ ಸೌಕರ್ಯಗಳ ಕೊರತೆ**

ಶಾಲೆಗೆ ಅಮೃತ ಯೋಜನೆ ಅಡಿ ಸುಮಾರು 5 ಲಕ್ಷ ರೂಪಾಯಿ ಮೊತ್ತದ ಹೈಟೆಕ್ ಶೌಚಾಲಯ ಮಂಜೂರಾಗಿದ್ದು ಆದರೆ ಅದು ಸಂಪೂರ್ಣ ಕಳಪೆ ಮಟ್ಟದಿಂದ ಕಟ್ಟಲಾಗಿದೆ, ಬಾಗಿಲುಗಳಿಲ್ಲ ನೀರಿನ ವ್ಯವಸ್ಥೆ ಇಲ್ಲಾ ಇದರಿಂದ ಮಹಿಳಾ ಶಿಕ್ಷಕರಿಗೂ ಮತ್ತು ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗುತ್ತಿದೆ ಬಹಿರ್ದೆಸೆಗೆ ಬೈಯಲು ಪ್ರದೇಶವೇ ಗತಿಯಾಗಿದೆ. ಸರಿಯಾದ ತಡೆಗೋಡೆ ಇಲ್ಲ ಮತ್ತು ಮಳೆ ಬಂದರಂತೂ ಶಾಲೆಯ ಜಿಟಿ ಜಿಟಿ ಸೋರುತ್ತದೆ ಕನ್ನಡ ಶಾಲೆಗಳು ಉಳಿವಿಗಾಗಿ ಸರ್ಕಾರ ಕೋಟಿಗಟ್ಟಲೆ ಹಣ ಖರ್ಚು ಮಾಡಿದರು ಕೂಡಾ ಸರಕಾರಿ ಶಾಲೆಗಳಲ್ಲಿ ಸರಿಯಾದ ಮೂಲಭೂತ ಸೌಕರ್ಯಗಳಿಲ್ಲದ ಕಾರಣ ಪೋಷಕರು ಸರ್ಕಾರಿ ಶಾಲೆಗಳಿಗೆ ಕಳಿಸಲು ಹಿಂದೇಟು ಹಾಕುತ್ತಿದ್ದಾರೆ.



ಅಧಿಕಾರಿಗಳ ನಿರ್ಲಕ್ಷ್ಯವೇ ಸರಿ ಇಂಥ ಹಲವು ಕಾರಣಗಳಿಗಾಗಿ ಕನ್ನಡ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಸಂಖ್ಯೆ ಕಡಿಮೆಯಾಗಿ ಸರಕಾರಿ ಶಾಲೆಗಳು ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗುತ)ತ್ತಿದೆ. ಕೂಡಲೇ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಮೂಲಭೂತ ಸೌಕರ್ಯಗಳ ಒದಗಿಸುವುದರ ಜೊತೆಗೆ ನೂತನ ಕಟ್ಟಡ ನಿರ್ಮಾಣಕ್ಕೆ ಮುಂದಾಗಬೇಕು ಒಂದು ವೇಳೆ ನಿರ್ಲಕ್ಷ್ಯ ವಹಿಸಿದ್ದಲ್ಲಿ ಶಾಲೆಗೆ ಬೀಗ ಜಡಿದು ಮಕ್ಕಳು ಪಾಲಕರೊಂದಿಗೆ ಉಗ್ರ ಹೋರಾಟ ಮಾಡಬೇಕಾಗುತ್ತೆ.

-ಅಬ್ದುಲ್ ಚಿಗಾನೂರಕರವೇ, ತಾಲ್ಲೂಕು ಅಧ್ಯಕ್ಷ ವಡಗೇರಾ


ಉದಯವಾಹಿನಿ ಚಿತ್ರ

**ಕುಸಿಯುತ್ತಿರುವ ಶಾಲಾ ಕಟಡಗಳು**

ಈ ಶಾಲೆಯಲ್ಲಿ ಒಂದರಿಂದ ಏಳನೇ ತರಗತಿಯವರೆಗೆ ಇದ್ದು ವಿದ್ಯಾರ್ಥಿಗಳ ಸಂಖ್ಯೆ ಸುಮಾರು 100.ಕ್ಕೂ ಹೆಚ್ಚು ಇದೆ ಒಬ್ಬರು ಕಾಯಂ ಶಿಕ್ಷಕರಿದ್ದು ಮೂರು ಜನ ಅತಿಥಿ ಶಿಕ್ಷಕರಿದ್ದಾರೆ ಇಲ್ಲಿನ ಕಟ್ಟಡ ತುಂಬಾ ಹಳೆಯದಾಗಿದೆ ಇಲ್ಲಿ ಶೌಚಾಲಯದ ಸಮಸ್ಯೆ ಇದ್ದು ಇದರಿಂದ ಮಕ್ಕಳ ಕಲಿಕೆಗೆ ತುಂಬಾ ತೊಂದರೆಯಾಗುತ್ತಿದೆ. ಅಲ್ಲಲ್ಲಿ ಗೋಡೆಗಳು ಸೀಳಿ ನಿಂತಿವೆ ಮತ್ತು ಮೇಲ್ಛಾವಣಿ ಕುಸಿದು ಬೀಳುತ್ತಿದೆ ಇದರಿಂದ ಹಲವಾರು ಮಕ್ಕಳು ಶಾಲೆಗೆ ಬರುತ್ತಿಲ್ಲ ಮೇಲ್ಛಾವಣಿ ಕುಸಿಯುತ್ತಿರುವುದರಿಂದ ಶಿಕ್ಷಕರು ಬಯಲಿನಲ್ಲಿಯ ಮಕ್ಕಳಿಗೆ ಪಾಠ ಮಾಡುತ್ತಿದ್ದಾರೆ. ಮಳೆ ಬಂದರೆ ಸಾಕು ಮಕ್ಕಳು ಮನೆಗೆ ತೆರಳುತ್ತಿದ್ದಾರೆ.

## ಕಾಂಗ್ರೆಸ್ ಗ್ಯಾರಂಟಿ ಎಲ್ಲಾ ವರ್ಗಕ್ಕೆ ಸಿಕ್ಕಿದೆ: ಸೌಮ್ಯ ರೆಡ್ಡಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುದ್ದೇಬಿಹಾಳ

ಕಾಂಗ್ರೆಸ್ ಪಕ್ಷದ ಎಲ್ಲಾ ಗ್ಯಾರಂಟಿಗಳು ಪ್ರತಿ ವರ್ಗದ ಜನರಿಗೆ ತಲುಪಿದೆ ಕಾಂಗ್ರೆಸ್ ಪಕ್ಷ ಯಾವುದೇ ಜಾತಿ ಧರ್ಮ ನೋಡಿಲ್ಲವೆಂದು ಕೆಪಿಸಿಸಿ ಮಹಿಳಾ ಘಟಕದ ರಾಜ್ಯ ಅಧ್ಯಕ್ಷೆ ಮಾಜಿ ಶಾಸಕಿ ಶ್ರೀಮತಿ ಸೌಮ್ಯ ರೆಡ್ಡಿ ಹೇಳಿದರು ಬುಧುವಾರ ಪಟ್ಟಣದ ಟಾಪ್ ಇನ್ ಟೌನ್ ಹಾಲ್‌ನಲ್ಲಿ ನಡೆದ ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ನೂತನ ಸದಸ್ಯರ ಪದಗ್ರಹಣ ಶಕ್ತಿ ಸಮಾವೇಶ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು ರಾಜ್ಯದ ಮಹಿಳೆಯರ ಕೈ ಬಲಪಡಿಸಲು ಕಾಂಗ್ರೆಸ್ ಸರಕಾರ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, ಪ್ರತಿ ತಿಂಗಳು 2 ಸಾವಿರೂ ಗೃಹ ಲಕ್ಷ್ಮೀ ಯೋಜನೆ ಮಾಡಿದೆ ಅದರಿಂದ ಮನೆ ಖರ್ಚು, ಮಕ್ಕಳ ಶಾಲಾ ಫೀಜು ಸೇರಿದಂತೆ ಮಹಿಳೆ ಸ್ವಾವಲಂಬಿಯಾಗಿ ಬದಕಲು ಶಕ್ತಿ ನೀಡಿದೆ ,ಯುವಕರಿಗೆ ಯುವನಿಧಿ ನೀಡಿದೆ ಕಾಂಗ್ರೆಸ್ ಪಕ್ಷದ ಈ ಜನಪಯೋಗಿ ಕಾರ್ಯಗಳನ್ನು ಪಕ್ಷದ ಕಾರ್ಯಕರ್ತರು ಸಾಮಾಜಿಕ ಜಾಲತಾಣದಲ್ಲಿ ಪ್ರಚಾರ ಮಾಡಬೇಕು ಕಾಂಗ್ರೆಸ್ ಪಕ್ಷದ ಕೈ ಬಲಪಡಿಬೇಕೆಂದು ಕರೆ ನೀಡಿದರು. ಕೆ ಎಸ್ ಡಿ ನಿಗಮದ ಅಧ್ಯಕ್ಷ ಶಾಸಕ ಸಿ.ಎಸ್ ನಾಡಗೌಡ ಅಪ್ಪಾಜಿ ಹಾಗೂ ಕೆಪಿಸಿಸಿ ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಪಲ್ಲವಿ ನಾಡಗೌಡ ಕಾಂಗ್ರೆಸ್ ಪಕ್ಷದ ಪಂಚ ಗ್ಯಾರಂಟಿ ಮೂಲಕ ಜನರಿಗೆ ನೆರವು ನೀಡಿದೆ ಮಹಿಳಾ ಸಬಲಿಕರಣಕ್ಕೆ ಮಹಿಳೆಯರಿಗೆ ರಾಜಕೀಯದಲ್ಲಿ ವಿಶೇಷ ಮೀಸಲಾತಿ ನೀಡಿದೆ ಎಂದರು. ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಸಮಿತಿಯ ತಾಲ್ಲೂಕ ಅಧ್ಯಕ್ಷ ಶಿವಶಂಕರಗೌಡ ಹಿರೇಗೌಡರ, ವೈ ಹೆಚ್ ವಿಜಯಕರ, ವಿಜಯಲಕ್ಷ್ಮಿ ಇರಕಲ್ ಮಾತನಾಡಿದರು . ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಮಹಿಳೆಯರ ಪದಗ್ರಹಣ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರುತಾರನಾಳ, ಪುರಸಭೆ ಉಪಾಧ್ಯಕ್ಷೆ ಪ್ರೀತಿ ದೇಗಿನಾಳ , ಬಿ ಕೆ ಬಿರಾದಾರ, ಬಾಪುರಾವ ದೇಸಾಯಿ, ಕಾಂಗ್ರೆಸ್ ಪಕ್ಷದ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು .

ಬುಧುವಾರ ನಡೆದ ಕೆಪಿಸಿಸಿ ಮಹಿಳಾ ಸದಸ್ಯರ ಪದಗ್ರಹಣ ಶಕ್ತಿ ಸಮಾವೇಶದಲ್ಲಿ ತಾಲ್ಲೂಕಿನ ಅಂಗನವಾಡಿ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು ಅಂಗನವಾಡಿ ಸಹಾಯಕಿಯರು, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು ಕಾಂಗ್ರೆಸ್ ಪಕ್ಷದ ಕಾರ್ಯಕ್ರಮಕ್ಕೆ ಇವರನ್ನು ಕಡ್ಡಾಯವಾಗಿ ಅಂಗನವಾಡಿ ಬಂದ್ ಮಾಡಿ ಭಾಗವಹಿಸಲು ಆದೇಶಸಿದವರು ಯಾರು? ಈ ಸಮಾವೇಶದಿಂದ ಅಂಗನವಾಡಿ ಮಕ್ಕಳು ಪೌಷ್ಟಿಕಾಹಾರದಿಂದ ವಂಚಿತರಾದರು,ಇದು ಸರಕಾರಿ ಕಾರ್ಯಕ್ರಮವಲ್ಲ , ಪಕ್ಷದ ಕಾರ್ಯಕ್ರಮಕ್ಕೆ ಪಕ್ಷದ ಕಾರ್ಯಕರ್ತರನ್ನು ಸೇರಿಸಿ ಮಾಡಬೇಕು ಅದನ್ನು ಬಿಟ್ಟು ತಮ್ಮ ರಾಜಕೀಯ ಪ್ರತಿಷ್ಠೆಗೆ ಅಂಗನವಾಡಿ ಆಶಾ ಕಾರ್ಯಕರ್ತೆಯರನ್ನು ಬಳಕೆ ಮಾಡಿಕೊಂಡಿದ್ದು ತಪ್ಪು ಇದಕ್ಕೆ ನೇರಹೊಣೆ ಜಿಲ್ಲಾ ಮತ್ತು ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಶಿಶು ಅಭಿವೃದ್ಧಿ ಅಧಿಕಾರಿಗಳು ಆಗುತ್ತಾರೆ ಬುಧುವಾರ ಶಕ್ತಿ ಸಮಾವೇಶದಲ್ಲಿ ಪಾಲ್ಗೊಂಡು ಅಂಗನವಾಡಿ ಆಶಾ ಕಾರ್ಯಕರ್ತೆಯರು ಮೇಲ್ವಿಚಾರಕಿಯರ ಒಂದು ತಿಂಗಳ ಸಂಬಳ ಕಡಿತಗೊಳಿಸಬೇಕು ಇದು ನಮ್ಮ ಆಗ್ರಹವಾಗಿದೆ -ಹರೀಶ್ ನಾಟಿಕಾರ, ಡಿಎಸ್‌ಎಸ್ ಜಿಲ್ಲಾ ಸಂಚಾಲಕ

## ಹೊಳೆಸಮುದ್ರ ಗ್ರಾಮಕ್ಕೆ ಜಿ,ಪ, ಸಿಇಒ ಭೇಟಿ: ಜೆಜೆಎಮ್ ಕಾಮಗಾರಿ ಪರಿಶೀಲನೆ

• ಉದಯವಾಹಿನಿ ಕಮಲನಗರ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಹೊಳೆಸಮುದ್ರ ಗ್ರಾಮ ಪಂಚಾಯತ್ ಗ್ರಾಮಕ್ಕೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಅವರು ಭೇಟಿ ನೀಡಿ ಜಲ ಜೀವನ ಮಿಷನ್ ಕಾಮಗಾರಿ ಪರಿಶೀಲಿಸಿದರು.

ಜಿಲ್ಲಾ ಮತ್ತು ತಾಲ್ಲೂಕಾ ಅಧಿಕಾರಿಗಳು ಹೊಳೆಸಮುದ್ರ ಗ್ರಾಮಕ್ಕೆ ಭೇಟಿ ನೀಡಿದ್ದರು. ಇದೇ ಸಂದರ್ಭದಲ್ಲಿ ಡಾ! ಗಿರೀಶ್ ಬದೋಲೆ ಮಾತನಾಡಿ,ಮನೆ ಮನೆಗೆ ಶುದ್ಧ ಕುಡಿಯುವ ನೀರು ಒದಗಿಸಬೇಕು ನಲ್ಲಿ ನೀರು ಸೋರಿಕೆ ಯಾಗದ ರೀತಿಯಲ್ಲಿ ಹಾಗೂ ಗ್ರಾಮಸ್ಥರಿಗೆ ನೀರಿನ ಸಮಸ್ಯೆ ಯಾಗದಂತೆ ನೋಡಿಕೋಳ್ಳಿ ಎಂದು ಹೇಳಿದರು. ಅಲ್ಲಲ್ಲಿ ರಸ್ತೆ ಹದಗಟ್ಟಿದ್ದು ಚರಂಡಿ ವ್ಯವಸ್ಥೆಯು ಅವ್ಯವಸ್ಥೆ ಕಂಡು ಅಸಮಾಧಾನ ವ್ಯಕ್ತಪಡಿಸುವ ಮೂಲಕ ಅಧಿಕಾರಿಗಳಿಗೆ ಪ್ರಶ್ನಿಸಿದ್ದರು.

ಮುಂದಿನ ದಿನಗಳಲ್ಲಿ ಎಲ್ಲಾ ಕೆಲಸಗಳು ಆಗಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಗ್ರಾಮಸ್ಥರ ಸಮ್ಮುಖದಲ್ಲಿ ಗ್ರಾಮಸ್ಥರು ಬೇಡಿಕೆ ಇಡುವುದರಿಂದ ಇಲ್ಲಿ ಜಲೋತ್ಸವ ಮನೆ ಮನೆಗೆ ಗಂಗೆ ಎಂಬ ಕಾಮಗಾರಿಯು ನಲ್ಲಿಗಳಿಗೆ ನೀರು ಪೂರೈಕೆ ಆಗದ ಕಾರಣಕ್ಕೆ ಜಲ ಜೀವನ ಮಿಷನ್ ಕಾಮಗಾರಿ ಪರಿಶೀಲನೆ ನಡೆಯಿತು. ಕಮಲನಗರ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾವ ಕೌಟಗೆ, ಶಿವಕುಮಾರ್ ಇಂಜಿನಿಯರ್, ಗ್ರಾಪಂ ಅಧಿಕಾರಿಗಳು ಇದ್ದರು.

## ಯುವತಿಗೆ ಕಿರುಕುಳ: ಆರೋಪಿ ಅರೆಸ್ಟ್

• ಉದಯವಾಹಿನಿ , ಕಾಸರಗೋಡು

ಯುವತಿಗೆ ವ್ಯಕ್ತಿಯೋರ್ವ ಕಿರುಕುಳ ನೀಡಿದ ಪ್ರಕರಣ ಸಂಬಂಧ ಆರೋಪಿಯನ್ನು ಕುಂಬಳೆ ಠಾಣಾ ಪೊಲೀಸರು ಬಂಧಿಸಿದ್ದಾರೆ.

ಸಕಲೇಶಪುರ ನಿವಾಸಿ ಪ್ರಸ್ತುತ ಕುಂಬಳೆ ಅರಿಕ್ಕಾಡಿಯ ಬಾಡಿಗೆ ಮನೆಯಲ್ಲಿ ವಾಸವಾಗಿರುವ ಸುಹೈಬ್ (25) ಬಂಧಿತ ಆರೋಪಿ. ಕುಂಬಳೆ ರೈಲ್ವೆ ನಿಲ್ದಾಣ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಯುವತಿಗೆ ಆರೋಪಿ ಕಿರುಕುಳ ನೀಡಿದ್ದಾನೆ. ಘಟನೆ ಬಗ್ಗೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸಿದ್ದರು. ರೈಲು ನಿಲ್ದಾಣ ಪರಿಸರದ ಸಿಸಿಟಿವಿ ದೃಶ್ಯವನ್ನು ಪರಿಶೀಲಿಸಿದ ಪೊಲೀಸರು ಆರೋಪಿಯ ಗುರುತು ಪತ್ತೆ ಹಚ್ಚಿದ್ದು, ಕುಂಬಳೆ ಪೇಟೆಯಿಂದ ನಾಗರಿಕರ ಸಹಾಯದೊಂದಿಗೆ ಆರೋಪಿಯನ್ನು ಬಂಧಿಸಿದ್ದಾರೆ.

## 21 ವರ್ಷಗಳಿಂದ ಕೋರ್ಟ್‌ಗೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಆರೋಪಿ ಬಂಧನ

• ಉದಯವಾಹಿನಿ ಉಡುಪಿ

ಶಂಕರನಾರಾಯಣ ಠಾಣಾ ವ್ಯಾಪ್ತಿಯ ಪ್ರಕರಣವೊಂದಕ್ಕೆ ಸಂಬಂಧಿಸಿ ಕಳೆದ 21ವರ್ಷಗಳಿಂದ ನ್ಯಾಯಾಲಯಕ್ಕೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.

ಕಾಸರಗೋಡು ಜಿಲ್ಲೆಯ ಪುತ್ತೂರು ಮೆಗ್ರಾಲು ನಿವಾಸಿ ಫಾರೂಕ್ ಬಂಧಿತ ಆರೋಪಿ. ಈತ ವಿರುದ್ಧ 2004ರ ಡಿ.25ರಂದು ಪ್ರಕರಣ ದಾಖಲಾಗಿದ್ದು, ಅಂದಿನಿಂದ ಈತ ನ್ಯಾಯಾಲಯದ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿದ್ದನು. ಆ ಹಿನ್ನೆಲೆಯಲ್ಲಿ ಆತನ ವಿರುದ್ಧ ಎಲ್.ಪಿ.ಸಿ ವಾರಂಟು ಹೊರಡಿಸಲಾಗಿತ್ತು. ಈತನ ಪತ್ತೆಗೆ ವಿಶೇಷ ತಂಡವನ್ನು ರಚಿಸಲಾಗಿದ್ದು, ತಂಡವು ಹಲವು ಆಯಾಮಗಳ ಮೂಲಕ ಖಚಿತ ಮಾಹಿತಿಯನ್ನು ಸಂಗ್ರಹಿಸಿ ಜು.28ರಂದು ಆರೋಪಿಯನ್ನು ರಾಮನಗರ ಜಿಲ್ಲೆ ಮಾಗಡಿಯಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದೆ. ಜು.29ರಂದು ಆರೋಪಿಯನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸಿದ್ದು, ನ್ಯಾಯಾಧೀಶರು ಆರೋಪಿಗೆ ನ್ಯಾಯಾಂಗ ಬಂಧನ ವಿಧಿಸಿ ಆದೇಶ ನೀಡಿದರು.

## ಪತ್ರಿಕಾ ದಿನಾಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬಾಗಲಕೋಟೆ

ದೇಶದಲ್ಲಿ ಶೋಷಿತರ ಸಮುದಾಯಗಳು ಬಹಳಷ್ಟು ಇರುವುದರಿಂದ ಶೋಷಿತರ ಪರ ಧ್ವನಿಯಾಗಿ ಪತ್ರಿಕಾ ಮಾಧ್ಯಮ ಕೆಲಸ ಮಾಡಬೇಕು.

ಪತ್ರಕರ್ತರು ಸರ್ವ ಸಮಾಜ ಒಳಿತಿಗಾಗಿ ವರದಿಗಾರಿಕೆಯನ್ನು ಮಾಡಬೇಕು, ಭ್ರಷ್ಟಾಚಾರ ಸಂಪೂರ್ಣ ನಿರ್ಮೂಲನೆಗಾಗಿ ಪತ್ರಕರ್ತರು ಪ್ರಾಮಾಣಿಕ ಪ್ರಯತ್ನ ಮಾಡಬೇಕು, ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಧೈರ್ಯ ಪತ್ರಕರ್ತರಿಗೆ ಇದೆ ಎಂದು ಶಾಸಕ ಸಿದ್ದು ಸವದಿ ಹೇಳಿದರು. ಬಾಗಲಕೋಟೆ ಜಿಲ್ಲೆಯ ರಬಕವಿ ಬನಹಟ್ಟಿ ತಾಲ್ಲೂಕಿನ ನಗರಸಭೆ ಕಾರ್ಯಾಲಯದಲ್ಲಿ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

## ಮೌಢ್ಯಗಳೆ ತುಂಬಿದ ಆಚರಣೆಗಳನ್ನು ಪ್ರಶ್ನಿಸುವ ಮನೋಧೈರ್ಯ ತುಂಬಿದ ಬಸವಾದಿ ಶರಣರು

• ಉದಯವಾಹಿನಿ , ಚಿಂಚೋಳಿ

ಅಂಧಾಚರಣೆಗಳಿಂದ ಮಾನಸಿಕ ಮಾಲಿನ್ಯದೊಂದಿಗೆ ಪರಿಸರ ಮಾಲಿನ್ಯವಾಗುತ್ತದೆ, ಹಾವು ಹಾಲು ಕುಡಿಯುವುದಿಲ್ಲ,ಹಾಲನ್ನು ಹುತ್ತಕ್ಕೆ ಸುರಿಯದೇ ಅಗತ್ಯತೆಯುಳ್ಳವರಿಗೆ ಕೊಟ್ಟಿದರೆ ಹೊಟ್ಟೆ ತುಂಬುತ್ತದೆ ಎಂದು ಜೂನಿಯರ್ ಕಾಲೇಜು ಪ್ರಾಚಾರ್ಯ ಮಲ್ಲಿಕಾರ್ಜುನ ಪಾಲಾಮೋರ್ ಹೇಳಿದರು.

ಪಟ್ಟಣದ ಚಂದಾಪೂರದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಶರಣೆ ನೀಲಾಂಬಿಕೆ ಟ್ರಸ್ಟ್ ಮತ್ತು ಬಸವಪರ ಸಂಘಟನೆಗಳ ಒಕ್ಕೂಟದಿಂದ ಏರ್ಪಡಿಸಿದ ನಾಗರ ಪಂಚಮಿಯನ್ನು ಬಸವ ಪಂಚಮಿಯಾಗಿ ಆಚರಿಸಿ ಬಡರೋಗಿಗಳಿಗೆ ಹಾಲು, ಹಣ್ಣುಹಂಪಲು ವಿತರಿಸಿ ಮಾತನಾಡಿದ ಅವರು, ಜಡ್ಡುಗಟ್ಟಿದ ಸಮಾಜದಲ್ಲಿ ಮೌಢ್ಯಗಳೆ ತುಂಬಿದ ಆಚರಣೆಗಳನ್ನು ಪ್ರಶ್ನಿಸುವ ಮನೋಧೈರ್ಯ ತುಂಬಿದವರು ಬಸವಾದಿ ಶರಣರು,


ಉದಯವಾಹಿನಿ ಚಿತ್ರ

**ಶರಣರು ಮನುಕುಲದ ಉದ್ದಾರಕರು**

ಹೆಣ್ಣು ಮಕ್ಕಳಿಗೆ ಸಮಾನ ಅವಕಾಶ ಕಲ್ಪಿಸಿ ಕೊಟ್ಟಿದರು ಎಂದರು. ಸಮಾಜದ ಹಿರಿಯ ಮುಖಂಡ ಬಾಬುರಾವ ಪಾಟೀಲ ಮಾತನಾಡಿ ಹನ್ನೆರಡನೇ ಶತಮಾನದ ಬಸವಾದಿ ಶರಣರ ಕ್ರಾಂತಿ ಮಾನವನನ್ನು ಪ್ರಗತಿ ಪಥದೆಡೆಗೆ ಕರೆದೊಯ್ಯುವ ಕ್ರಾಂತಿಯಾಗಿತ್ತು, ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ಶರಣರು ಮನುಕುಲದ ಉದ್ದಾರಕರಾಗಿದ್ದಾರೆ.

ಆದರೆ ಬಸವಣ್ಣನವರ ವಿಚಾರಗಳನ್ನು ಪ್ರಚಾರ ಮಾಡುವವರು ಭಯದ ವಾತವರಣದಲ್ಲಿ ಬದುಕುವಂತಾಗಿದೆ ಎಂದು ಹೇಳಿದರು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶರಣುಪಾಟೀಲ, ಟಿಹೆಚ್‌ಓ ಡಾ.ಮಹ್ಮದ್ ಗಫೂರ,ಕವಿಯಿತ್ರಿ ಜ್ಯೋತಿ ಬೋಮ್ಮಾ, ಶಕುಂತಲಾ ಹುಲಿ ಮಾತನಾಡಿದರು.

ಈ ಸಂದರ್ಭದಲ್ಲಿ ನಂದಿಕುಮಾರ ಪಾಟೀಲ, ಸೂರ್ಯಕಾಂತ ಹುಲಿ ಪಾಟೀಲ, ಕಾಶಿನಾಥ ಹುಣಜೆ, ಶಿವಲೀಲಾ, ಅನೀಲಕುಮಾರ ಬೀರಾದಾರ, ಕಸಾಪ ಅಧ್ಯಕ್ಷ ಸುರೇಶ ದೇಶಪಾಂಡೆ ಅನೇಕರಿದ್ದರು.

## 6.90 ಕೋಟಿ ರೂ.ಕಾಮಗಾರಿಗೆ ಭೂಮಿಪೂಜೆ

• ಉದಯವಾಹಿನಿ ಬೀದರ

ಭಾಲ್ಕಿ ತಾಲ್ಲೂಕಿನ ಹರಣಾಳ-ಡಾವರಗಾವ್ ಮಾರ್ಗವಾಗಿ ಕುರುಬಖೇಳ್ಗಿ ಗ್ರಾಮದವರೆಗೆ ಸುಮಾರು 6.90 ಕೋಟಿ ರೂ. ವೆಚ್ಚದಲ್ಲಿ ರಸ್ತೆಯನ್ನು ಅಭಿವೃದ್ಧಿಪಡಿಸುವ ಕಾಮಗಾರಿಗೆ ಇಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವರು ಹಾಗೂ ಬಿದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಜನಜೀವನ ಸುಲಭವಾಗಬೇಕಾದರೆ ಉತ್ತಮ ರಸ್ತೆಗಳ ಅಗತ್ಯವಿದೆ. ಈ ರಸ್ತೆ ಅಭಿವೃದ್ಧಿಯಿಂದ ಈ ಭಾಗದ ಜನರಿಗೆ ಉತ್ತಮ ಸಂಪರ್ಕ ಸೌಲಭ್ಯ ಒದಗಲಿದ್ದು, ಇದು ಶಿಕ್ಷಣ, ಆರೋಗ್ಯ ಹಾಗೂ ಆರ್ಥಿಕ ಚಟುವಟಿಕೆಗಳ ಪ್ರಗತಿಗೆ ಸಹಕಾರಿಯಾಗಲಿದೆ,'' ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಭಾಲ್ಕಿ ತಾಲ್ಲೂಕಿನಲ್ಲಿ ರಸ್ತೆ ಅಭಿವೃದ್ಧಿ ಕಾರ್ಯದಲ್ಲಿ ನಿರಂತರ ಬದಲಾವಣೆ ಆಗುತ್ತಿದ್ದು, ಇದನ್ನು ಮತ್ತಷ್ಟು ವೇಗವಾಗಿ ಮುಂದುವರೆಸಲಾಗುವುದು. ಗ್ರಾಮೀಣ ಪ್ರದೇಶಗಳ ಸಂಪರ್ಕ ಸುಧಾರಣೆ ನಮ್ಮ ಪ್ರಾಥಮಿಕ ಗುರಿಯಾಗಿದ್ದು, ಇದಕ್ಕಾಗಿ ಸರ್ಕಾರ ಬದ್ಧವಾಗಿದೆ ಎಂದರು.

## ಬಾವಿಗೆ ಬಿದ್ದ ಚಿರತೆಗೆ ವಿದ್ಯುತ್ ಸ್ಪರ್ಶಿಸಿ ಮೃತ್ಯು

• ಉದಯವಾಹಿನಿ ಮಂಗಳೂರು

ನಾಯಿಯನ್ನು ಬೆನ್ನಟ್ಟಿ ಬಂದ ಚಿರತೆಯು ಬಾವಿಗೆ ಬಿದ್ದಿದ್ದು, ಮೋಟರ್‌ನ ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿದ ಘಟನೆ ಕಿನ್ನಿಗೋಳಿ ಪಟ್ಟಣ ಪಂಚಾಯತ್ ವ್ಯಾಪ್ತಿಯ ಮೆನ್ನಬೆಟ್ಟು ಗ್ರಾಮದಲ್ಲಿ ಜುಲೈ 28ರ ಮುಂಜಾನೆ ನಡೆದಿದೆ. ಮೆನ್ನಬೆಟ್ಟು ನಿವಾಸಿ ರೋಬರ್ಟ್ ಅವರು ಜು.28ರ ಮುಂಜಾನೆ 5.30ಕ್ಕೆ ಎದ್ದು ನೀರಿಗಾಗಿ ಬಾವಿಯ ಮೋಟರ್ ಚಾಲನೆ ಮಾಡಿದ್ದಾರೆ. ಸುಮಾರು 20 ನಿಮಿಷವಾದರೂ ನೀರು ಬಾರದ ಕಾರಣ ಬಾವಿಗೆ ಇಣುಕಿ ನೋಡಿದಾಗ ಚಿರತೆ ತೇಲಾಡುತ್ತಿರುವುದು ಕಂಡು ಬಂದಿದೆ. ಕೂಡಲೇ ಮೋಟರನ್ನು ಬಂದ್ ಮಾಡಿ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ.

ಸ್ವಲ್ಪ ಹೊತ್ತು ಕಳೆದ ಬಳಿಕ ಮತ್ತೆ ಬಾವಿ ಇಣುಕಿ ನೋಡಿದಾಗ ಚಿರತೆ ಮೋಟರಿಗೆ ಅಳವಡಿಸಿರುವ ವಯರನ್ನು ಕಚ್ಚಿ ಹಿಡಿದಿರುವುದು ಕಂಡುಬಂದಿದೆ. ಬಳಿಕ ಅರಣ್ಯಾಧಿಕಾರಿಗಳು, ಪಶುವೈದ್ಯರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಚಿರತೆ ಮೃತಪಟ್ಟಿರುವುದು ಬೆಳಕಿಗೆ ಬಂದಿದೆ. ರೋಬರ್ಟ್ ಅವರ ಮನೆಯಲ್ಲಿ 4 ನಾಯಿಗಳಿದ್ದು, ರಾತ್ರಿ ಗೂಡಿಗೆ ಹಾಕುತ್ತಾರೆ. ಪಕ್ಕದ ಮನೆಯವರು ತಮ್ಮ ನಾಯಿಯನ್ನು ಬಿಟ್ಟಿರುತ್ತಾರೆ. ಚಿರತೆಯು ರಾತ್ರಿ ನಾಯಿಯನ್ನು ಅಟ್ಟಿಸಿಕೊಂಡು ಬಂದು ಬಾವಿಗೆ ಬಿದ್ದಿರಬಹುದೆಂದು ಶಂಕೆ ವ್ಯಕ್ತಪಡಿಸಲಾಗಿದೆ. ಅರಣ್ಯಾಧಿಕಾರಿಗಳು ಚಿರತೆಯನ್ನು ಮೇಲಕ್ಕೆತ್ತಿ ಶವ ಪರೀಕ್ಷೆ ನಡೆಸಿದ್ದಾರೆ ಎಂದು ವರದಿಯಾಗಿದೆ.


ಉದಯವಾಹಿನಿ ಚಿತ್ರ

# ಬಾಲ್ಯ ವಿವಾಹ, ಪೋಕ್ಸೋ ನಿರ್ಮೂಲನೆಗೆ ಎಂ.ವಿಜಯ್ ಕರೆ

### ಪ್ರಕರಣಗಳ ವರದಿ ನೀಡದ, ನಿರ್ಲಕ್ಷ್ಯವಹಿಸುವ ಅಧಿಕಾರಿಗಳನ್ನೇ ನೇರವಾಗಿ ಹೊಣೆ ಮಾಡಿ ಕಾನೂನು ಕ್ರಮ ಕೈಗೊಳ್ಳುವುದು

• ಉದಯವಾಹಿನಿ ಚಿತ್ರದುರ್ಗ

ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಪೋಕ್ಸೋ , ಬಾಲ್ಯವಿವಾಹ ಪ್ರಕರಣದ ಪಿಡುಗನ್ನು ನಿರ್ಮೂಲನೆ ಮಾಡಲು ಅಧಿಕಾರಿಗಳು ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕರೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಇಂಟರ್‌ನ್ಯಾಷನಲ್ ಜಸ್ಟಿಸ್ ಮಿಷನ್ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಅಂಗವಾಗಿ, ಮಹಿಳಾ ಮತ್ತು ಮಕ್ಕಳ ಕಳ್ಳ ಸಾಗಾಣಿಕೆ ತಡೆ ಕಾವಲು ಸಮಿತಿ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

**ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ**

ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಈ ಕುರಿತು ತಮ್ಮ ವ್ಯಾಪ್ತಿಯಲ್ಲಿ ಗ್ರಾಮಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಸಿಬ್ಬಂದಿ ಸೂಕ್ತ ಮಾರ್ಗದರ್ಶನ ನೀಡಬೇಕು. ಮಕ್ಕಳ ಗ್ರಾಮಸಭೆ, ಮಹಿಳಾ ಮತ್ತು ಮಕ್ಕಳ ಸಂರಕ್ಷಣೆ ಕುರಿತು ಸಭೆಗಳಲ್ಲಿ ಅಧಿಕಾರಿಗಳು ಭಾಗವಹಿಸಿ, ಪೋಕ್ಸೋ ಹಾಗೂ ಬಾಲ್ಯವಿವಾಹ ಪ್ರಕರಣಗಳ ಜರುಗದಂತೆ ಗ್ರಾಮಮಟ್ಟದಲ್ಲಿ ಬುಡಸಮೇತ ಕಿತ್ತೊಗೆಯಲು ಪ್ರಯತ್ನಿಸಬೇಕು ಎಂದು ನ್ಯಾಯಾಧೀಶ ಎಂ.ವಿಜಯ್ ಹೇಳಿದರು. ಮಾನವ ಕಳ್ಳ ಸಾಗಾಣಿಕೆಗೆ ಬಹಳಷ್ಟು ಮುಖಗಳಿದ್ದು, ಪ್ರಸಕ್ತ ವರ್ಷದಲ್ಲಿ ದೇಶದಲ್ಲಿ 2 ಲಕ್ಷಕ್ಕೂ ಹೆಚ್ಚು ಮಹಿಳೆಯರು ಹಾಗೂ ಮಕ್ಕಳನ್ನು ಕಳ್ಳ ಸಾಗಾಣಿಕೆ ಜಾಲದಿಂದ ಸಂರಕ್ಷಣೆ ಮಾಡಲಾಗಿದೆ. ಬಿಗಿಯಾದ ಕಾನೂನುಗಳನ್ನು ರಚಿಸಲಾಗಿದೆ ನ್ಯಾಯಾಧೀಶ ಎಂ.ವಿಜಯ್ ತಿಳಿಸಿದರು.

ಜಿ.ಪಂ. ಉಪ ಕಾರ್ಯದರ್ಶಿ ಡಾ.ರಂಗಸ್ವಾಮಿ ಮಾತನಾಡಿ, ಗ್ರಾಮಮಟ್ಟದಲ್ಲಿ ಬಾಲ್ಯವಿವಾಹ ತಡೆಗೆ ಹೆಚ್ಚಿನ ಅರಿವು ಮೂಡಿಸಬೇಕು. ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಸಾರ್ವಜನಿಕರಿಗೆ ಮನದಟ್ಟು ಮಾಡಬೇಕು. ಮಕ್ಕಳ ಸಹಾಯವಾಣಿ, ಮಹಿಳಾ ಸಹಾಯವಾಣಿ, ತುರ್ತು ಸ್ಪಂದನಾ ಸಹಾಯವಾಣಿ ಸಂಖ್ಯೆಗಳನ್ನು ಗೋಡೆಬರೆಹದಲ್ಲಿ ಬರೆಸಿ ಜನರಿಗೆ ಅರಿವು ಮೂಡಿಸಬೇಕು. ನಾವೆಲ್ಲರೂ ಸೇರಿ ಈ ಸಾಮಾಜಿಕ ಪಿಡುಗು ಹೋಗಲಾಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸೋಣ ಎಂದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎ.ಎಂ.ವೀಣಾ ಅವರು ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಅಂಗವಾಗಿ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮೇಶ್ ಈಶ್ವರನಾಯ್ಕ್, ಡಿಡಿಪಿಯು ಕೆ.ತಿಮ್ಮಯ್ಯ, ಡಿಡಿಪಿಐ ಎಂ.ಆರ್. ಮಂಜುನಾಥ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಶೀಲಾ, ಕಾರ್ಮಿಕ ಅಧಿಕಾರಿ ಬಾಲಚಂದ್ರ ಬಗಟಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಇದ್ದರು.



ಉದಯವಾಹಿನಿ ಚಿತ್ರ

ಲೈಂಗಿಕ ಶೋಷಣೆಗಾಗಿ, ಭಿಕ್ಷಾಟನೆಗಾಗಿ, ಜೀತಕ್ಕಾಗಿ ಬಾಲಕಾರ್ಮಿಕತೆಗಾಗಿ, ಅಂಗಾಂಗ ಕಸಿಗಾಗಿ, ಬಾಲ್ಯವಿವಾಹಕ್ಕಾಗಿ ಮಹಿಳೆ ಹಾಗೂ ಮಕ್ಕಳು ಕಳ್ಳ ಸಾಗಾಣಿಕೆಗೆ ಒಳಪಡುತ್ತಾರೆ. ಬಿಗಿಯಾದ ಕಾನೂನು, ಜಾಗೃತಿ ಹಾಗೂ ಪೊಲೀಸ್ ಕಾರ್ಯಾಚರಣೆಗಳ ಫಲವಾಗಿ ಇತ್ತೀಚಿನ ದಿನಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ಕಡಿಮೆಯಾಗುತ್ತಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ಕಾವಲು ಸಮಿತಿ ಇದ್ದು, 14 ರಿಂದ 18 ವರ್ಷದ ಮಕ್ಕಳು ಕಾಣೆಯಾದರೆ ಗ್ರಾಮ ಪಂಚಾಯಿತಿಗೆ ತಿಳಿಸಿ, ಪತ್ತೆ ಹಚ್ಚುವ ಕಾರ್ಯ ಮಾಡಬೇಕು. ಬಾಲ್ಯವಿವಾಹ ತಡೆಯುವಲ್ಲಿ ಎಲ್ಲಾ ಇಲಾಖೆಗಳ ಜವಾಬ್ದಾರಿ ಇದೆ.

-ಕೆ.ಹೆಚ್.ವಿಜಯಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ

**ಅಧಿಕಾರಿಗಳಲ್ಲಿ ಸಮನ್ವಯದ ಕೊರತೆ**

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಪೋಕ್ಸೋ ಮತ್ತು ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟುವ ಅಧಿಕಾರಿಗಳು ಸಭೆ ನಡೆಸಿ, ಸಲಹೆ ಸೂಚನೆ ಹಾಗೂ ನಿರ್ದೇಶನಗಳನ್ನು ನೀಡಲಾಗಿದೆ. ಹೆಚ್ಚು ಹೆಚ್ಚು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಅರಿವು ಮೂಡಿಸಲಾಗುತ್ತಿದೆ. ಆದಾಗ್ಯೂ ಗ್ರಾಮಮಟ್ಟದ ಅಧಿಕಾರಿಗಳಲ್ಲಿ ಸಮನ್ವಯದ ಕೊರತೆ ಇದೆ. ಪ್ರಕರಣ ನಡೆದು ಮೂರು-ನಾಲ್ಕು ದಿನಗಳಾದರೂ ಅಧಿಕಾರಿಗಳು ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದಿಲ್ಲ. ಕೆಲ ಪ್ರಕರಣಗಳಲ್ಲಿ ಉನ್ನತ ಅಧಿಕಾರಿಗಳಿಗೆ ಮಾಹಿತಿ ನೀಡದೇ ನಿರ್ಲಕ್ಷೆ ವಹಿಸುವುದು ಕಂಡು ಬಂದಿದೆ. ಇನ್ನೂ ಮುಂದೆ ಪ್ರಕರಣಗಳ ವರದಿ ನೀಡದ, ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳನ್ನೇ ನೇರವಾಗಿ ಹೊಣೆ ಮಾಡಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳುವುದಾಗಿ ನ್ಯಾಯಾಧೀಶ ಎಂ.ವಿಜಯ್ ಎಚ್ಚರಿಸಿದರು.

# ‘ಹನಿಮೂನ್ ಇನ್ ಶಿಲ್ಲಾಂಗ್’

## ಸಿನಿಮಾ ಆಯ್ತು ಮಧುಚಂದ್ರದ ಗಂಡನ ಕೊಲೆ ಪ್ರಕರಣ

ರಾಜಾ ರಘುವಂಶಿ ಅವರ ಹನಿಮೂನ್‌ನಲ್ಲಿ ನಡೆದ ಆಘಾತಕಾರಿ ಕೊಲೆಯನ್ನು ಆಧರಿಸಿ ಬಾಲಿವುಡ್‌ನಲ್ಲಿ ‘ಹನಿಮೂನ್ ಇನ್ ಶಿಲ್ಲಾಂಗ್’ ಎಂಬ ಚಿತ್ರ ನಿರ್ಮಾಣವಾಗುತ್ತಿದೆ. ರಾಜಾ ಅವರ ಸಹೋದರ ಈ ಚಿತ್ರಕ್ಕೆ ತಮ್ಮ ಬೆಂಬಲ ನೀಡಿದ್ದು, ಕೊಲೆ ಪ್ರಕರಣದ ಹಿಂದಿನ ಸತ್ಯವನ್ನು ಬಹಿರಂಗ ಆಗುವ ಭರವಸೆ ವ್ಯಕ್ತಪಡಿಸಿದ್ದಾರೆ. ಚಿತ್ರವು ಥ್ರಿಲ್ಲರ್ ಜೊತೆಗೆ ಸಾಮಾಜಿಕ ಸಂದೇಶವನ್ನು ಒಳಗೊಂಡಿರಲಿದೆ. ನಿಜ ಜೀವನದ ಘಟನೆ ಆಧರಿಸಿ ಸಾಕಷ್ಟು ಸಿನಿಮಾಗಳು ಮೂಡಿ ಬಂದಿವೆ. ಅದರಲ್ಲೂ ಶಾಕಿಂಗ್ ಎನಿಸುವಂತಹ ಘಟನೆ ನಡೆದರೆ ಸಿನಿಮಾ ಮಾಡಲು ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಇತ್ತೀಚೆಗೆ ಮೇಘಾಲಯದ ಶಿಲ್ಲಾಂಗ್‌ನಲ್ಲಿ ಹನಿಮೂನ್‌ಗೆಂದು ಬಂದ ದಂಪತಿಯಲ್ಲಿ ಪತಿ ರಾಜಾ ರಘುವಂಶಿಯ ಕೊಲೆ ಆಗಿತ್ತು. ಇದನ್ನು ಮಾಡಿದ್ದು ಆತನ ಪತ್ನಿ ಸೋನಂ ರಘುವಂಶಿ ಎಂಬ ವಿಚಾರ ನಂತರ ಬೆಳಕಿಗೆ ಬಂದಿತ್ತು. ಈಗ ಈ ಘಟನೆ ಸಿನಿಮಾ ಆಗುತ್ತಿದೆ. ಬಾಲಿವುಡ್‌ನಲ್ಲಿ ಎಸ್‌ಪಿ ನಿಂಬಾವತ್ ಅವರು ‘ಹನಿಮೂನ್ ಇನ್ ಶಿಲ್ಲಾಂಗ್’ ಸಿನಿಮಾ ಮಾಡುತ್ತಿದ್ದಾರೆ. ರಾಜ ರಘುವಂಶಿ ಕೊಲೆ ಪ್ರಕರಣದ ಸುತ್ತ ಕಥೆ ಸಾಗಲಿದೆ. ಈಗಾಗಲೇ ಸಿನಿಮಾದ ಸ್ಕ್ರಿಪ್ಟ್‌ನ ಪೂರ್ಣಗೊಳಿಸಲಾಗಿದೆ. ಶೇ.80ರಷ್ಟು ಶೂಟ್ ಇಂದೋರ್‌ನಲ್ಲಿ ನಡೆಯಲಿದೆ. ಉಳಿದ 20 ಭಾಗದಷ್ಟು ಶೂಟ್ ಮೇಘಾಲಯದ ವಿವಿಧ ಕಡೆಗಳಲ್ಲಿ ನಡೆಯಲಿದೆ.



ಸದ್ಯ ಪಾತ್ರವರ್ಗದ ಬಗ್ಗೆ ನಿರ್ದೇಶಕರು ಯಾವುದೇ ಮಾಹಿತಿ ನೀಡಿಲ್ಲ. ರಾಜಾ ರಘುವಂಶಿ ಸಹೋದರ ಸಚಿನ್ ರಘುವಂಶಿ ಅವರು ಈ ಸಿನಿಮಾ ಮಾಡಲು ಸಂಪೂರ್ಣ ಬೆಂಬಲ ನೀಡಿದ್ದಾರೆ. ‘ನಾನು ಈ ಸಿನಿಮಾ ಮಾಡಲು ಸಂಪೂರ್ಣ ಬೆಂಬಲ ನೀಡಿದ್ದೇವೆ. ನನ್ನ ಸಹೋದರನ ಕೊಲೆಯ ಪ್ರಕರಣ ದೊಡ್ಡ ಪರದೆಯಮೇಲೆ ಬರದೇ ಇದ್ದರೆ ಜನರಿಗೆ ಯಾರು ಸರಿ, ಯಾರು ತಪ್ಪು ಎಂಬ ವಿಚಾರ ಗೊತ್ತಾಗುವುದೇ ಇಲ್ಲ. ಕೊಲೆಯ ಹಿಂದಿನ ಘಟನೆಗಳ ಬಗ್ಗೆ ಸಿನಿಮಾ ಬೆಳಕು ಚೆಲ್ಲಲಿದೆ ಎಂಬ ನಂಬಿಕೆ ನನ್ನದು’ ಎನ್ನುತ್ತಾರೆ ಸಚಿನ್.

# ಬಾಲಿವುಡ್‌ನಲ್ಲಿ ಮಿಂಚುತ್ತಿರುವ ಬೆಂಗಳೂರು ಬಾಲೆ ಮೇಧಾ

ಬೆಂಗಳೂರಿನಲ್ಲಿ ಜನಿಸಿ ಅಥವಾ ಇಲ್ಲಿ ಬೆಳೆದು, ಮಾಡೆಲಿಂಗ್ ಮಾಡಿ ಆ ನಂತರ ಬಾಲಿವುಡ್ ಸೇರಿದಂತೆ ಬೇರೆ ಬೇರೆ ಚಿತ್ರರಂಗಗಳಲ್ಲಿ ದೊಡ್ಡ ಹೆಸರು ಮಾಡಿರುವ ಹಲವು ನಟಿಯರು ಇದ್ದಾರೆ. ದೀಪಿಕಾ ಪಡುಕೋಣೆ, ಅನುಷ್ಕಾ ಶರ್ಮಾ, ರಶ್ಮಿಕಾ ಮಂದಣ್ಣ ಇನ್ನೂ ಹಲವರು ಬೆಂಗಳೂರಿನಿಂದ ಹೋಗಿ ಭಾರತೀಯ ಚಿತ್ರರಂಗದಲ್ಲಿ ಹೆಸರು ಮಾಡುತ್ತಿದ್ದಾರೆ. ಇದೇ ಸಾಲಿಗೆ ಸೇರುತ್ತಿದ್ದಾರೆ ಮತ್ತೊಬ್ಬ ನಟಿ ಮೇಧಾ. ಕನ್ನಡದ ನಟಿಯರು ಬೇರೆ ಬೇರೆ ಚಿತ್ರರಂಗಗಳಲ್ಲಿ ಸ್ಟಾರ್‌ಗಳಾಗಿ ಮೆರೆಯುತ್ತಿದ್ದಾರೆ. ಕಳೆದ ಕೆಲ ವರ್ಷಗಳಲ್ಲಿ ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ದಕ್ಷಿಣ ಭಾರತ ಹಾಗೂ ಬಾಲಿವುಡ್ ಎರಡರಲ್ಲೂ ಸ್ಟಾರ್ ಆಗಿ ಆಗಿದ್ದಾರೆ.
ಇತ್ತೀಚೆಗೆ ಶ್ರೀಲೀಲಾ ಸಹ ಬಾಲಿವುಡ್‌ನಲ್ಲಿ ಭಾರಿ ಬೇಡಿಕೆ ಕುದುರಿಸಿಕೊಂಡಿದ್ದಾರೆ. ಇನ್ನು ದೀಪಿಕಾ ಪಡುಕೋಣೆ ಕಳೆದ ಒಂದು ದಶಕದಿಂದಲೂ ಬಾಲಿವುಡ್‌ನಲ್ಲಿ ಸ್ಟಾರ್ ನಟಿ. ಬೆಂಗಳೂರಿನವರೇ ಆಗಿ ಬಿಟ್ಟಿದ್ದ ಅನುಷ್ಕಾ ಶರ್ಮಾ ಸಹ ಬಾಲಿವುಡ್‌ನಲ್ಲಿ ಸ್ಟಾರ್ ಆಗಿ ಮೆರೆದಿದ್ದರು. ಮಂಗಳೂರು ಮೂಲದ ಶಿಲ್ಪಾ ಶೆಟ್ಟಿ, ಅನುಷ್ಕಾ ಶೆಟ್ಟಿ ಅವರುಗಳು ಸಹ ಕೋಟ್ಯಂತರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆ. ಇದೀಗ ಮತ್ತೊಬ್ಬ ಬೆಂಗಳೂರಿನ ಬೆಡಗಿ ಬಾಲಿವುಡ್‌ನಲ್ಲಿ ಮಿಂಚುತ್ತಿದ್ದಾರೆ.
ಅದುವೇ ಮೇಧಾ ರಾಣಾ. ಅನುಷ್ಕಾ ಶರ್ಮಾ ರೀತಿ ಮೇಧಾ ರಾಣಾ ಸಹ ಜನಿಸಿದ್ದು ಉತ್ತರ ಭಾರತದಲ್ಲಿ ಆದರೆ ಬಾಲ್ಯ, ವಿದ್ಯಾಭ್ಯಾಸ ನಡೆದಿದ್ದೆಲ್ಲವೂ ಬೆಂಗಳೂರಿನಲ್ಲಿ. ಮಾಡೆಲಿಂಗ್ ಮಾಡುತ್ತಿದ್ದ ಮೇಧಾ ರಾಣಾ, 2021 ರಲ್ಲಿ ಮ್ಯೂಸಿಕ್ ವಿಡಿಯೋನಲ್ಲಿ ಕಾಣಿಸಿಕೊಂಡರು.
ಬಳಿಕ 2022ರಲ್ಲಿ ‘ಲಂಡನ್ ಫೈಲ್ಸ್’ ವೆಬ್ ಸರಣಿ ಮೂಲಕ ಬಾಲಿವುಡ್ ಪ್ರವೇಶಿಸಿದರು. ಅದೇ ವರ್ಷ ಬಂದ ಡಾಕ್ಯುಮೆಂಟರಿ ‘ಡಾನ್ಸಿಂಗ್ ಆನ್ ದಿ ಗ್ರೇವ್’ನಲ್ಲಿ ಸಹ ಕಾಣಿಸಿಕೊಂಡರು. ಬಳಿಕ ಮೇಧಾ ರಾಣಾ, ಇರ್ಫಾನ್ ಖಾನ್ ಪುತ ನಾಯಕನಾಗಿದ್ದ ‘ಫ್ರೈಡೇನೈಟ್ ಪ್ಲ್ಯಾನ್ಸ್’ ಸಿನಿಮಾನಲ್ಲಿ ನಟಿಸಿದರು. ಬಳಿಕ ಅಮೆಜಾನ್ ಮಿನಿ ಟಿವಿಯಲ್ಲಿ ಪ್ರಸಾರವಾದ ‘ಇಷ್ಕ್ ಇನ್ ದಿ ಏರ್’ ನಲ್ಲಿ ನಾಯಕಿಯಾದರು.



# ಯಶ್ ಅಂದು ಹೇಳಿದ ಮಾತು ನಿಜವಾಯ್ತು

‘ಸು ಫ್ರಮ್ ಸೋ’ ಚಿತ್ರದ ಅಭೂತಪೂರ್ವ ಯಶಸ್ಸು ರಾಕಿಂಗ್ ಸ್ಟಾರ್ ಯಶ್ ಅವರ ಮಾತಿನ ಸತ್ಯತೆಯನ್ನು ಸಾಬೀತುಪಡಿಸಿದೆ. ಯಶ್ ಅವರು ಒಳ್ಳೆಯ ಕಥಾವಸ್ತುವಿನ ಚಿತ್ರಗಳು ಯಶಸ್ವಿಯಾಗುತ್ತವೆ ಎಂದು ಹೇಳಿದ್ದರು. ‘ಸು ಫ್ರಮ್ ಸೋ’ ಚಿತ್ರದ ಯಶಸ್ಸು ಪ್ರಚಾರಕ್ಕಿಂತ ಉತ್ತಮ ಕಥೆ ಮತ್ತು ನಿರೂಪಣೆ ಮುಖ್ಯ ಎಂಬುದನ್ನು ತೋರಿಸಿದೆ. ರಾಕಿಂಗ್ ಸ್ಟಾರ್ ಯಶ್ ಅವರು ವೇದಿಕೆ ಏರಿದಾಗ ಸಾಕಷ್ಟು ವಿಷಯಗಳ ಬಗ್ಗೆ ಮಾತನಾಡುತ್ತಾರೆ. ಇದರಲ್ಲಿ ಬಹುತೇಕವು ಅವರ ಅನುಭವದ ಮಾತು. ಇಂಡಸ್ಟ್ರಿಯ ಏಳ್ಗೆ ಬಗೆಗಿನ ಮಾತುಗಳೇ ಆಗಿರುತ್ತವೆ. 2025ರಲ್ಲಿ ರಿಲೀಸ್ ಆದ ಯೋಗರಾಜ್ ಭಟ್ ನಿರ್ದೇಶನದ ‘ಮನದ ಕಡಲು’ ಸಿನಿಮಾದ ಈವೆಂಟ್‌ಗೆ ಯಶ್ ಅತಿಥಿಯಾಗಿ ತೆರಳಿದ್ದರು. ಈ ವೇದಿಕೆ ಮೇಲೆ ಯಶ್ ಒಂದು ಮಾತನ್ನು ಹೇಳಿದ್ದರು. ರಾಜ್ ಬಿ. ಶೆಟ್ಟಿ ಹಾಗೂ ಜೆಪಿ ತುಮಿನಾಡ ‘ಸು ಫ್ರಮ್ ಸೋ’ ಚಿತ್ರದ ಮೂಲಕ ಇದನ್ನು ನಿಜ ಎಂದು ತೋರಿಸಿದ್ದಾರೆ. ರಾಜ್ ಬಿ. ಶೆಟ್ಟಿ ಮೊದಲಾದವರು ನಿರ್ಮಿಸಿದ, ಜೆಪಿ ತುಮಿನಾಡ ನಿರ್ದೇಶನದ ‘ಸು ಫ್ರಮ್ ಸೋ’ ಸಿನಿಮಾ ಅಭೂತಪೂರ್ವ ಯಶಸ್ಸು ಕಂಡಿದೆ. ಈ ಚಿತ್ರವನ್ನು ಜನರು ಮುಗಿಬಿದ್ದು ವೀಕ್ಷಿಸುತ್ತಿದ್ದಾರೆ. ವಾರದ ದಿನಗಳಲ್ಲೂ ಸಿನಿಮಾಗೆ ಟಿಕೆಟ್ ಸಿಗುತ್ತಿಲ್ಲ. ‘ಜನರು ಥಿಯೇಟರ್‌ಗೆ ಬರುತ್ತಿಲ್ಲ ಎಂಬ ಸ್ಥಿತಿಯಿಂದ ವಾರದ ದಿನದಲ್ಲೂ ಟಿಕೆಟ್ ಸಿಗುತ್ತಿಲ್ಲ’ ಎಂಬ ಪರಿಸ್ಥಿತಿ ನಿರ್ಮಾಣ ಆಗಿದೆ.
‘ಸು ಫ್ರಮ್ ಸೋ’ ಚಿತ್ರದಲ್ಲಿ ದೊಡ್ಡ ಪಾತ್ರವರ್ಗ ಇಲ್ಲ. ರಾಜ್ ಬಿ. ಶೆಟ್ಟಿ ಅವರು ಸೆಲೆಬ್ರಿಟಿಗಳಿಂದ ಸಿನಿಮಾ ಪ್ರಚಾರ ಮಾಡಿಸಿಲ್ಲ. ಪೋಸ್ಟರ್ ಅಂಟಿಸಿಲ್ಲ. ಪ್ರೀಮಿಯರ್ ಶೋಗಳನ್ನು ಆಯೋಜನೆ ಮಾಡಿ ಸಿನಿಮಾಗೆ ಬಾಯ್ಮಾತಿನ ಪ್ರಚಾರ ಕೊಟ್ಟರು. ಇದು ಸಿನಿಮಾಗೆ ಸಹಕಾರಿ ಆಗಿದೆ.



# ನಟನೆ ಕಡಿಮೆ ಮಾಡಿದರೂ ತಗ್ಗಿಲ್ಲ ನಟನ ಆಸ್ತಿ



2020ರ ಕೊರೋನಾ ಸಮಯದಲ್ಲಿ ಸೋನು ಸೂದ್ ಅವರ ಮಾನವೀಯ ಸೇವೆ ಅನೇಕರಿಗೆ ಸ್ಫೂರ್ತಿ ನೀಡಿದೆ. ಬಾಲಿವುಡ್ ನಟರಾಗಿ ಖ್ಯಾತಿ ಪಡೆದ ಸೋನು ಸೂದ್, ಕೋಟ್ಯಂತರ ರೂಪಾಯಿಗಳ ನಿವ್ವಳ ಮೌಲ್ಯ ಹೊಂದಿದ್ದಾರೆ. ಅವರ ವೃತ್ತಿಜೀವನ, ಕುಟುಂಬ, ಹಾಗೂ ಕೊರೋನಾ ಸಂದರ್ಭದಲ್ಲಿ ನೀಡಿದ ಸಹಾಯದ ಬಗ್ಗೆ ಇಲ್ಲಿ ಹೇಳಲಾಗಿದೆ.
2020ರಲ್ಲಿ ಕೊರೋನಾ ಕಾಣಿಸಿಕೊಂಡಿತು. ಆಗ ಅನೇಕ ಜನರು ಪರಸ್ಪರ ಸಹಾಯ ಮಾಡಲು ಮುಂದೆ ಬಂದಿದ್ದಾರೆ. ಬಾಲಿವುಡ್ ನಟ ಸೋನು ಸೂದ್ ಕೊರೊನಾ ಅವಧಿಯಲ್ಲಿ ಲೆಕ್ಕವಿಲ್ಲದಷ್ಟು ಜನರಿಗೆ ಸಹಾಯ ಮಾಡಿದ್ದಾರೆ. ಸೋನು ಸೂದ್ ಅವರ ಜನ್ಮದಿನ. 52 ವರ್ಷದ ಈ ನಟ ಸಿನಿಮಾ ನಿರ್ಮಾಪಕ, ನಟ, ಮಾಡೆಲ್ ಮತ್ತು ಉದ್ಯಮಿ ಕೂಡ ಹೌದು. ಸೋನು ಸೂದ್ ಇಲ್ಲಿಯವರೆಗೆ ಅನೇಕ ಚಿತ್ರಗಳಲ್ಲಿ ಪ್ರಮುಖ ಪಾತ್ರಗಳನ್ನು ನಿರ್ವಹಿಸುವ ಮೂಲಕ ಅಭಿಮಾನಿಗಳನ್ನು ರಂಜಿಸಿದ್ದಾರೆ. ಹಿಂದಿಯ ಜೊತೆಗೆ, ಈ ನಟ ತೆಲುಗು, ಕನ್ನಡ ಮತ್ತು ತಮಿಳು ಚಿತ್ರಗಳಲ್ಲಿಯೂ ಕಾಣಿಸಿಕೊಂಡಿದ್ದಾರೆ. ಸೋನು ಸೂದ್ ಅನೇಕ ಸಿನಿಮಾಗಳಲ್ಲಿ ಖಳನಾಯಕನ ಪಾತ್ರದ ಮೂಲಕ ಹೆಚ್ಚು ಫೇಮಸ್ ಆಗಿದ್ದಾರೆ. ಚಿತ್ರದಲ್ಲಿ ಖಳನಾಯಕನ ಪಾತ್ರವನ್ನು ನಿರ್ವಹಿಸಿದ ನಟ ಕೊರೋನಾ ಸಮಯದಲ್ಲಿ ನಿಜ ಜೀವನದ ಹೀರೋ ಆದರು. ಇವರು 1999ರಲ್ಲಿ ನಟನಾ ಜಗತ್ತಿಗೆ ಪಾದಾರ್ಪಣೆ ಮಾಡಿದರು. ಸೋನು ಸೂದ್ ಅವರ ವೃತ್ತಿಜೀವನ ದಕ್ಷಿಣ ಚಲನಚಿತ್ರೋದ್ಯಮದಲ್ಲಿ ಪ್ರಾರಂಭವಾಯಿತು. ಅವರು ಕನ್ನಡದಲ್ಲೂ ನಟಿಸಿದ್ದಾರೆ. ಸುದೀಪ್ ಜೊತೆ ‘ವಿಷ್ಣುವರ್ಧನ್’ ಸಿನಿಮಾದಲ್ಲಿ ಆದಿ ಶೇಷನ ಪಾತ್ರ ಮಾಡಿ ಗಮನ ಸೆಳೆದರು. 2024ರಲ್ಲಿ ಸೋನು ಸೂದ್ ಅವರ ಆಸ್ತಿ 140 ಕೋಟಿ ರೂಪಾಯಿ. ಈ ನಟ ಪ್ರತಿ ತಿಂಗಳು 1 ಕೋಟಿ ರೂ.ಗೂ ಹೆಚ್ಚು ಸಂಪಾದನೆ ಮಾಡುತ್ತಾರೆ.

# ರಿಷಬ್ ಶೆಟ್ಟಿಗೆ ಬಂಡುಕೋರನ ಅವತಾರ

ರಿಷಬ್ ಶೆಟ್ಟಿ ಅವರು ತಮ್ಮ ಮುಂದಿನ ಪ್ಯಾನ್ ಇಂಡಿಯಾ ಚಿತ್ರವನ್ನು ಅನೌನ್ಸ್ ಮಾಡಿದ್ದಾರೆ. ರಾಜಮೌಳಿ ಅವರ ಸಹಾಯಕ ನಿರ್ದೇಶಕ ಅಶ್ವಿನ್ ಗಂಗರಾಜು ನಿರ್ದೇಶನದ ಈ ಚಿತ್ರ ತೆಲುಗು ಮೂಲ ಭಾಷೆಯಾಗಿದ್ದು, ಕನ್ನಡದಲ್ಲೂ ಬಿಡುಗಡೆಯಾಗಲಿದೆ. ಬಿಡುಗಡೆಯಾದ ಪೋಸ್ಟರ್‌ನಲ್ಲಿ ರಿಷಬ್ ಬಂಡುಕೋರನಾಗಿ ಕಾಣಿಸಿಕೊಂಡಿದ್ದು, ಚಿತ್ರದ ಕಥಾವಸ್ತುವಿನ ಕುತೂಹಲ ಹೆಚ್ಚಿಸಿದೆ.
‘ಕಾಂತಾರ’ ಚಿತ್ರದ ಬಳಿಕ ರಿಷಬ್ ಶೆಟ್ಟಿ ಮಾರುಕಟ್ಟೆ ಗಗನಕ್ಕೇರಿದೆ. ಅವರಿಗೆ ಪರಭಾಷೆಗಳಿಂದ ಸಾಕಷ್ಟು ಆಫರ್‌ಗಳು ಬರುತ್ತಿವೆ. ಈಗ ಅವರು ಹೊಸ ಸಿನಿಮಾ ಅನೌನ್ಸ್ ಮಾಡಿದ್ದಾರೆ. ಇದು ಪ್ಯಾನ್ ಇಂಡಿಯಾ ಚಿತ್ರ ಆಗಿದ್ದು, ತೆಲುಗು ಮೂಲ ಭಾಷೆಯಾಗಿದೆ. ರಿಷಬ್ ಕರ್ನಾಟಕದವರಾಗಿರುವುದರಿಂದ ಕನ್ನಡದಲ್ಲೂ ಸಿನಿಮಾ ಬಿಡುಗಡೆ ಆಗಲಿದೆ ಎಂಬ ನಿರೀಕ್ಷೆ ಇದೆ. ಈ ಸಿನಿಮಾಗೆ ಇನ್ನೂ ಟೈಟಲ್ ಫೈನಲ್ ಆಗಿಲ್ಲ. ರಾಜಮೌಳಿ ಗರಡಿಯಲ್ಲಿ ಪಳಗಿದ ಅಶ್ವಿನ್ ಗಂಗರಾಜು ಅವರು ಈ ಚಿತ್ರ ನಿರ್ದೇಶನ ಮಾಡುತ್ತಿದ್ದಾರೆ. ಅಶ್ವಿನ್ ಗಂಗರಾಜು ಅವರು ಈ ಮೊದಲು ರಾಜಮೌಳಿ ನಿರ್ದೇಶನದ ‘ಈಗ’ ಹಾಗೂ ‘ಬಾಹುಬಲಿ’ ಚಿತ್ರದ ಒಂದು ಹಾಗೂ ಎರಡನೇ ಭಾಗದಲ್ಲಿ ಸಹಾಯಕರಾಗಿ ಕೆಲಸ ಮಾಡಿದ್ದರು. ರಾಜಮೌಳಿ ಅವರಿಂದ ಸಾಕಷ್ಟು ವಿಚಾರಗಳನ್ನು ಅಶ್ವಿನ್ ಕಲಿತಿದ್ದಾರೆ. ಅವರು ಈ ಮೊದಲು ‘ಆಕಾಶವಾಣಿ’ ಹೆಸರಿನ ಸಿನಿಮಾ ಮಾಡಿದ್ದರು. ಈಗ ಅವರಿಂದ ಹೊಸ ಸಿನಿಮಾ ಅನೌನ್ಸ್ ಆಗಿದೆ.

**ಪ್ಯಾನ್ ಇಂಡಿಯಾ ಸಿನಿಮಾ**



# ಮತ್ತೆ ಭಾರತ-ಪಾಕಿಸ್ತಾನ್ ಮುಖಾಮುಖಿ

ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟೂರ್ನಿಯಲ್ಲಿ ಒಟ್ಟು 6 ತಂಡಗಳು ಕಣಕ್ಕಿಳಿದಿದ್ದವು. ಈ ಆರು ತಂಡಗಳಲ್ಲಿ ಇಂಡಿಯಾ ಚಾಂಪಿಯನ್ಸ್, ಪಾಕಿಸ್ತಾನ್ ಚಾಂಪಿಯನ್ಸ್, ಆಸ್ಟ್ರೇಲಿಯಾ ಚಾಂಪಿಯನ್ಸ್ ಹಾಗೂ ಸೌತ್ ಆಫ್ರಿಕಾ ಚಾಂಪಿಯನ್ಸ್ ತಂಡಗಳು ಸೆಮಿಫೈನಲ್‌ಗೇರಿದೆ. ಇನ್ನು ವೆಸ್ಟ್ ಇಂಡೀಸ್ ಚಾಂಪಿಯನ್ಸ್ ಹಾಗೂ ಇಂಗ್ಲೆಂಡ್ ಚಾಂಪಿಯನ್ಸ್ ಟೂರ್ನಿಯಿಂದ ಹೊರಬಿದ್ದಿದೆ. ವರ್ಲ್ಡ್ ಚಾಂಪಿಯನ್ ಶಿಪ್ ಆಫ್ ಲೆಜೆಂಡ್ಸ್ ಟೂರ್ನಿಯ ಲೀಗ್ ಹಂತದ ಪಂದ್ಯಗಳು ಮುಗಿದಿವೆ.
ಈ ಪಂದ್ಯಗಳ ಮುಕ್ತಾಯದೊಂದಿಗೆ 4 ತಂಡಗಳು ಸೆಮಿಫೈನಲ್‌ಗೆ ಪ್ರವೇಶಿಸಿದರೆ 2 ಟೀಮ್‌ಗಳು ಟೂರ್ನಿಯಿಂದ ಹೊರಬಿದ್ದಿದೆ. ಹೀಗೆ ಸೆಮಿಫೈನಲ್‌ಗೆ ಪ್ರವೇಶಿಸಿದ ತಂಡಗಳಲ್ಲಿ ಇಂಡಿಯಾ ಚಾಂಪಿಯನ್ಸ್ ಹಾಗೂ ಪಾಕಿಸ್ತಾನ್ ಚಾಂಪಿಯನ್ಸ್ ತಂಡಗಳಿವೆ. ಅತ್ತ ಪಾಕಿಸ್ತಾನ್ ಚಾಂಪಿಯನ್ಸ್ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದ್ದರೆ, ಇತ್ತ ಇಂಡಿಯಾ ಚಾಂಪಿಯನ್ಸ್ ನಾಲ್ಕನೇ ಸ್ಥಾನದಲ್ಲಿ ಕಾಣಿಸಿಕೊಂಡಿದೆ.
ಅದರಂತೆ ಉಭಯ ತಂಡಗಳು ಮೊದಲ ಸೆಮಿಫೈನಲ್‌ನಲ್ಲಿ ಮುಖಾಮುಖಿ ಆಗಬೇಕಾದ ಅನಿವಾರ್ಯತೆ ಎದುರಾಗಿದೆ. ಇದಕ್ಕೂ ಮುನ್ನ ಜುಲೈ 20 ರಂದು ನಡೆಯಬೇಕಿದ್ದ ಪಾಕಿಸ್ತಾನ್ ವಿರುದ್ಧ ಪಂದ್ಯದಿಂದ ಇಂಡಿಯಾ ಆಟಗಾರರು ಹಿಂದೆ ಸರಿದಿದ್ದರು. ಪೆಹಲ್ಗಾಮ್‌ನಲ್ಲಿನ ಉಗ್ರರ ದಾಳಿಯನ್ನು ಖಂಡಿಸಿ ಇಂಡಿಯಾ ಚಾಂಪಿಯನ್ಸ್ ತಂಡದ ಆಟಗಾರರಾದ ಇರ್ಫಾನ್ ಪಠಾಣ್, ಹರ್ಭಜನ್ ಸಿಂಗ್, ಯೂಸುಫ್ ಪಠಾಣ್, ಸುರೇಶ್ ರೈನಾ ಹಾಗೂ ಶಿಖರ್ ಧವನ್ ಪಾಕ್ ವಿರುದ್ಧ ಕಣಕ್ಕಿಳಿಯಲು ಹಿಂದೇಟು ಹಾಕಿದ್ದರು.
ಹೀಗಾಗಿ ಇಂಡಿಯಾ ಚಾಂಪಿಯನ್ಸ್ ಹಾಗೂ ಪಾಕಿಸ್ತಾನ್ ಚಾಂಪಿಯನ್ಸ್ ನಡುವಣ ಪಂದ್ಯವನ್ನು ಕ್ಯಾನ್ಸಲ್ ಮಾಡಲಾಗಿತ್ತು. ಇದೀಗ ಮತ್ತೆ ಉಭಯ ತಂಡಗಳು ಸೆಮಿಫೈನಲ್‌ನಲ್ಲಿ ಮುಖಾಮುಖಿಯಾಗಬೇಕಾದ ಅನಿವಾರ್ಯತೆ ಎದುರಾಗಿದೆ. ಇದರಿಂದ ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟೂರ್ನಿ ಆಯೋಜಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಏಕೆಂದರೆ ಕಳೆದ ಪಂದ್ಯದಲ್ಲಿ ಪಾಕ್ ವಿರುದ್ಧ ಕಣಕ್ಕಿಳಿಯಲು ಹಿಂದೇಟು ಹಾಕಿದ್ದ ಇಂಡಿಯಾ ಆಟಗಾರರು ಮತ್ತೊಮ್ಮೆ ಪಂದ್ಯವನ್ನು ಬಹಿಷ್ಕರಿಸುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ.
ಹೀಗಾಗಿಯೇ ಡಬ್ಲ್ಯುಟಿಸಿ ಮೊದಲ ಸೆಮಿಫೈನಲ್ ಪಂದ್ಯ ನಡೆಯಲಿದೆಯಾ ಎಂಬುದೇ ಈಗ ಕುತೂಹಲ. ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟೂರ್ನಿಯ ಮೊದಲ ಸೆಮಿಫೈನಲ್ ಪಂದ್ಯವು ಜುಲೈ 31 ರಂದು ನಡೆಯಲಿದೆ. ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಇಂಡಿಯಾ ಚಾಂಪಿಯನ್ಸ್ ಹಾಗೂ ಪಾಕಿಸ್ತಾನ್ ಚಾಂಪಿಯನ್ಸ್ ತಂಡಗಳು ಮುಖಾಮುಖಿಯಾಗಲಿದೆ.
**ಎರಡನೇ ಸೆಮಿಫೈನಲ್:** ಟೂರ್ನಿಯ ದ್ವಿತೀಯ ಸೆಮಿಫೈನಲ್ ಪಂದ್ಯ ಕೂಡ ಜುಲೈ 31 ರಂದೇ ನಡೆಯಲಿದೆ. ಎಡ್ಜ್‌ಬಾಸ್ಟನ್ ಕ್ರೀಡಾಂಗಣದಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಆಸ್ಟ್ರೇಲಿಯಾ ಹಾಗೂ ಸೌತ್ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿದೆ.
ಈ ಮ್ಯಾಚ್‌ಗಳಲ್ಲಿ ಗೆಲ್ಲುವ ತಂಡಗಳು ಆಗಸ್ಟ್ 1 ರಂದು ನಡೆಯಲಿರುವ ಫೈನಲ್‌ನಲ್ಲಿ ಕಣಕ್ಕಿಳಿಯಲಿದೆ.




**ಸಂಕಷ್ಟಕ್ಕೆ ಸಿಲುಕಿದ ಆಯೋಜಕರು**

# ಅಗ್ರಸ್ಥಾನಕ್ಕೇರಿದ ಅಭಿಷೇಕ್ ಶರ್ಮಾ

ಭಾರತದ ಯುವ ಆರಂಭಿಕ ಆಟಗಾರ ಅಭಿಷೇಕ್ ಶರ್ಮಾ ಇತ್ತೀಚಿನ ಐಸಿಸಿ ಟಿ20 ಬ್ಯಾಟ್ಸ್‌ಮನ್ ಶ್ರೇಯಾಂಕದಲ್ಲಿ ಅಗ್ರಸ್ಥಾನಕ್ಕೇರಿದ್ದಾರೆ. ಟ್ರಾವಿಸ್ ಹೆಡ್ ಅವರನ್ನು ಹಿಂದಿಕ್ಕಿ 829 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಅಗ್ರಸ್ಥಾನ ಪಡೆದಿದ್ದಾರೆ. ಅಭಿಷೇಕ್ ಶರ್ಮಾ ಅವರ ಸ್ಫೋಟಕ ಬ್ಯಾಟಿಂಗ್ ಮತ್ತು ಅದ್ಭುತ ಸ್ಟ್ರೈಕ್ ರೇಟ್ ಇದಕ್ಕೆ ಕಾರಣ. ಭಾರತದ ತಿಲಕ್ ವರ್ಮಾ ಮತ್ತು ಸೂರ್ಯಕುಮಾರ್ ಯಾದವ್ ಕ್ರಮವಾಗಿ ಮೂರನೇ ಮತ್ತು ಆರನೇ ಸ್ಥಾನದಲ್ಲಿದ್ದಾರೆ. ಟೀಂ ಇಂಡಿಯಾದ ಯುವ ಆರಂಭಿಕ ಆಟಗಾರ ಅಭಿಷೇಕ್ ಶರ್ಮಾ ಟಿ20 ಬ್ಯಾಟ್ಸ್‌ಮನ್‌ಗಳ ರ್‍ಯಾಂಕಿಂಗ್‌ನಲ್ಲಿ ಅಗ್ರಸ್ಥಾನಕ್ಕೇರಿದ್ದಾರೆ. ಇತ್ತೀಚಿನ ಐಸಿಸಿ ಶ್ರೇಯಾಂಕದಲ್ಲಿ, ಅಭಿಷೇಕ್ ಶರ್ಮಾ ಟ್ರಾವಿಸ್ ಹೆಡ್ ಅವರನ್ನು ಹಿಂದಿಕ್ಕಿದ್ದಾರೆ. ಟ್ರಾವಿಸ್ ಹೆಡ್ ದೀರ್ಘಕಾಲ ನಂಬರ್ 1 ಶ್ರೇಯಾಂಕ ಪಡೆದಿದ್ದರು ಆದರೆ ವೆಸ್ಟ್ ಇಂಡೀಸ್ ವಿರುದ್ಧದ ಟಿ20 ಸರಣಿಯಲ್ಲಿ ಅವರ ಪ್ರದರ್ಶನ ಉತ್ತಮವಾಗಿಲ್ಲ, ಇದರಿಂದಾಗಿ ಅವರು ತಮ್ಮ ಸ್ಥಾನವನ್ನು ಕಳೆದುಕೊಂಡಿದ್ದಾರೆ. ಟ್ರಾವಿಸ್ ಹೆಡ್ ಕಳಪೆ ಪ್ರದರ್ಶನ ಅಭಿಷೇಕ್ ಶರ್ಮಾಗೆ ವರವಾಗಿದ್ದು, ಕೆಲವು ತಿಂಗಳುಗಳಿಂದ ಯಾವುದೇ ಟಿ20 ಪಂದ್ಯವನ್ನು ಆಡದಿದ್ದರು ನಂಬರ್ 1 ಸ್ಥಾನವನ್ನು ಪಡೆದುಕೊಂಡಿದ್ದಾರೆ. ಪ್ರಸ್ತುತ ಅಗ್ರಸ್ಥಾನಕ್ಕೇರಿರುವ ಅಭಿಷೇಕ್ ಶರ್ಮಾ ಅವರ ರೇಟಿಂಗ್ ಪಾಯಿಂಟ್ 829 ಆಗಿದ್ದರೆ, ಟ್ರಾವಿಸ್ ಹೆಡ್ 814 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಎರಡನೇ ಸ್ಥಾನಕ್ಕೆ ಕುಸಿದಿದ್ದಾರೆ. ಅಭಿಷೇಕ್ ಶರ್ಮಾ ಟಿ20 ಬ್ಯಾಟ್ಸ್‌ಮನ್ ಪಟ್ಟಿಯಲ್ಲಿ ನಂಬರ್ 1 ಸ್ಥಾನದಲ್ಲಿದ್ದರೆ, ಭಾರತದ ತಿಲಕ್ ವರ್ಮಾ ಮೂರನೇ ಸ್ಥಾನದಲ್ಲಿದ್ದಾರೆ. ಸೂರ್ಯಕುಮಾರ್ ಯಾದವ್ ಆರನೇ ಸ್ಥಾನದಲ್ಲಿದ್ದಾರೆ. ಆಸ್ಟ್ರೇಲಿಯಾದ ಜೋಶ್ ಇಂಗ್ಲಿಸ್ 6 ಬ್ಯಾಟ್ಸ್‌ಮನ್‌ಗಳನ್ನು ಹಿಂದಿಕ್ಕುವ ಮೂಲಕ ಟಾಪ್ 10 ಪಟ್ಟಿಗೆ ಪ್ರವೇಶಿಸಿದ್ದಾರೆ. ಅದೇ ಸಮಯದಲ್ಲಿ, ಭಾರತದ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ ಟಾಪ್ 10 ರಿಂದ ಹೊರಬಿದ್ದಿದ್ದು, 11 ನೇ ಸ್ಥಾನಕ್ಕೆ ಕುಸಿದಿದ್ದಾರೆ. ಅಭಿಷೇಕ್ ಶರ್ಮಾ ಇದುವರೆಗೆ ಟಿ20 ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದಾರೆ. ಆಡಿರುವ 16 ಇನ್ನಿಂಗ್ಸ್‌ಗಳಲ್ಲಿ 33.43 ಸರಾಸರಿಯಲ್ಲಿ 535 ರನ್ ಗಳಿಸಿದ್ದಾರೆ. ದೊಡ್ಡ ವಿಷಯವೆಂದರೆ ಅವರ ಸ್ಟ್ರೈಕ್ ರೇಟ್ ಸುಮಾರು 200 ರ ಆಸುಪಾಸಿನಲ್ಲಿದೆ. ಅಭಿಷೇಕ್ ಇದುವರೆಗೆ 2 ಶತಕಗಳು ಮತ್ತು 2 ಅರ್ಧಶತಕಗಳನ್ನು ಸಿಡಿಸಿದ್ದಾರೆ. ಇದರಲ್ಲಿ 41 ಸಿಕ್ಸರ್‌ಗಳು ಮತ್ತು 46 ಬೌಂಡರಿಗಳು ಸೇರಿವೆ. ಅಭಿಷೇಕ್ ಶರ್ಮಾ ಕಳೆದ ವರ್ಷ ಜುಲೈ 6 ರಂದು ಜಿಂಬಾಬ್ವೆ ವಿರುದ್ಧ ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದರು. ಮೊದಲ ಪಂದ್ಯದಲ್ಲಿ ಅವರು ತಮ್ಮ ಖಾತೆಯನ್ನು ತೆರೆಯಲು ಸಾಧ್ಯವಾಗಲಿಲ್ಲ ಆದರೆ ಮುಂದಿನ ಪಂದ್ಯದಲ್ಲಿ ಭರ್ಜರಿ ಶತಕ ಬಾರಿಸಿದರು. ಆ ಪಂದ್ಯದಲ್ಲಿ ಅಭಿಷೇಕ್ 8 ಸಿಕ್ಸರ್‌ಗಳನ್ನು ಬಾರಿಸಿದರು. ಈ ಶತಕದ ನಂತರ, ಅವರು ಸತತ 7 ಪಂದ್ಯಗಳಲ್ಲಿ ವಿಫಲರಾದರು.

**ಕ್ರಿಕೆಟ್‌ನಲ್ಲಿ ಅದ್ಭುತ ಪ್ರದರ್ಶನ**



# ದಾಖಲೆ ಬರೆಯಲು ಪಂತ್ ಕಾಯಬೇಕು!

ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿ ರಿಷಭ್ ಪಂತ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದರು. ಈ ಸರಣಿಯ 4 ಪಂದ್ಯಗಳಲ್ಲಿ ಬ್ಯಾಟ್ ಬೀಸಿದ್ದ ಪಂತ್ ಒಟ್ಟು 479 ರನ್ ಕಲೆಹಾಕಿದ್ದಾರೆ. ಈ ವೇಳೆ ಅವರ ಬ್ಯಾಟ್‌ನಿಂದ 2 ಶತಕಗಳು ಹಾಗೂ 3 ಅರ್ಧಶತಕಗಳು ಮೂಡಿಬಂದಿವೆ. ಅಲ್ಲದೆ 17 ಸಿಕ್ಸ್ ಹಾಗೂ 49 ಫೋರ್‌ಗಳನ್ನು ಸಹ ಬಾರಿಸಿದ್ದಾರೆ. ಭಾರತ ಮತ್ತು ಇಂಗ್ಲೆಂಡ್ ನಡುವಣ 5ನೇ ಟೆಸ್ಟ್ ಪಂದ್ಯದಿಂದ ಟೀಮ್ ಇಂಡಿಯಾದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ಹೊರಗುಳಿದಿದ್ದಾರೆ. ಮ್ಯಾಂಚೆಸ್ಟರ್‌ನಲ್ಲಿ ನಡೆದ 4ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಗಾಯಗೊಂಡಿದ್ದ ಪಂತ್‌ಗೆ ವೈದ್ಯರು 6 ವಾರಗಳ ಕಾಲ ವಿಶ್ರಾಂತಿ ಸೂಚಿಸಿದ್ದಾರೆ. ಹೀಗಾಗಿ ಐದನೇ ಪಂದ್ಯಕ್ಕೆ ಅವರು ಅಲಭ್ಯರಾಗಿದ್ದಾರೆ.



ಅತ್ತ ಕೊನೆಯ ಪಂದ್ಯದಿಂದ ಹೊರಗುಳಿದಿರುವ ರಿಷಭ್ ಪಂತ್ ಮತ್ತೆ ಟೆಸ್ಟ್ ಪಂದ್ಯವಾಡಲು ಅಕ್ಟೋಬರ್ ವರೆಗೆ ಕಾಯಲೇಬೇಕು. ಅಕ್ಟೋಬರ್ 2 ರಿಂದ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಣ 2 ಪಂದ್ಯಗಳ ಟೆಸ್ಟ್ ಸರಣಿ ಶುರುವಾಗಲಿದೆ. ಈ ಪಂದ್ಯಗಳಲ್ಲಿ ಕಣಕ್ಕಿಳಿಯುವ ಮೂಲಕ ಪಂತ್ ಭರ್ಜರಿ ದಾಖಲೆ ಬರೆಯಬಹುದು. ಅದು ಸಹ ವೀರೇಂದ್ರ ಸೆಹ್ವಾಗ್ ಅವರ ಸಿಕ್ಸರ್ ದಾಖಲೆಯನ್ನು ಸಿಡಿಸುವ ಮೂಲಕ..! ಹೌದು, ಟೀಮ್ ಇಂಡಿಯಾ ಪರ ಟೆಸ್ಟ್ ಕ್ರಿಕೆಟ್‌ನಲ್ಲಿ ಅತ್ಯಧಿಕ ಸಿಕ್ಸ್ ಸಿಡಿಸಿದ ದಾಖಲೆ ಡ್ಯಾಶಿಂಗ್ ಓಪನರ್ ವೀರೇಂದ್ರ ಸೆಹ್ವಾಗ್ ಹೆಸರಿನಲ್ಲಿದೆ. ಸೆಹ್ವಾಗ್ 178 ಇನಿಂಗ್ಸ್‌ಗಳಲ್ಲಿ 90 ಸಿಕ್ಸ್ ಸಿಡಿಸುವ ಮೂಲಕ ಈ ಭರ್ಜರಿ ದಾಖಲೆ ಬರೆದಿದ್ದಾರೆ. 12 ವರ್ಷಗಳ ಹಿಂದೆ ನಿರ್ಮಾಣವಾಗಿರುವ ಈ ದಾಖಲೆಯನ್ನು ಸರಿಗಟ್ಟುವಲ್ಲಿ ಕೊನೆಗೂ ರಿಷಭ್ ಪಂತ್ ಯಶಸ್ವಿಯಾಗಿದ್ದಾರೆ.
ಇಂಗ್ಲೆಂಡ್ ವಿರುದ್ಧದ 4 ಟೆಸ್ಟ್ ಪಂದ್ಯಗಳಲ್ಲಿ ರಿಷಭ್ ಪಂತ್ ಒಟ್ಟು 17 ಸಿಕ್ಸ್ ಸಿಡಿಸಿದ್ದಾರೆ. ಈ ಸಿಕ್ಸ್‌ಗಳೊಂದಿಗೆ ಇದೀಗ 82 ಇನಿಂಗ್ಸ್‌ಗಳ ಟೀಮ್ ಇಂಡಿಯಾ ಪರ ಒಟ್ಟು 90 ಸಿಕ್ಸ್ ಬಾರಿಸಿದ್ದಾರೆ. ರಿಷಭ್ ಪಂತ್ ಮುಂದಿನ ಟೆಸ್ಟ್ ಸರಣಿಯಲ್ಲಿ ಒಂದೇ ಒಂದು ಸಿಕ್ಸ್ ಸಿಡಿಸಿದರೆ ಟೆಸ್ಟ್‌ನಲ್ಲಿ ಭಾರತದ ಪರ ಅತ್ಯಧಿಕ ಸಿಕ್ಸ್ ಬಾರಿಸಿದ ಬ್ಯಾಟರ್ ಎನಿಸಿಕೊಳ್ಳಲಿದ್ದಾರೆ. ಈ ಒಂದು ಭರ್ಜರಿ ದಾಖಲೆಗಾಗಿ ರಿಷಭ್ ಪಂತ್ ಅಕ್ಟೋಬರ್ 2 ರವರೆಗೆ ಕಾಯಲೇಬೇಕು.

# ನಾಯಕ ಸೇರಿದಂತೆ ತಂಡದಲ್ಲಿ 4 ಬದಲಾವಣೆ

ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದನೇ ಮತ್ತು ಅಂತಿಮ ಟೆಸ್ಟ್ ಪಂದ್ಯಕ್ಕಾಗಿ ಇಂಗ್ಲೆಂಡ್ ತಂಡವು ನಾಲ್ಕು ಆಘಾತಕಾರಿ ಬದಲಾವಣೆಗಳನ್ನು ಮಾಡಿದೆ. ನಾಯಕ ಬೆನ್ ಸ್ಟೋಕ್ಸ್ ಗಾಯದಿಂದಾಗಿ ಹೊರಗುಳಿದಿದ್ದು, ಅವರ ಸ್ಥಾನವನ್ನು ಓಲಿ ಪೋಪ್ ವಹಿಸಲಿದ್ದಾರೆ. ಲಿಯಾಮ್ ಡಾಸನ್, ಜೋಫ್ರಾ ಆರ್ಚರ್ ಮತ್ತು ಬ್ರೈಡನ್ ಕಾರ್ಸ್ ಅವರನ್ನು ಕೈಬಿಡಲಾಗಿದೆ. ಜಾಕೋಬ್ ಬೆಥೆಲ್, ಗಸ್ ಅಟ್ಕಿನ್ಸನ್, ಮತ್ತು ಜೇಮಿ ಓವರ್ಟನ್ ಅವರು ತಂಡ ಸೇರಿದ್ದಾರೆ. ಭಾರತ ಮತ್ತು ಇಂಗ್ಲೆಂಡ್ ನಡುವೆ 5 ಪಂದ್ಯಗಳ ಟೆಸ್ಟ್ ಸರಣಿ ನಡೆಯುತ್ತಿದೆ. ಈ ಸರಣಿಯ ಕೊನೆಯ ಪಂದ್ಯ ಜುಲೈ 31 ರಿಂದ ಲಂಡನ್‌ನ ಕೆನ್ನಿಂಗ್ಟನ್ ಓವಲ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಉಭಯ ತಂಡಗಳ ನಡುವೆ ಇದುವರೆಗೆ ನಡೆದಿರುವ 4 ಪಂದ್ಯಗಳಲ್ಲಿ ಇಂಗ್ಲೆಂಡ್ ತಂಡ 2-1 ಅಂತರದಿಂದ ಮುನ್ನಡೆ ಸಾಧಿಸಿದೆ. ಹೀಗಾಗಿ ಈ ಪಂದ್ಯವನ್ನು ಗೆದ್ದರೆ, ಸರಣಿ ಇಂಗ್ಲೆಂಡ್ ಪಾಲಾಗಲಿದೆ. ಇತ್ತ ಈ ಪಂದ್ಯವನ್ನು ಭಾರತ ಗೆದ್ದರೆ ಸರಣಿ 2-2 ರಿಂದ ಸಮಬಲದೊಂದಿಗೆ ಅಂತ್ಯಗೊಳ್ಳಲಿದೆ. ಹೀಗಾಗಿ ಉಭಯ ತಂಡಗಳು ಗೆಲ್ಲಲೇಬೇಕಾದ ಒತ್ತಡದಲ್ಲಿವೆ. ಈ ನಡುವೆ ಈ ನಿರ್ಣಾಯಕ ಟೆಸ್ಟ್ ಪಂದ್ಯಕ್ಕೆ ಆತಿಥೇಯ ಇಂಗ್ಲೆಂಡ್ ತನ್ನ ಆಡುವ ಹನ್ನೊಂದರ ಬಳಗವನ್ನು ಘೋಷಿಸಿದೆ. ಅಚ್ಚರಿಯ ಸಂಗತಿಯೆಂದರೆ ಇಡೀ ಸರಣಿಯಲ್ಲಿ ಕೇವಲ ಒಂದೊಂದು ಬದಲಾವಣೆಗಳನ್ನು ಮಾಡಿದ್ದ ಇಂಗ್ಲೆಂಡ್, ಅಂತಿಮ ಟೆಸ್ಟ್ ಪಂದ್ಯಕ್ಕೆ ತನ್ನ ಪ್ಲೇಯಿಂಗ್ 11ನಲ್ಲಿ ಒಟ್ಟು 4 ಬದಲಾವಣೆಗಳನ್ನು ಮಾಡಿದೆ. ಆಶ್ಚರ್ಯಕರ ಸಂಗತಿಯೆಂದರೆ ತಂಡದ ನಾಯಕ ಕೂಡ ಬದಲಾಗಿದ್ದಾನೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966